ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 178 ಸಂಚಿಕೆ- 178 | PAGE-8 ಪುಟ-8 | ಮಂಗಳವಾರ 26.08.2025 | RS.2/- ಬೆಲೆ 2/-

## ಮಾರಕಾಸ್ತ್ರಗಳಿಂದ ಹೊಡೆದು ಯುವಕನ ಕೊಲೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಆ.25-ಮಾರಕಾಸ್ತ್ರಗಳಿಂದ ಹೊಡೆದು ಯುವಕನೊಬ್ಬನನ್ನು ಕೊಲೆ ಮಾಡಿರುವ ಘಟನೆ ನಗರದ ಹೀರಾಪುರ ಸ್ಮಶಾನ ಭೂಮಿ ಹತ್ತಿರ ಭಾನುವಾರ ರಾತ್ರಿ ನಡೆದಿದೆ.ಮೈನಾಳ ಗ್ರಾಮದ ಮರೆಪ್ಪ ಭೀಮರಾಯ ಕಟ್ಟಿಮನಿ (23) ಕೊಲೆಯಾದವರು. ಕೊಲೆಯಾದ ಮರೆಪ್ಪ ಹೀರಾಪುರದಲ್ಲಿ ಮನೆ ಮಾಡಿಕೊಂಡಿದ್ದ. ಇಟ್ಟಂಗಿ ಭಟ್ಟಿಯಲ್ಲಿ ಮತ್ತು ಚಾಲಕನಾಗಿ ಕೆಲಸ ಮಾಡುತ್ತಿದ್ದ ಎಂದು ತಿಳಿದುಬಂದಿದ್ದು, ಕೊಲೆಗೆ ಕಾರಣ ತಿಳಿದುಬಂದಿಲ್ಲ. ಸುದ್ದಿ ತಿಳಿದು ಅಶೋಕನಗರ ಪೊಲೀಸ್ ಠಾಣೆ ಪಿಐ ಅರುಣಕುಮಾರ ಮತ್ತು ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಎನ್‌ಐಎ ತನಿಖೆ ಅಗತ್ಯವಿಲ್ಲ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು,ಆ.25:ಧರ್ಮಸ್ಥಳ ಪ್ರಕರಣದ ತನಿಖೆಯನ್ನು ಎನ್‌ಐಎಗೆ ವಹಿಸಬೇಕು ಎಂಬ ಪ್ರತಿಪಕ್ಷಗಳ ಬೇಡಿಕೆಯನ್ನು ತಳ್ಳಿ ಹಾಕಿರುವ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಎನ್‌ಐಎ ತನಿಖೆ ಅಗತ್ಯವಿಲ್ಲ. ಎಸ್‌ಐಟಿ ತನಿಖೆಯಿಂದಲೇ ಸತ್ಯ ಹೊರ ಬರಲಿದೆ ಎಂದಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಧರ್ಮಸ್ಥಳ ಪ್ರಕರಣದ ತನಿಖೆ ಮುಗಿಯುವ ಹಂತಕ್ಕೆ ಬಂದಿದೆ. ಈ ಹಂತದಲ್ಲಿ ಎನ್‌ಐಎ, ಸಿಬಿಐ ತನಿಖೆ ಬೇಕಿಲ್ಲ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಧರ್ಮಸ್ಥಳ ಪ್ರಕರಣದ ತನಿಖೆ ನನ್ನ ಪ್ರಕಾರ ಶೇ. 90ರಷ್ಟು ಮುಗಿದಿದೆ. ಹೀಗಿರುವಾಗ ಬೇರೆ ತನಿಖೆ ಅಗತ್ಯವಿಲ್ಲ. ನಮ್ಮ ಪೊಲೀಸರೇ ತನಿಖೆಗೆ ಸಮರ್ಥರಿದ್ದಾರೆ ಎಂದು ಹೇಳಿದರು.

ಧರ್ಮಸ್ಥಳ ಪ್ರಕರಣದ ಬಗ್ಗೆ ನಮ್ಮ ಸರ್ಕಾರ ಒಂದು ತೀರ್ಮಾನಕ್ಕೆ ಗೊಂಡು ಎಸ್‌ಐಟಿ ತನಿಖೆ ನಡೆಸಿದ್ದರಿಂದ ಎಲ್ಲವೂ ಒಂದು ಹಂತಕ್ಕೆ ಬಂದಿದೆ. ಹೀಗಿರುವಾಗ ಎನ್‌ಐಎ, ಸಿಬಿಐ ತನಿಖೆ ಅಗತ್ಯವಿಲ್ಲ ಎಂದು ಅವರು ಪುನರುಚ್ಚರಿಸಿದರು.

# ಎಷ್ಟೇ ಒತ್ತಡ ಬಂದ್ರೂ ತಡೆದುಕೊಳ್ಳುವ ಶಕ್ತಿ ನಮಗಿದೆ
# ಟ್ರಂಪ್‌ಗೆ ಮೋದಿ ಖಡಕ್ ಸಂದೇಶ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.25: ಎಷ್ಟೇ ಒತ್ತಡ ಬಂದ್ರೂ ತಡೆದುಕೊಳ್ಳುವ ಶಕ್ತಿ ನಮಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಟ್ರಂಪ್‌ಗೆ ಖಡಕ್ ಸಂದೇಶ ನೀಡಿದ್ದಾರೆ.

ರಷ್ಯಾದಿಂದ ತೈಲ ಖರೀದಿಸುತ್ತಿರುವ ಕಾರಣಕ್ಕೆ ಭಾರತದ ಮೇಲೆ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿಧಿಸಿರುವ ಶೇ.50ರಷ್ಟು ಸುಂಕ ಅಧಿಕೃತವಾಗಿ ಜಾರಿಯಾಗಲು ಇನ್ನೆರಡು ದಿನ ಬಾಕಿ ಇದೆ (ಇಂದು ಸೇರಿದಂತೆ). ಆದ್ರೆ ಗಡುವು ಮೀರುವ ಮುನ್ನವೇ ಪ್ರಧಾನಿ ನರೇಂದ್ರ ಮೋದಿ , ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಖಡಕ್ ಸಂದೇಶ ಕೊಟ್ಟಿದ್ದಾರೆ.

ಅಹಮದಾಬಾದ್ ನಲ್ಲಿ ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, "ಇಂದು ಜಗತ್ತಿನಲ್ಲಿ ಆರ್ಥಿಕ ಸ್ವಾರ್ಥವನ್ನು ಆಧರಿಸಿದ ನೀತಿಗಳನ್ನು ನಾವೆಲ್ಲರೂ ನೋಡುತ್ತಿದ್ದೇವೆ. ಅಂತಹ ರಕ್ಷಣಾ ಕ್ರಮಗಳ ವಿರುದ್ಧ ಭಾರತ ದೃಢವಾಗಿ ನಿಲ್ಲುತ್ತದೆ. ತನ್ನ ನಾಗರಿಕರ ಹಿತಾಸಕ್ತಿಗಳಿಗೆ ಆದ್ಯತೆ ನೀಡುತ್ತದೆ ಎಂದು ಅವರು ರಾಷ್ಟ್ರಕ್ಕೆ ಭರವಸೆ ನೀಡಿದರು.

ಎಷ್ಟೇ ಒತ್ತಡ ಬಂದರೂ, ಅದನ್ನ ತಡೆದುಕೊಳ್ಳುವ ಶಕ್ತಿ ಬೆಳೆಸಿಕೊಂಡಿದ್ದೇವೆ. ನಮ್ಮ ದೇಶದ ಸಣ್ಣ ಉದ್ಯಮಿಗಳು, ರೈತರಿಗೆ ನಾನು ಭರವಸೆ ಕೊಡ್ತೇನೆ. ಈ ಮೋದಿಗೆ ನಿಮ್ಮ ಹಿತಾಸಕ್ತಿಗಳೇ ಮುಖ್ಯ. ನನ್ನ ಸರ್ಕಾರವು ಸಣ್ಣ ಉದ್ಯಮಿಗಳು, ರೈತರು ಮತ್ತು ಜಾನುವಾರು ಮಾಲೀಕರಿಗೆ ತೆ-ಗೊಂದರೆ ಮಾಡಲು ಎಂದಿಗೂ ಅವಕಾಶ ಕೊಡಲ್ಲ. ಎಷ್ಟೇ ಒತ್ತಡ ಬಂದರೂ ಅದನ್ನು ತಡೆದು ಪರಿಹಾರ ಕಂಡುಕೊಳ್ಳುವ ಹಾಗೂ ನಮ್ಮ ಶಕ್ತಿ ಹೆಚ್ಚಿಸಿಕೊಳ್ಳುತ್ತೇವೆ ಎಂದು ಮೋದಿ ಗುಡುಗಿದ್ದಾರೆ.

ಆತ್ಮನಿರ್ಭರ ಭಾರತ' ಅಭಿಯಾನವು ಗುಜರಾತ್‌ನಿಂದ ಸಾಕಷ್ಟು ಶಕ್ತಿಯನ್ನ



ಪಡೆಯುತ್ತಿದೆ. ಪ್ರತಿದಿನ ಇಲ್ಲಿ ಕರ್ಫ್ಯೂ ವಿಧಿಸಲಾಗುತ್ತಿತ್ತು. ಆದ್ರೆ ಆ ದಿನಗಳನ್ನ ಇಂದಿನ ಯುವ ಪೀಳಿಗೆ ನೋಡಿಲ್ಲ. ಇಲ್ಲಿ ವ್ಯಾಪಾರ ಮಾಡುವುದೂ ಕಷ್ಟಕರವಾಗಿತ್ತು. ಆದರಿಂದು ಅಹಮದಾಬಾದ್ ದೇಶದ ಸುರಕ್ಷಿತ ನಗರಗಳಲ್ಲಿ ಒಂದಾಗಿದೆ. ಇದರ ಹಿಂದೆ 2 ದಶಕಗಳ ಕಠಿಣ ಪರಿಶ್ರಮವಿದೆ ಎಂದು ಬಣ್ಣಿಸಿದರು. ಗುಜರಾತ್‌ನಲ್ಲಿ ಶಾಂತಿ ಮತ್ತು ಭದ್ರತೆಯ ವಾತಾವರಣವು ಉತ್ತಮ ಫಲಿತಾಂಶ ಕೊಡುತ್ತಿರುವುದನ್ನು ನಾವು ನೋಡ್ತಿದ್ದೇವೆ. ನಮ್ಮ ರಾಜ್ಯವು ಉತ್ಪಾದನಾ ಕೇಂದ್ರವಾಗಿ ಮಾರ್ಪಟ್ಟಿರುವುದನ್ನ ನೋಡಿ ಇಡೀ ಗುಜರಾತ್ ಹೆಮ್ಮೆಪಡುತ್ತದೆ ಎಂದು ಶ್ಲಾಘಿಸಿದರು. ಸಣ್ಣ ಅಂಗಡಿಯವರು, ರೈತರು, ಜಾನುವಾರು ಸಾಕಣೆದಾರರು ಮತ್ತು ಸಣ್ಣ ಉದ್ಯಮಿಗಳನ್ನು ಉದ್ದೇಶಿಸಿ ಮಾತನಾಡಿದ ಮೋದಿ, "ಗಾಂಧಿ ನೆಲದಿಂದ ನಾನು ಮತ್ತೆ ಮತ್ತೆ ಭರವಸೆ ನೀಡುತ್ತೇನೆ. ಮೋದಿಯವರಿಗೆ ನಿಮ್ಮ ಹಿತಾಸಕ್ತಿಯೇ ಮುಖ್ಯ, ನನ್ನ ಸರ್ಕಾರವು ಸಣ್ಣ ಉದ್ಯಮಿಗಳು, ಜಾನುವಾರು ಸಾಕಣೆದಾರರು ಅಥವಾ ರೈತರಿಗೆ ಯಾವುದೇ ಹಾನಿ ಮಾಡಲು ಎಂದಿಗೂ ಬಿಡುವುದಿಲ್ಲ" ಎಂದು ಘೋಷಿಸಿದರು. ಈ ವರ್ಷದ ಆಗಸ್ಟ್‌ನಲ್ಲಿ ಟ್ರಂಪ್ ಆಡಳಿತವು ಭಾರತೀಯ ರಫ್ತು ಸರಕುಗಳ ಮೇಲೆ ಶೇ. 25 ರಷ್ಟು ಹೆಚ್ಚುವರಿ ಸುಂಕ ವಿಧಿಸಿತ್ತು. ತದನಂತರ ಭಾರತ ರಷ್ಯಾದಿಂದ ತೈಲ ಖರೀದಿಸುತ್ತಿದೆ ಎಂಬ ಕಾರಣಕ್ಕೆ ಒಟ್ಟಾರೇ ಶೇ. 50 ರಷ್ಟು ಸುಂಕವನ್ನು ಹೇರಿದೆ.

ಬಿಟಿಎ ಮೇಲೆ ಅನುಮಾನ: ಈ ಅನಿರೀಕ್ಷಿತ ಕ್ರಮ ಭಾರತದಲ್ಲಿನ ವ್ಯಾಪಾರ ಮಾತುಕತೆಯನ್ನು ಮುಂದೂಡಿದೆ. ಸೆಪ್ಟೆಂಬರ್-ಅಕ್ಟೋಬರ್ ಆಸುಪಾಸಿನಲ್ಲಿ ನಿರೀಕ್ಷಿಸಲಾಗಿದ್ದ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಮೇಲೆ ಅನುಮಾನ ಉಂಟಾಗಿದೆ.

ಟ್ರಂಪ್ ಘೋಷಿಸಿದ ಈ ಕ್ರಮವು ಭಾರತೀಯ ನಾಯಕರು ಮತ್ತು ವ್ಯಾಪಾರ ಸಮುದಾಯಗಳಿಂದ ತೀಕ್ಷ್ಣವಾದ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಅಮೆರಿಕದಿಂದ ಹೆಚ್ಚುತ್ತಿರುವ ಒತ್ತಡದ ಹೊರತಾಗಿಯೂ, ಗಖ, ಇಗ, ಇಈಖಂ ಮತ್ತು ಂಖಇಂಓ ಸೇರಿದಂತೆ ಮತ್ತಿತರ ರಾಷ್ಟ್ರಗಳೊಂದಿಗೆ ಭಾರತ ವ್ಯಾಪಾರ ಮಾತುಕತೆ ಮುಂದುವರೆಸಿದೆ. ಅಮೆರಿಕದೊಂದಿಗೆ ಇಂಧನ ಸಂಬಂಧ ಬಲಪಡಿಸುವ ಮೂಲಕ ಮತ್ತು ಸಕ್ರಿಯ ಮಾತುಕತೆ ಮೂಲಕ ಸುಂಕ ವಿಚಾರವಾಗಿ ಪ್ರಸ್ತುತವಾಗಿ ಉಂಟಾಗಿರುವ ಬಿಕ್ಕಟ್ಟು ಶಮನಗೊಳಿಸಲು ಭಾರತವೂ ಪ್ರಯತ್ನಿಸುತ್ತಿದೆ.

## ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಆಯ್ಕೆ: ಬಿಜೆಪಿ-ಕಾಂಗ್ರೆಸ್ ಜಟಾಪಟಿ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.25: ಮೈಸೂರು ದಸರಾ ಉದ್ಘಾಟನೆಗೆ ಸಿಎಂ ಸಿದ್ದರಾಮಯ್ಯ ಅವರು ಬುಕರ್ ಪ್ರಶಸ್ತಿ ವಿಜೇತ ಲೇಖಕಿ ಬಾನು ಮುಷ್ತಾಕ್ ಅವರ ಹೆಸರನ್ನು ಘೋಷಿಸಿದ ಬೆನ್ನಲ್ಲೇ ಬಿಜೆಪಿ ಹಾಗೂ ಕಾಂಗ್ರೆಸ್ ನಾಯಕರ ಮಧ್ಯೆ ರಾಜಕೀಯ ಜಟಾಪಟಿ ಶುರುವಾಗಿದ್ದು, ಕಮಲ ಪಾಳಯ ಬಾನು ಅವರ ಹೆಸರಿಗೆ ಆಕ್ಷೇಪ ವ್ಯಕ್ತಪಡಿಸಿದೆ. ಉಡುಪಿ ಶಾಸಕ ಯಶ್ಪಾಲ್ ಸುವರ್ಣ ಅವರು ಮಾತನಾಡಿ, ಸಿದ್ದರಾಮಯ್ಯ ಸರ್ಕಾರ ಹಿಂದೂ ಧರ್ಮದಲ್ಲಿ ನಂಬಿಕೆಯಿಲ್ಲದ ಅಲ್ಪಸಂಖ್ಯಾತ ಸಮುದಾಯದ ಮಹಿಳೆಯನ್ನು ಆಯ್ಕೆ ಮಾಡಿದೆ. ಬಾನು ಅವರನ್ನು ಆಯ್ಕೆ ಮಾಡುವ ಮೂಲಕ ಸರ್ಕಾರ ಹಿಂದೂಗಳ ಭಾವನೆಗಳೊಂದಿಗೆ ಆಟವಾಡುತ್ತಿದೆ ಎಂದು ಕಿಡಿಕಾರಿದ್ದಾರೆ. ಮೈಸೂರಲ್ಲಿ ಮಾತನಾಡಿದ ಮಾಜಿ ಸಂಸದ ಪ್ರತಾಪ್ ಸಿಂಹ , ಬಾನು ಮುಷ್ತಾಕ್ ಬಗ್ಗೆ ಹೆಮ್ಮೆ ಇದೆ. ಆದರೆ, ದಸರಾ ಜಾತ್ಯಾತೀತತೆ ಪ್ರತೀಕಲ್ಲ. ಹಿಂದೂ ಆಚರಣೆ ಯಾಗಿದ್ದು, ಮುಸ್ತಾಕ್ ಅವರಿಗೆ ಚಾಮುಂಡೇಶ್ವರಿ ದೇವಿಯ ಮೇಲೆ ನಂಬಿಕೆ ಇದಿಯಾ? ಅಲ್ಲಾ ಬಿಟ್ಟರೆ ಬೇರೆ ದೇವರಿಲ್ಲ ಎನ್ನುತ್ತದೆ ಇಸ್ಲಾಂ. ಹಾಗಾದರೆ ಬಾನು ಚಾಮುಂಡಿಯನ್ನು ದೇವರು ಎಂದು ಒಪ್ಪುತ್ತಾರೆಯೇ ಎಂದು ಕಿಡಿಕಾರಿದ್ದಾರೆ. ಇನ್ನು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಅವರು, ಪೂಜೆಯನ್ನು ಧಿಕ್ಕರಿಸಿರುವ ಇಸ್ಲಾಂಗೆ ಸೇರಿದ ಬಾನು ಅವರು ದೇವಿಗೆ ದೀಪ ಬೆಳಗಿಸುವುದು ಅವರ ಧಾರ್ಮಿಕ ನಂಬಿಕೆಗಳಿಗೆ ವಿರುದ್ಧವಾಗಿದೆ ಎಂದು ಹೇಳಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿದ ಸಚಿವ ಸಂತೋಷ್ ಲಾಡ್ ಅವರು, ಬಾನುರನ್ನು ದಸರಾ ಉದ್ಘಾಟನೆಗೆ ಕರೆಯಬಾರದೆಂದು ಸಂವಿಧಾನದಲ್ಲಿ ಇದೆಯೇ? ಎಲ್ಲದಕ್ಕೂ ಆಕ್ಷೇಪ ಸರಿಯಲ್ಲ. ಸರ್ಕಾರದ ತೀರ್ಮಾನ ಗೌರವಿಸಬೇಕು ಎಂದು ತಿಳಿಸಿದ್ದಾರೆ. ವಿರೋಧ ಬೆನ್ನಲ್ಲೇ ಪ್ರತಿಕ್ರಿಯೆ ನೀಡಿರುವ ಬಾನು

(2ನೇ ಪುಟ ನೋಡಿ)

## ಬೆಳೆ ಸಮೀಕ್ಷೆ ವರದಿ ಸಲ್ಲಿಕೆಗೆ ಸೂಚನೆ



ಮಲ್ಲಮ್ಮನುಡಿವಾರ್ತೆ ಹುಮನಾಬಾದ :ಅ.25:ತಾಲೂಕಿನಲ್ಲಿ ಕೆಲದಿನಗಳಿಂದ ಸುರಿದ ಧಾರಕಾರ ಮಳೆಗೆ ರೈತರು ಬೆಳೆದ ಬೆಳೆ ಹಾನಿಗೀಡಾದ ಹೊಲಗಳಿಗೆ ಸೋಮವಾರ ವಿಧಾನ ಪರಿಷತ್

(2ನೇ ಪುಟ ನೋಡಿ)

## ಮೋದಿ ಪದವಿಯ ವಿವರ ಬಹಿರಂಗಪಡಿಸುವ ಅಗತ್ಯವಿಲ್ಲ: ದೆಹಲಿ ಹೈಕೋರ್ಟ್

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.25:ಪ್ರಧಾನಿ ನರೇಂದ್ರ ಮೋದಿಯವರ ಪದವಿಯ ವಿವರಗಳನ್ನು ಬಹಿರಂಗಪಡಿಸುವ ಅವಶ್ಯಕತೆ ಇಲ್ಲ ಎಂದು ದೆಹಲಿ ಹೈಕೋರ್ಟ್ ತೀರ್ಪು ನೀಡಿದೆ. ಇದೇ ವೇಳೆ ಮಾಹಿತಿ ಬಿಡುಗಡೆಗೆ ನಿರ್ದೇಶನ ನೀಡಿದ್ದ ಕೇಂದ್ರ ಮಾಹಿತಿ ಆಯೋಗದ ಆದೇಶವನ್ನು ರದ್ದುಗೊಳಿಸಿದೆ.2016 ರಲ್ಲಿ ಕೇಂದ್ರ ಮಾಹಿತಿ ಆಯೋಗ 1978 ರಲ್ಲಿ ದೆಹಲಿ ವಿವಿಯಲ್ಲಿ ಬಿಎ ಪರೀಕ್ಷೆಯಲ್ಲಿ ಉತ್ತೀರ್ಣರಾದ ಎಲ್ಲಾ ವಿದ್ಯಾರ್ಥಿಗಳ ದಾಖಲೆಗಳನ್ನು ಪರಿಶೀಲಿಸಲು ಅವಕಾಶ ನೀಡಿತ್ತು. ಇದೇ ಅವಧಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಕೂಡ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆಂದು ಹೇಳಲಾಗಿತ್ತು. ದೆಹಲಿ ವಿಶ್ವವಿದ್ಯಾಲಯವು ಸಿಐಸಿ ಆದೇಶವನ್ನು ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿತ್ತು.

ಸೋಮವಾರ ತನ್ನ ಅಂತಿಮ ತೀರ್ಪು ಪ್ರಕಟಿಸಿದ ನ್ಯಾಯಮೂರ್ತಿ ಸಚಿನ್ ದತ್ತಾ ಅವರಿದ್ದ

ಪೀಠ, ವೈಯಕ್ತಿಕ ಮಾಹಿತಿಯ ಬಹಿರಂಗಗೊಳಿಸುವಿಕೆಯು ಗೌಪ್ಯತೆಯ ಹಕ್ಕನ್ನು ಉಲ್ಲಂಘಿಸಬಹುದು ಎಂದು ಹೇಳಿದೆ. ಈ ಸಂದರ್ಭದಲ್ಲಿ, ಮಾಹಿತಿ ಬಹಿರಂಗಗೊಳಿಸುವುದು ಸಾರ್ವಜನಿಕ ಹಿತಾಸಕ್ತಿಗೆ ಸಂಬಂಧಿಸಿಲ್ಲ ಎಂದು ಕೋರ್ಟ್ ಒತ್ತಿ ಹೇಳಿದೆ.

## ಪ.ಜಾತಿ,ಪಂಗಡ ದೌರ್ಜನ್ಯ ಪ್ರಕರಣ: 60 ದಿನದಲ್ಲಿ ಚಾರ್ಜ್ ಶೀಟ್ ಸಲ್ಲಿಸುವಂತೆ ಅಧಿಕಾರಿಗಳಿಗೆ ಸಿಎಂ ಸೂಚನೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:.25: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ 60 ದಿನಗಳ ಒಳಗಾಗಿ ಚಾರ್ಜ್ ಶೀಟ್ ಅನ್ನು ನ್ಯಾಯಾಲಯಕ್ಕೆ ಸಲ್ಲಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಇಂದು ತಮ್ಮ ಅಧ್ಯಕ್ಷತೆಯಲ್ಲಿ ನಡೆದ ಪರಿಶಿಷ್ಟ ಜಾತಿ/

(2ನೇ ಪುಟ ನೋಡಿ)

## ನಮ್ಮ ಸೈನಿಕರು ಉಗ್ರರನ್ನು ಧರ್ಮದ ಆಧಾರದಲ್ಲಿ ಕೊಂದಿಲ್ಲ: ರಾಜನಾಥ್ ಸಿಂಗ್



ಮಲ್ಲಮ್ಮ ನುಡಿ ವಾರ್ತೆ ಜೋಧಪುರ:ಅ.25: ಆಪರೇಷನ್ ಸಿಂಧೂರ್ ಸಮಯದಲ್ಲಿ ಭಾರತೀಯ ಸೇನಾಪಡೆಗಳು ಪಾಕಿಸ್ತಾನಕ್ಕೆ "ತಕ್ಕ ಪ್ರತ್ಯುತ್ತರ" ನೀಡಿವೆ ಮತ್ತು "ನಮ್ಮ ಸೈನಿಕರು ಭಯೋತ್ಪಾದಕರನ್ನು ಅವರ ಧರ್ಮದ ಆಧಾರದ ಮೇಲೆ ಕೊಂದಿಲ್ಲ, ಬದಲಿಗೆ ಅವರ ಅಮಾನವೀಯ ಕೃತ್ಯಕ್ಕಾಗಿ ಕೊಂದಿದ್ದಾರೆ" ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸೋಮವಾರ ಹೇಳಿದ್ದಾರೆ. ಇಂದು ಜೋಧಪುರದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ರಾಜನಾಥ್ ಸಿಂಗ್, ಪಹಲ್ಗಾಮ್ ಭಯೋತ್ಪಾದಕ ದಾಳಿಯ ಸೇಡು ತೀರಿಸಿಕೊಳ್ಳಲು ನಡೆದ ಮಿಲಿಟರಿ ಕಾರ್ಯಾಚರಣೆಯ ಸಮಯದಲ್ಲಿ ಆಡಳಿತ ಮತ್ತು ಸಶಸ್ತ್ರ ಪಡೆಗಳನ್ನು ಬೆಂಬಲಿಸಿದ್ದಕ್ಕಾಗಿ ಗಡಿ ಪ್ರದೇಶಗಳ ಜನರನ್ನು ಶ್ಲಾಘಿಸಿದರು.

"ಪಹಲ್ಗಾಮ್

(2ನೇ ಪುಟ ನೋಡಿ)

## ರಾಹುಲ್ ಗಾಂಧಿ 'ಮತ ಅಧಿಕಾರ ಯಾತ್ರೆ' ದೇಶದ ಪಾಲಿನ ಗೇಮ್ ಚೇಂಜರ್: ಡಿ.ಕೆ ಶಿವಕುಮಾರ್



ಮಲ್ಲಮ್ಮ ನುಡಿ ವಾರ್ತೆ ಪಟ್ನಾ:ಅ.25: ರಾಹುಲ್ ಗಾಂಧಿ ಅವರು ಕರ್ನಾಟಕದಿಂದ ಬಿಹಾರದವರೆಗೆ ಧ್ವನಿ ಎತ್ತಿರುವ ವಿಚಾರದ ಬಗ್ಗೆ ಇಡೀ ದೇಶವೇ ಚರ್ಚಿಸುತ್ತಿದೆ. ಅವರ ನೇತೃತ್ವದಲ್ಲಿ ಬಿಹಾರದಲ್ಲಿ ನಡೆಯುತ್ತಿರುವ 'ವೋಟ್ ಅಧಿಕಾರ ಯಾತ್ರೆ' ದೇಶದ ಪಾಲಿಗೆ ಗೇಮ್ ಚೇಂಜರ್ ಆಗಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಭಾನುವಾರ ಹೇಳಿದರು.

ರಾಹುಲ್ ಗಾಂಧಿ ನೇತೃತ್ವದಲ್ಲಿ ಬಿಹಾರದಲ್ಲಿ ನಡೆಯುತ್ತಿರುವ 'ಮತ ಅಧಿಕಾರ ಯಾತ್ರೆ'ಯಲ್ಲಿ ಭಾಗವಹಿಸಿರುವ ಅವರು, ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದರು.

ಬಿಹಾರದಲ್ಲಿ ನಡೆದ ಯಾತ್ರೆ

(2ನೇ ಪುಟ ನೋಡಿ)

## ಮೈಸೂರಿನ ಮಧುಸೂದನ್‌ಗೆ ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿ

ಮಲ್ಲಮ್ಮನುಡಿವಾರ್ತೆ ನವದೆಹಲಿ:ಅ.25: ಸೆಪ್ಟೆಂಬರ್ 5ರ ಶಿಕ್ಷಕರ ದಿನಾಚರಣೆ ಹಿನ್ನೆಲೆ ಕೇಂದ್ರ ಶಿಕ್ಷಣ ಸಚಿವಾಲಯವು ಪ್ರಸಕ್ತ ವರ್ಷದಲ್ಲಿ ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿರುವ 45 ಶಿಕ್ಷಕರ ಪಟ್ಟಿಯನ್ನು ಪ್ರಕಟಿಸಿದೆ.

ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆಯಾದ 45 ಶಿಕ್ಷಕರ ಪೈಕಿ ಕರ್ನಾಟಕದಿಂದ ಮೈಸೂರಿನ ಶಿಕ್ಷಕರು ಕೂಡ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಮೈಸೂರಿನ ಹಿನಕಲ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹಾಯಕ ವಿಜ್ಞಾನ ಶಿಕ್ಷಕರಾಗಿರುವ ಕೆ.ಎಸ್ ಮಧುಸೂದನ್ ಅವರಿಗೆ ಈ ವರ್ಷದ ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿ ಒಲಿದುಬಂದಿದೆ. ಸೆಪ್ಟೆಂಬರ್ 5ರಂದು ದೆಹಲಿಯ ವಿಜ್ಞಾನ ಭವನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಧುಸೂದನ್ ಸೇರಿದಂತೆ ಒಟ್ಟು 45 ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಪ್ರಶಸ್ತಿಯು ಪ್ರಮಾಣಪತ್ರ, 50 ಸಾವಿರ ರೂ. ನಗದು ಹಾಗೂ ಬೆಳ್ಳಿಯ ಪದಕವನ್ನು ಒಳಗೊಂಡಿದೆ.

## ವಚನ ವಿಶ್ವವಿದ್ಯಾಲಯದ ಕನಸು ಕಂಡ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ ಕಾರ್ಯ ಶ್ಲಾಘನೀಯ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.25:ಮಹಾತ್ಮರಿಗೆ ಅಮೃತ ಮಹೋತ್ಸವ ಸೇರಿದಂತೆ ಯಾವುದೇ ಮಹೋತ್ಸವ ಬೇಕಾಗಿಲ್ಲ. ಆದರೆ ಅವರ ಸಾಧನೆಯನ್ನು ಅರಿತು ನಮ್ಮ ಬದುಕು ಸಾರ್ಥಕ ಮಾಡಿಕೊಳ್ಳಲು ಅವು ನಮಗೆ ಬೇಕಾಗಿವೆ ಎಂದು ನಿವೃತ್ತ ನ್ಯಾಯಮೂರ್ತಿ ಶಿವರಾಜ ಪಾಟೀಲ ಅಭಿಪ್ರಾಯಪಟ್ಟರು.

ಪಟ್ಟಣದ ಚನ್ನಬಸವಾಶ್ರಮದಲ್ಲಿ ಸೋಮವಾರ ನಡೆದ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ 75ನೇ ಜನ್ಮದಿನದ ನಿಮಿತ್ಯ ಆಯೋಜಿಸಿದ್ದ ಅಮೃತ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

(2ನೇ ಪುಟ ನೋಡಿ)

## ರಾಜ್ಯದಲ್ಲಿ ಪ್ರತಿ ವರ್ಷ 2,000ಕ್ಕೂ ಹೆಚ್ಚು ಮಕ್ಕಳು ನಾಪತ್ತೆ: ರಾಜ್ಯಪಾಲರ ಕಳವಳ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.25:ಸರ್ಕಾರಿ ಅಂಕಿ ಅಂಶಗಳ ಪ್ರಕಾರ, ಕರ್ನಾಟಕದಲ್ಲಿ ಪ್ರತಿ ವರ್ಷ 2,000ಕ್ಕೂ ಹೆಚ್ಚು ಮಕ್ಕಳು ಕಾಣೆಯಾಗುತ್ತಿರುವ ಬಗ್ಗೆ ವರದಿಯಾಗಿರುವುದಾಗಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸೋಮವಾರ ಕಳವಳ ವ್ಯಕ್ತಪಡಿಸಿದ್ದಾರೆ.

ರಾಜಭವನದಲ್ಲಿ ಭಾರತೀಯ ನರ್ಸ್‌ಗಳು ಮತ್ತು ಅಲೈಡ್

(2ನೇ ಪುಟ ನೋಡಿ)



## ಒಂದನೇ ಪುಟದಿಂದ

## ಡಾ. ಬಸವಲಿಂಗ ಪಟ್ಟದ್ದೇವರ ಕಾರ್ಯ ಶ್ಲಾಘನೀಯ

ಅಮೃತ ಮಹೋತ್ಸವ ಸಮಾರಂಭ ನಮಗೆ ಬೇಕು. ಮಕ್ಕಳೇ ದೇಶದ ದೊಡ್ಡ ಸಂಪತ್ತು, ಎನ್ನುವ ವಿಚಾರದಿಂದ ಡಾ. ಬಸವಲಿಂಗ ಪಟ್ಟದ್ದೇವರು ತಮ್ಮ ಜನ್ಮದಿನೋತ್ಸವವನ್ನು ಸುದೈವಿ ಮಕ್ಕಳ ಜನ್ಮದಿನೋತ್ಸವವನ್ನಾಗಿ ಆಚರಿಸುತ್ತಾ ಬಂದಿದ್ದಾರೆ. ಅನಾಥ ಮಕ್ಕಳಿಗೆ ಸುದೈವಿ ಮಕ್ಕಳೆಂದು ಕರೆದು ಇಂದು ಕೂಡಾ, ಗುರುಕುಲದಲ್ಲಿ ಆ ಮಕ್ಕಳೊಂದಿಗೆ ಜನ್ಮದಿನವನ್ನಾಚರಿಸಿದ್ದಾರೆ. ಮಾನವನ ಸೇವೆಯೇ ಮಹಾದೇವನ ಸೇವೆ ಯಂದು ಅವರು ಕಾರ್ಯಮಾಡಿದ್ದಾರೆ. ಬಡತನದಿಂದ ಮೇಲೆ ಬಂದ ಸ್ವಾಮೀಜಿಯವರ ಸಾಧನೆ ಅದ್ಭುತವಾಗಿದೆ. ಬಡತನ ಶಾಪವಲ್ಲ, ಅದನ್ನು ವರವನ್ನಾಗಿ ಮಾರ್ಪಡಿಸಿಕೊಳ್ಳಬೇಕು. ಇದಕ್ಕೆ ಎಮ್.ವಿಶ್ವೇಶ್ವರಯ್ಯ ಬೀದಿ ಬೆಳಕಲ್ಲಿ ಓದಿ ದೇಶಕ್ಕೆ ಬೆಳಕಾದರು, ಡಾ. ಅಬ್ದುಲ ಕಲಾಂ ರವರು ನ್ಯೂಜ್ ಪೇಪರ ಮಾರಾಟಮಾಡಿ ರಾಷ್ಟ್ರಾಧ್ಯಕ್ಷರಾದರು. ಸಮಸ್ಯೆಗಳು, ಸವಾಲುಗಳು ಮನುಷ್ಯನನ್ನು ಗಟ್ಟಿಯಾಗಿ ಮಾಡುತ್ತವೆ. ಇದಕ್ಕೆ ಡಾ. ಬಸವಲಿಂಗ ಪಟ್ಟದ್ದೇವರೇ ಸಾಕ್ಷಿ, ವಚನ ವಿಶ್ವವಿದ್ಯಾಲಯ ಸ್ಥಾಪಿಸಲು ಶ್ರಮ ಪಡುತ್ತಿರುವ ಅವರ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಉದ್ಘಾಟನಾ ಸಮಾರಂಭದ ದಿವ್ಯ ಸಾನಿಧ್ಯವಹಿಸಿ ಮಾತನಾಡಿದ ಸುತ್ತೂರು ಶ್ರೀಕ್ಷೇತ್ರದ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ಈ ಭಾಗದಲ್ಲಿ ಡಾ। ಚನ್ನಬಸವ ಪಟ್ಟದ್ದೇವರಿಗೆ ನೆನೆಯುತ್ತಾರೆಯೋ ಗೊತ್ತಿಲ್ಲ, ಆದರೆ ಮೈಸೂರು ಭಾಗದಲ್ಲಿ ಕನ್ನಡದ ವಿಷಯ ಬಂದಾಗ ಭಾಲ್ಕಿಯ ಲಿಂ.ಡಾ. ಚನ್ನಬಸವ ಪಟ್ಟದ್ದೇವರಿಗೆ ಎಲ್ಲರೂ ನೆನೆಯುವರು. ಗಡಿನಾಡಿನಲ್ಲಿ ನಿಂತು ಉರ್ದು ಭಾಷೆಯಲ್ಲಿ ಫಲಕಹಾಕಿ, ಕನ್ನಡ ಭಾಷೆಯನ್ನು ಒಳಗೆ ಕಲಿಸಿದ ಕೀರ್ತಿ ಭಾಲ್ಕಿಯ ಹಿರಿಯ ಪಟ್ಟದ್ದೇವರಿಗೆ ಸಲ್ಲುತ್ತದೆ. ಸುಖದ ಸುಪ್ಪತ್ತಿಗೆಯನ್ನು ಬಯಸದೇ, ಬಡವರ ಏಳ್ಗೆಗಾಗಿ ಶ್ರಮಿಸುತ್ತಿರುವವರು ಡಾ. ಬಸವಲಿಂಗ ಪಟ್ಟದ್ದೇವರಾಗಿದ್ದಾರೆ. ಕಷ್ಟದ ಕಾಲದಲ್ಲಿಯೂ ಪೂಜ್ಯರು ಮಠಕ್ಕೆ ಬಂದವರಿಗೆ ದಾಸೋಹ ನಡೆಸಿದ ಮಹಾಸ್ವಾಮೀಜಿಯಾಗಿದ್ದರು. ಮಠಕ್ಕೆ ಸೇರಿಸುವುದು ತಮ್ಮ ಮಕ್ಕಳು ಉತ್ತಮ ವ್ಯಕ್ತಿಯಾಗಲಿ ಎಂದರು. ಕುಟುಂಬದ ಎಲ್ಲಾ ಕಾರ್ಯಗಳನ್ನು ಬಿಟ್ಟು, ಜಗತ್ಕಲ್ಯಾಣಕ್ಕಾಗಿ ತಮ್ಮ ಜೀವನವನ್ನು ಸವೆಸುತ್ತಿರುವ ಶ್ರೇಯ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರಿಗೆ ಸಲ್ಲುತ್ತದೆ. ಕರ್ನಾಟಕ, ಮಹಾರಾಷ್ಟ್ರ, ಆಂಧ್ರ, ತೆಲಂಗಾಣ ನಾಲ್ಕೂ ರಾಜ್ಯಗಳಲ್ಲಿ ಬಸವತತ್ವ ಪ್ರಸಾರ ಮಾಡುತ್ತಿರುವ ಕಾರ್ಯ ಬಸವಲಿಂಗ ಪಟ್ಟದ್ದೇವರಿಗೆ ಸಲ್ಲುತ್ತದೆ. ಶಾಂತಿ ಸಮಾಧಾನದಿಂದ ಕಾರ್ಯನಿರ್ವಹಿಸಿದ ಶ್ರೇಯ ಬಸವಲಿಂಗ ಪಟ್ಟದ್ದೇವರದ್ದಾಗಿದೆ. ಇವರು ಮುಂದೆ ಶತಮಾನೋತ್ಸವ ಆಚರಿಸುಕೊಳ್ಳುವಂತಾಗಲಿ, ನಾಡಿನಾದ್ಯಂತ ಬಸವ ತತ್ವ ಆಚರಣೆ ತಂದರೆ ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಆಚರಿಸಿದ್ದಕ್ಕೆ ಸಾರ್ಥಕತೆ ಬರುತ್ತದೆ ಎಂದು ಹೇಳಿದರು. ಹಿರೇಮಠದ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿ ಮಾತನಾಡಿದರು. ಸಚಿವ ಈಶ್ವರ ಖಂಡ್ರೆ, ಸಂಸದ ಸಾಗರ ಖಂಡ್ರೆ, ಮಾಜಿ ಶಾಸಕ ಪ್ರಕಾಶ ಖಂಡ್ರೆ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ ಬಗ್ಗೆ ಮಾತನಾಡಿದರು.

ಕಾರ್ಯಕ್ರಮದಲ್ಲಿ ಬಾಬು ವಾಲಿ, ಬಸವರಾಜ ಧನ್ನೂರ, ಶಕುಂತಲಾ ಬೆಲ್ದಾಳೆ, ಬಸವರಾಜ ಧನ್ನೂರ, ಚನ್ನಬಸವಣ್ಣ ಬಳತೆ, ವೈಜಿನಾಥ ಕಮಠಾಣೆ, ಸೋಮನಾಥಪ್ಪ ಅಷ್ಟೂರೆ, ನವಲಿಂಗ ಪಾಟೀಲ, ಶಾರದಾ ಬಾಬುರಾವ ಹುಣಜೆ ಇದ್ದರು.

ನನಗೆ ಜನ್ಮದಿನಾಚರಣೆ ಮಾಡಿಕೊಳ್ಳಲು ಇಷ್ಟವಿಲ್ಲ. ನಾನು 50 ವರ್ಷದ ಸುವರ್ಣ ಮಹೋತ್ಸವ, 60 ವರ್ಷದ ಷಷ್ಠಬ್ದಿ ಕಾರ್ಯಕ್ರಮ ಯಾವುದೂ ಮಾಡಿಕೊಂಡಿಲ್ಲ. ಆದರೆ ಇವಾಗ ನನಗೆ ವಯಸ್ಸಾಗಿದೆ, ಹೀಗಾಗಿ ಭಕ್ತರ ಮಾತಿಗೆ ಇಲ್ಲವೆನ್ನದೇ ಅಮೃತ ಮಹೋತ್ಸವ ನಡೆಸಲು ಒಪ್ಪಿಕೊಂಡಿದ್ದೇನೆ. ಈ ಎಲ್ಲಾ ಮಹೋತ್ಸವವು ಸುದೈವಿ ಮಕ್ಕಳಿಗೆ ಸಲ್ಲುತ್ತದೆ.

**–ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು, ಹಿರೇಮಠದ ಹಿರಿಯ ಸ್ವಾಮೀಜಿ, ಭಾಲ್ಕಿ.**

ಮಠಗಳಿಂದ ಸ್ವಾಮೀಜಿಗಳಲ್ಲ, ಸ್ವಾಮೀಜಿಗಳಿಂದ ಮಠಗಳು ಎನ್ನುವುದನ್ನು ತೋರಿಸಿಕೊಟ್ಟವರು ಲಿಂ. ಡಾ. ಚನ್ನಬಸವ ಪಟ್ಟದ್ದೇವರು, ಅವರ ಮಾರ್ಗದಲ್ಲಿಯೇ ನಡೆಯುತ್ತಿರುವ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಅಭಿನಂಧನಾರ್ಹರು.

**–ಈಶ್ವರ ಖಂಡ್ರೆ, ಜಿಲ್ಲಾ ಉಸ್ತುವಾರಿ ಸಚಿವರು ಭಾಲ್ಕಿ**

## ಮಕ್ಕಳು ನಾಪತ್ತೆ: ರಾಜ್ಯಪಾಲರ ಕಳವಳ

ಸಂಘ ಆಯೋಜಿಸಿದ್ದ 'ಮಾನವ ಕಳ್ಳಸಾಗಣೆ ವಿರೋಧಿ– ಪೋಷಕರಿಗೆ ಅರಿವು ಮೂಡಿಸುವ 'ಗೃಹ ಶುದ್ಧಿ ಅಭಿಯಾನ'ಕ್ಕೆ ಚಾಲನೆ ನೀಡಿ ಮಾತನಾಡಿದ ರಾಜ್ಯಪಾಲರು, ಕಾಣೆಯಾದ ಅಂತಹ ಮಕ್ಕಳಲ್ಲಿ ಸುಮಾರು ಶೇ. 10 ರಷ್ಟು ಮಕ್ಕಳು ಎಂದಿಗೂ ಪತ್ತೆಯಾಗುವುದಿಲ್ಲ. ಅಂದರೆ, ಪ್ರತಿ ವರ್ಷ 200ಕ್ಕೂ ಹೆಚ್ಚು ಕುಟುಂಬಗಳು ತಮ್ಮ ಮಕ್ಕಳನ್ನು ಶಾಶ್ವತವಾಗಿ ಕಳೆದುಕೊಳ್ಳುತ್ತಿವೆ ಎಂದು ಹೇಳಿದರು.

ಹೆಚ್ಚಿನ ಮಕ್ಕಳು ತಮ್ಮ ದೈನಂದಿನ ಚಟುವಟಿಕೆಗಳ ಸಮಯದಲ್ಲಿ ಕಾಣೆಯಾಗುತ್ತಿದ್ದಾರೆ ಎಂದು ವರದಿಯಲ್ಲಿ ಬಹಿರಂಗಪಡಿಸಲಾಗಿದೆ. ಕೆಲವು ಮಕ್ಕಳು ಶಾಲೆಗೆ ಅಥವಾ ಟ್ಯೂಷನ್‌ಗೆ ಹೋಗುವಾಗ ಇದ್ದಕ್ಕಿದ್ದಂತೆ ಕಣ್ಮ–ರೆಯಾಗಿದ್ದರೆ, ಕೆಲವರು ಆಟವಾಡುವಾಗ ಅಥವಾ ಮಾರುಕಟ್ಟೆಗೆ ಹೋಗುವಾಗ ಕಾಣೆಯಾಗಿದ್ದಾರೆ ಎಂದು ತಿಳಿಸಿದ್ದಾರೆ.

ದೇಶದಲ್ಲಿ ಸುಮಾರು ಶೇ. 40 ರಷ್ಟು ಜನರು 18 ವರ್ಷಕ್ಕಿಂತ ಕಡಿಮೆ ವಯಸ್ಸಿನವರು. ಇತ್ತೀಚಿನ ವರ್ಷಗಳಲ್ಲಿ ಮಕ್ಕಳ ಅಪಹರಣದ ಘಟನೆಗಳು ಹೆಚ್ಚಾಗಿವೆ. ಕರ್ನಾಟಕದಂತಹ ಅಭಿವೃದ್ಧಿ ಹೊಂದಿದ ಮತ್ತು ಪ್ರಗತಿಪರ ರಾಜ್ಯದಲ್ಲೂ ಮಕ್ಕಳ ಅಪಹರಣ ಘಟನೆಗಳು ಒಂದು ಸವಾಲಾಗಿ ಪರಿಣಮಿಸಿವೆ. ಕಾನೂನುಬದ್ಧ ಅಪರಾಧವಾಗಿರುವುದರ ಜೊತೆಗೆ, ಇದು ಗಂಭೀರ ಸಾಮಾಜಿಕ, ಮಾನಸಿಕ ಮತ್ತು ನೈತಿಕ ಬಿಕ್ಕಟ್ಟಾಗಿದೆ ಎಂದು ಹೇಳಿದರು.

ಅಪಹರಿಸಲ್ಪಟ್ಟ ಮಕ್ಕಳಲ್ಲಿ ಹೆಚ್ಚಿನವರು ಬಾಲಕಿಯರಾಗಿದ್ದು, ಅವರನ್ನು ಮಾನವ ಕಳ್ಳಸಾಗಣೆ, ಲೈಂಗಿಕ ಶೋಷಣೆ, ಬಾಲ ಕಾರ್ಮಿಕ ಪದ್ಧತಿ, ಅಂಗಾಂಗ ವ್ಯಾಪಾರ ಮತ್ತು ಬಲವಂತದ ಭಿಕ್ಷಾಟನೆಯಲ್ಲಿ ತೊಡಗಿರುವ ಗ್ಯಾಂಗ್‌ಗಳು ಅಪಹರಿಸುವ ಶಂಕೆ ವ್ಯಕ್ತವಾಗಿದ್ದು, ಕಾಣೆಯಾದ ಮಕ್ಕಳನ್ನು ಹುಡುಕಲು ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ಜಂಟಿಯಾಗಿ ವಿಶೇಷ ಕಾರ್ಯಪಡೆಯನ್ನು ರಚಿಸಿವೆ. ಪೊಲೀಸರು ಮತ್ತು ಭದ್ರತಾ ಸಂಸ್ಥೆಗಳು ಈ ಪ್ರಕರಣಗಳ ತನಿಖೆ ನಡೆಸುತ್ತಿವೆ ಮತ್ತು ಅನುಮಾನಾಸ್ಪದ ಜಾಲಗಳ ಮೇಲೆ ನಿಗಾ ಇಡಲಾಗುತ್ತಿದೆ ಎಂದು ಹೇಳಿದರು.

ಇದನ್ನು ತಡೆಗಟ್ಟಲು ಪೋಷಕರು, ಶಾಲೆಗಳು, ಕಾಲೇಜುಗಳು, ನಾಗರಿಕರು, ಸಮಾಜ, ಸರ್ಕಾರೇತರ ಸಂಸ್ಥೆಗಳು, ಪೊಲೀಸರು, ಮಾನವ ಕಳ್ಳಸಾಗಣೆ ವಿರೋಧಿ ಘಟಕಗಳು ಮತ್ತು ಸ್ಥಳೀಯ ಸಂಸ್ಥೆಗಳು ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು.

ಪೋಷಕರು ಮತ್ತು ಮಕ್ಕಳಲ್ಲಿ ಜಾಗೃತಿ ಮೂಡಿಸುವುದು, ಶಾಲಾ ಮಕ್ಕಳನ್ನು ರಕ್ಷಿಸುವುದು ಮತ್ತು ಅಪಹರಣ ಮತ್ತು ಶೋಷಣೆಯ ವಿರುದ್ಧ ಸಾಮೂಹಿಕ ಜಾಗರೂಕತೆಯನ್ನು ನಿರ್ಮಿಸುವ ಗುರಿ ಹೊಂದಿದೆ ಎಂದು ರಾಜ್ಯಪಾಲರು ತಿಳಿಸಿದರು.

## ವರದಿ ಸಲ್ಲಿಕೆಗೆ ಸೂಚನೆ

ಸದಸ್ಯರಾದ ಡಾ. ಚಂದ್ರಶೇಖರ ಪಾಟೀಲ್ ಹಾಗೂ ಭೀಮರಾವ ಪಾಟೀಲ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬಳಿಕ ಮಾತನಾಡಿದ ಅವರು, ನಿರಂತರವಾಗಿ ಸುರಿದ ಮಳೆಗೆ ತಾಲೂಕು ವ್ಯಾಪ್ತಿಯಲ್ಲಿ ಸಮೃದ್ಧವಾಗಿ ಬೆಳೆ ಹಾನಿ, ಮನೆ ಕುಸಿತ, ಜಾನುವಾರುಗಳ ಸಾವಿನ ಕುರಿತು ಸಮರ್ಪಕವಾಗಿ ಸಮೀಕ್ಷೆ ಮಾಡುವ ಮೂಲಕ ವರದಿ ಸಲ್ಲಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ತಾಲೂಕಿನ ಕಪ್ಪರಗಾಂವ, ವರವಟ್ಟಿ (ಕೆ), ಶೇಡೋಳ ಗ್ರಾಮ ಸೇರಿ ನಾನಾ ಗ್ರಾಮಗಳ ಹೊಲಗಳಿಗೆ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್ ಹಾಗೂ ಭೀಮರಾವ ಪಾಟೀಲ್ ಭೇಟಿ ನೀಡಿ ವಾಸ್ತವವಾಗಿ ಹಾಳಾಗಿರುವ ಬೆಳೆ ವೀಕ್ಷಣೆ ಮಾಡಿದರು. ಬೆಳೆ ಹಾನಿ ಕುರಿತು ತೋಟಗಾರಿಕೆ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಿಂದ ಮಾಹಿತಿ ಪಡೆದುಕೊಂಡರು. ಅಧಿಕಾರಿಗಳಿಂದ ವರದಿ ಪಡೆದು ಸಂತ್ರಸ್ತರಿಗೆ ಸರಕಾರದಿಂದ ಪರಿಹಾರ ದೊರಕಿಸಿ ಕೊಡಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಅಂಜುಮ್ ತಬಸುಮ್, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲೂಕ ಅಧ್ಯಕ್ಷ ಅಫ್ಸರಮಿಯ, ಜಿಪಂ. ಮಾಜಿ ಉಪಾಧ್ಯಕ್ಷ ಲಕ್ಷ್ಮಣರಾವ ಬುಳ್ಳಾ, ಗ್ರಾಮೀಣ ಕಾಂಗ್ರೆಸ್ ಅಧ್ಯಕ್ಷ ಓಂಕಾರ ತುಂಬಾ, ಗ್ರಾಪಂ. ಅಧ್ಯಕ್ಷ ನಾಗರಾಜ ಭೋಜಗುಂಡಿ, ಪ್ರಭು ನೇಳಗಿ ಸೇರಿ ಕಂದಾಯ, ಕೃಷಿ, ತೋಟಗಾರಿಕೆ ಇಲಾಖೆ ಅಧಿಕಾರಿಗಳು ಇದ್ದರು.

## ಪಾಲಿನ ಗೇಮ್ ಚೇಂಜರ್: ಡಿ.ಕೆ ಶಿವಕುಮಾರ್

ದೇಶದ ಪಾಲಿಗೆ ದೊಡ್ಡ ಗೇಮ್ ಚೇಂಜರ್ ಆಗಲಿದೆ.

ರಾಹುಲ್ ಗಾಂಧಿ ಅವರು ತಮಗಾಗಿ ಈ ಹೋರಾಟ ಮಾಡುತ್ತಿಲ್ಲ. ಸಂವಿಧಾನದತ್ತವಾಗಿ ದೇಶದ ಜನಸಾಮಾನ್ಯರಿಗೆ ಸಿಕ್ಕಿರುವ ಹಕ್ಕಿನ ರಕ್ಷಣೆಗೆ ಹೋರಾಡುತ್ತಿದ್ದಾರೆ. ಕರ್ನಾಟಕದಲ್ಲಿ ಏನಾಗಿದೆ ಎನ್ನುವುದು ನನಗೆ ಗೊತ್ತಿದೆ. ಮತದಾರರು ತಮ್ಮ ಹಕ್ಕನ್ನು ಪಡೆಯಲು ಅವಕಾಶ ಮಾಡಿಕೊಟ್ಟಿರುವ ಸುಪ್ರೀಂ ಕೋರ್ಟ್ ಬಗ್ಗೆ ಹೆಮ್ಮೆ ಇದೆ ಎಂದು ಹೇಳಿದರು.

ಬಿಹಾರದ ಜನ ಬದಲಾವಣೆ ಬಯಸಿದ್ದಾರೆ. ಇಲ್ಲಿನ ಯುವಕರು ಕೂಡ ಬೀದಿಗಿಳಿದು ಮಹಾಘಟಬಂಧನಕ್ಕೆ ಬೆಂಬಲ ನೀಡುತ್ತಿದ್ದಾರೆ. ನಮ್ಮ

ಮಹಾಘಟಬಂಧನ ನೀಡಿರುವ ಗ್ಯಾರಂಟಿಗಳು ಜನರಿಗೆ ನೆರವಾಗಲಿದ್ದು, ನಾವು ಕೊಟ್ಟ ಮಾತನ್ನು ಉಳಿಸಿಕೊಳ್ಳುತ್ತೇವೆ. ಕಳೆದ ಬಾರಿ ಮಹಾಘಟಬಂಧನ ಅಲ್ಪಅಂತರದಲ್ಲಿ ಸೋತಿತ್ತು. ಈ ಬಾರಿ ಗೆದ್ದೇ ಗೆಲ್ಲುತ್ತೇವೆ' ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇದೇ ವೇಳೆ ಕರ್ನಾಟಕದಿಂದ ಪ್ರಾರಂಭವಾದ ರಾಹುಲ್ ಅವರ ರ್ಯಾಲಿಯ ಬಗ್ಗೆ ವಿವರಿಸಿದ ಅವರು, ಬಿಹಾರದ ಯುವಕರು ತೋರಿಸಿದ ಪ್ರತಿಕ್ರಿಯೆ ಅದ್ಭುತವಾಗಿದೆ ಎಂದು ಹೇಳಿದರು.

ಬಿಹಾರದ ಯುವಕರಿಗೆ ಬದಲಾವಣೆ ಬೇಕು ಮತ್ತು ಆ

ಬದಲಾವಣೆ ಮಹಾಘಟ ಬಂಧನಕ್ಕಾಗಿ ಆಗಿದೆ... ಕರ್ನಾಟಕದಲ್ಲಿಯೂ

ಈ ರೀತಿಯ ಪ್ರತಿಕ್ರಿಯೆಯನ್ನು ನೋಡಲಿಲ್ಲ. ಬಿಹಾರದ ಯುವಕರಿಗೆ ನಾನು ಧನ್ಯವಾದ ಹೇಳುತ್ತೇನೆ. ಕಳೆದ ಬಾರಿ, ಇಂಡಿಯಾ ಕೂಡ ಕ್ಷಣಾರ್ಧದಲ್ಲಿ ಅವಕಾಶವನ್ನು ಕಳೆದುಕೊಂಡಿತು, ಆದರೆ, ಈ ಬಾರಿ ನಾವು ಸರ್ಕಾರ ರಚಿಸುತ್ತೇವೆ ಎಂದು ತಿಳಿಸಿದರು.

## ಶೀಟ್ ಸಲ್ಲಿಸುವಂತೆ ಅಧಿಕಾರಿಗಳಿಗೆ ಸಿಎಂ ಸೂಚನೆ

ಪಂಗಡಗಳ ರಾಜ್ಯ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯಲ್ಲಿ, ಕಳೆದ ಆರು ತಿಂಗಳಲ್ಲಿ ಶೇ.84 ರಷ್ಟು ಪ್ರಕರಣಗಳಲ್ಲಿ ಮಾತ್ರ ನಿಗದಿತ ಅವಧಿಯ ಒಳಗಾಗಿ ಆರೋಪ ಪಟ್ಟಿ ಸಲ್ಲಿಸಲಾಗಿದೆ. ಶೇ.100 ಪ್ರಕರಣಗಳಲ್ಲಿ 60ದಿನಗಳ ಒಳಗಾಗಿ ಕಡ್ಡಾಯವಾಗಿ ಆರೋಪ ಪಟ್ಟಿ ಸಲ್ಲಿಸಲು ಕ್ರಮ ಕೈಗೊಳ್ಳಬೇಕು ಎಂದು ಸಿಎಂ ಸಿದ್ದರಾಮಯ್ಯ ಅವರು ಈ ಸೂಚನೆ ನೀಡಿದ್ದಾರೆ.

"ಪೊಲೀಸರು ಇದರಲ್ಲಿ ಯಾವುದೇ ನೆಪ ಹೇಳಬಾರದು. ನ್ಯಾಯಾಲಯದಲ್ಲಿ 56 ಪ್ರಕರಣಗಳಲ್ಲಿ ತಡೆಯಾಜ್ಞೆ ಇದ್ದು, ಇದನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಬೇಕು. ರಾಜ್ಯದಲ್ಲಿ ದೌರ್ಜನ್ಯ ಪ್ರಕರಣಗಳ ತ್ವರಿತ ವಿಚಾರಣೆಗಾಗಿ 11 ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಲಾಗಿದೆ. ಪ್ರಕರಣಗಳ ಸರಿಯಾದ ವಿಚಾರಣೆ ನಡೆಸಿ, ತ್ವರಿತವಾಗಿ ನ್ಯಾಯ ಒದಗಿಸಲು ಕ್ರಮ ಕೈಗೊಳ್ಳಬೇಕು. ಪ್ರಸ್ತುತ ಶಿಕ್ಷೆಯ ಪ್ರಮಾಣ ಶೇ.10ರಷ್ಟಿದ್ದು, ಇದು ಹೆಚ್ಚಾಗಬೇಕು. ಆರೋಪಿಗಳ ಜೊತೆ ಪೊಲೀಸರು ಶಾಮೀಲಾಗಿರುವುದು ಕಂಡು ಬಂದರೆ ಅಂತವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ಎಚ್ಚರಿಕೆ ನೀಡಿದರು.

ಸುಳ್ಳು ಜಾತಿ ಪ್ರಮಾಣ ಪತ್ರ ಪ್ರಕರಣಗಳಲ್ಲಿ ಕಟ್ಟುನಿಟ್ಟಿನ ಕಾನೂನು ಕ್ರಮಗಳನ್ನು ಕೈಗೊಳ್ಳಬೇಕು. ನ್ಯಾಯಾಲಯಗಳಲ್ಲಿ ಸುಳ್ಳು ಜಾತಿ ಪ್ರಮಾಣ ಪತ್ರ ಪ್ರಕರಣಗಳ ಕುರಿತು ತೀರ್ಪು ಬಂದರೂ, ತೀರ್ಪು ಜಾರಿಗೆ ಯಾಕೆ ಬಾಕಿ ಇದೆ. ಪ್ರಸ್ತುತ ಸುಳ್ಳು ಜಾತಿ ಪ್ರಮಾಣ ಪತ್ರ ಸಾಬೀತಾಗಿರುವ 170 ಪ್ರಕರಣಗಳಿದ್ದು, ತಕ್ಷಣ ಕ್ರಮ ಕೈಗೊಳ್ಳಬೇಕು. ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದು ಸರ್ಕಾರದ ಸೌಲಭ್ಯಗಳನ್ನು ಪಡೆದಿರುವುದು ಸಾಬೀತಾದರೆ ಅದನ್ನು ಮರಳಿ ಪಡೆಯಲು ಕ್ರಮ ಕೈಗೊಳ್ಳಬೇಕು. ಈ ಕುರಿತು ಇಲಾಖೆಗಳ ನಡುವೆ ಸಮನ್ವಯತೆ ಅಗತ್ಯವಿದ್ದು, ಸಮಗ್ರ ವರದಿಯನ್ನು ಸಲ್ಲಿಸಬೇಕು ಎಂದು ಸೂಚಿಸಿದರು.

ದೌರ್ಜನ್ಯ ಪ್ರಕರಣಗಳಲ್ಲಿ ಅಂಗವೈಕಲ್ಯತೆ ಉಂಟಾದಲ್ಲಿ ನೀಡಲಾಗುವ ವೈದ್ಯಕೀಯ ಪರಿಹಾರದ ಮೊತ್ತವನ್ನು ಹೆಚ್ಚಿಸುವ ಕುರಿತು ಪರಿಶೀಲನೆ ಮಾಡಲಾಗುವುದು ಸಿಎಂ ತಿಳಿಸಿದರು.

ರಾಜ್ಯದಲ್ಲಿ 33 ಡಿಸಿಆರ್‌ಇ ಪೊಲೀಸ್ ಠಾಣೆಗಳನ್ನು ತೆರೆಯಲಾಗಿದ್ದು, ಇಲ್ಲಿ ಸಿಬ್ಬಂದಿ ಕೊರತೆಯಿದ್ದರೆ ಭರ್ತಿ ಮಾಡಲು ಕ್ರಮ ಕೈಗೊಳ್ಳಬೇಕು. ಈ ಕುರಿತು ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸಬೇಕು.

ದೌರ್ಜನ್ಯ ಪ್ರಕರಣಗಳಲ್ಲಿ ಪ್ರತಿ ದೂರು ದಾಖಲಿಸುವ ಪ್ರವೃತ್ತಿ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಅಂತಹ ಪ್ರಕರಣಗಳಲ್ಲಿ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿ ದೂರಿನಲ್ಲಿ ಸತ್ಯಾಂಶವಿದ್ದರೆ ಮಾತ್ರ ಎಫ್‌ಐಆರ್ ದಾಖಲಿಸಬೇಕು.

ರಾಜ್ಯಾದ್ಯಂತ ದೇವದಾಸಿಯರ ಸಮೀಕ್ಷೆ ಕಾರ್ಯವನ್ನು ಈಗಾಗಲೇ ಆರಂಭಿಸಲಾಗಿದ್ದು, ಸಮೀಕ್ಷೆ ಪೂರ್ಣಗೊಂಡ ಬಳಿಕ ದೇವದಾಸಿಯರ ಪುನರ್ವಸತಿಗೆ ಹಾಗೂ ಈ ಪಿಡುಗನ್ನು ಸಂಪೂರ್ಣವಾಗಿ ತೊಲಗಿಸಲು ಯೋಜನೆ ಜಾರಿಗೊಳಿಸಲಾಗುವುದು. ವಿಶೇಷ ಅನುದಾನ ನೀಡುವ ಬಗ್ಗೆಯೂ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಇನ್ನು ಬಾಕಿಯಿರುವ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಕುರಿತು ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು. ಬ್ಯಾಕ್‌ಲಾಗ್ ಹುದ್ದೆ ಭರ್ತಿ ವಿಷಯದಲ್ಲಿ ಯಾವುದೇ ರಾಜಿ ಇಲ್ಲ. ಸರ್ಕಾರ ದಲಿತರ ಪರವಾಗಿದ್ದು, ದಲಿತರಿಗೆ ಸೂಕ್ತ ನ್ಯಾಯ ಒದಗಿಸಲು ಅಡ್ಡಗಾಲು ಹಾಕುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

## ಬಿಜೆಪಿ-ಕಾಂಗ್ರೆಸ್ ಜಟಾಪಟಿ

ಮುಷ್ತಾಕ್ ಅವರು, ನನ್ನ ಭಾರತವನ್ನು ಸಣ್ಣದಾಗಿ ನೋಡಲು ನಾನು ಅವಕಾಶ ನೀಡುವುದಿಲ್ಲ. ಹೀಗಾಗಿ ನಾನು ಯಾರ ವಿರುದ್ಧವೂ ಯಾವುದೇ ಹೇಳಿಕೆಗಳನ್ನು ನೀಡುವುದಿಲ್ಲ ಎಂದು ಹೇಳಿದ್ದಾರೆ.

## ಆಧಾರದಲ್ಲಿ ಕೊಂದಿಲ್ಲ: ರಾಜನಾಥ್ ಸಿಂಗ್

ದಾಳಿಯ ನಂತರ, ಮೂರು ಸೇನಾ ಮುಖ್ಯಸ್ಥರನ್ನು ಕರೆದು ಕಾರ್ಯಾಚರಣೆಗೆ ಸಿದ್ಧರಿದ್ದೀರಾ? ಎಂದು ಕೇಳಿದೆ. ಮೂರು ಸಶಸ್ತ್ರ ಪಡೆಗಳ ಮುಖ್ಯಸ್ಥರು ಸರ್ವಾನುಮತದಿಂದ 'ನಾವು ಯಾವುದೇ ಕಾರ್ಯಾಚರಣೆಗೆ ಸಿದ್ಧರಿದ್ದೇವೆ' ಎಂದು ಉತ್ತರಿಸಿದರು. ಇದು ಭಾರತ. ಪ್ರಧಾನಿ ಮೋದಿ ಅಗತ್ಯ ನಿರ್ದೇಶನಗಳನ್ನು ನೀಡಿದರು" ಎಂದು ಅವರು ಹೇಳಿದರು.

"ನಿರ್ಧಿಷ್ಟಪಡಿಸಿದ ಗುರಿಯನ್ನು ಯೋಜಿಸಿದಂತೆ ನಿಖರವಾಗಿ ಹೊಡೆಯಲಾಯಿತು. ಆಪರೇಷನ್ ಸಿಂಧೂರ್ ಸಮಯದಲ್ಲಿ, ನಮ್ಮ ಪಡೆಗಳು ಎಲ್ಲಾ ಗಡಿ ಪ್ರದೇಶಗಳಿಂದ ಸಂಪೂರ್ಣ ಬೆಂಬಲ ಪಡೆದವು. ಭಾರತ ತನ್ನ ಗಡಿಯೊಳಗಿನ ಜನರನ್ನು ಮಾತ್ರ ತನ್ನ ಸದಸ್ಯರೆಂದು ಪರಿಗಣಿಸುವುದಿಲ್ಲ, ಪ್ರಪಂಚದಾದ್ಯಂತ ಇರುವ ಜನರನ್ನು ಸಹ ತನ್ನ ಕುಟುಂಬದ ಭಾಗವೆಂದು ಪರಿಗಣಿಸುತ್ತದೆ, ವಸುದೈವ ಕುಟುಂಬಕಂ ಸಂದೇಶವನ್ನು ಹರಡುತ್ತದೆ" ಎಂದರು.

"ಭಾರತ ಜಾತಿ ಅಥವಾ ಧರ್ಮದ ಆಧಾರದ ಮೇಲೆ ತಾರತಮ್ಯ ಮಾಡುವುದಿಲ್ಲ.ಆದರೆ ಭಯೋತ್ಪಾದಕರು, ಜನರ ಧರ್ಮವನ್ನು ಕೇಳಿ ಕೊಂದರು. ನಮ್ಮ ಸೈನಿಕರು ಧರ್ಮದ ಆಧಾರದ ಮೇಲೆ ಭಯೋತ್ಪಾದಕರನ್ನು ಕೊಂದಿಲ್ಲ, ಬದಲಿಗೆ ಅವರ ಕೃತ್ಯಗಳ ಕಾರಣದಿಂದಾಗಿ ಕೊಂದರು" ಎಂದು ರಕ್ಷಣಾ ಸಚಿವರು ಹೇಳಿದರು.

ಏಪ್ರಿಲ್ 22ರ ಪಹಲ್ಗಾಮ್ ಉಗ್ರ ದಾಳಿಯ ನಂತರ ಮೇ ತಿಂಗಳಲ್ಲಿ ಆಪರೇಷನ್ ಸಿಂಧೂರ್ ಅಡಿಯಲ್ಲಿ, ಭಾರತ, ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಭಯೋತ್ಪಾದಕ ನೆಲೆಗಳ ನಿಖರವಾದ ದಾಳಿ ನಡೆಸಿತು. ಭಯೋತ್ಪಾದಕ ಮೂಲಸೌಕರ್ಯವನ್ನು ನಾಶಮಾಡುವುದು ಮತ್ತು ಪ್ರಮುಖ ಉಗ್ರರನ್ನು ತಟಸ್ಥಗೊಳಿಸುವ ಈ ಕಾರ್ಯಾಚರಣೆಯ ಗುರಿಯಾಗಿತ್ತು.

# ಅಕ್ಷರದ ಸಂತನಿಗೆ ಅಮೃತ ಮಹೋತ್ಸವದ ಸಂಭ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಆ.25: ಭಾಲ್ಕಿ ಬಸವಲಿಂಗ ಪಟ್ಟದ್ದೇವರು 1992ರಲ್ಲಿ ನಲವತ್ತು ವಿದ್ಯಾರ್ಥಿಗಳು, ಇಬ್ಬರು ಶಿಕ್ಷಕರಿಂದ ಆರಂಭಿಸಿದ ಶಿಕ್ಷಣ ಸಂಸ್ಥೆಯಲ್ಲಿ ಇಂದು ಸುಮಾರು ಇಪ್ಪತ್ತು ಸಾವಿರ ವಿದ್ಯಾರ್ಥಿಗಳು, ಎರಡು ಸಾವಿರ ಜನ ಶಿಕ್ಷಕ ಹಾಗೂ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ.



ಬಸವಲಿಂಗ ಪಟ್ಟದ್ದೇವರ ದೂರದೃಷ್ಟಿ, ದೃಢಸಂಕಲ್ಪ, ಉದಾತ್ತ ಯೋಚನೆ, ಶೈಕ್ಷಣಿಕ ಕ್ರಾಂತಿಯ ಫಲವಾಗಿ ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳು ಮತ್ತು ಶಿಕ್ಷಕ ಸಿಬ್ಬಂದಿಯ ಪಾಲಿಗೆ ಹಿರೇಮಠ ಸಂಸ್ಥಾನ ವಿದ್ಯಾಪೀಠ ವರವಾಗಿ ಪರಿಣಮಿಸಿದೆ.

ಸಾವಿರಾರು ಜನ ಬಡ, ಪ್ರತಿಭಾನ್ವಿತ ವಿದ್ಯಾರ್ಥಿಗಳು ಈ ಶಿಕ್ಷಣ ಸಂಸ್ಥೆಯಲ್ಲಿ ಕಲಿತು ದೇಶದ ವಿವಿಧ ಭಾಗಗಳಲ್ಲಿ, ವಿವಿಧ ಕ್ಷೇತ್ರಗಳಲ್ಲಿಂದು ಉನ್ನತ ಸ್ಥಾನದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ನಮ್ಮ ಟ್ರಸ್ಟ್ ಅಡಿಯಲ್ಲಿ ನಡೆಯುತ್ತಿರುವ ಸುಮಾರು 50 ಶಾಲೆ, ಕಾಲೇಜುಗಳು ಬೀದರ್ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿಯೇ ನಡೆಯುತ್ತಿವೆ. ಇನ್ನು ಕಲಬುರಗಿ ಜಿಲ್ಲೆಯ ಕಮಲಾಪುರ ತಾಲ್ಲೂಕಿನ ಸೊಂತ ಮತ್ತು ತೆಲಂಗಾಣದ ಮೊರಗಿಯಲ್ಲಿಯೂ ನಡೆಯುತ್ತಿವೆ ಎಂದು ಆಡಳಿತಾಧಿಕಾರಿ ಮೋಹನರೆಡ್ಡಿ ತಿಳಿಸಿದರು.

ಬಸವಲಿಂಗ ಪಟ್ಟದ್ದೇವರು ಹಿರೇಮಠದ ಉತ್ತರಾಧಿಕಾರಿಯಾಗಿ ಬಂದಾಗ ಒಂದು ಸಣ್ಣ ಬಾತ್ ರೂಮ್ ಕಟ್ಟಿಕೊಳ್ಳುವ ಆರ್ಥಿಕ ಚೈತನ್ಯವೂ ಶ್ರೀ ಮಠಕ್ಕೆ ಇರಲಿಲ್ಲ. ಇವರ ಬಳಿ ಇದ್ದದ್ದು ಬರೀ ನೋವು, ಕಣ್ಣೀರು, ಅವಮಾನ, ಆರ್ಥಿಕ ದುಃಸ್ಥಿತಿ ಅಷ್ಟೇ. ಅಂತಹ ಸಂದಿಗ್ಧ ಪರಿಸ್ಥಿತಿಯಲ್ಲಿಯೂ ಬಸವಣ್ಣನ ಕಾರುಣ್ಯ, ಚನ್ನಬಸವ ಪಟ್ಟದೇವರ ನಾಮಬಲ ಮತ್ತು ಸಾಧಿಸಿಯೇ ತೀರುತ್ತೇನೆ ಎಂಬ ಛಲದಿಂದ ಮಠವನ್ನು ಸೊನ್ನೆಯಿಂದ ಮುನ್ನಡೆಸಿಕೊಂಡು ಬಂದು ಬಾನೆತ್ತರಕ್ಕೆ ಬೆಳೆಸಿದ್ದಾರೆ ಎಂದು ಬಸವಲಿಂಗ ಪಟ್ಟದ್ದೇವರನ್ನು ಸಮೀಪದಿಂದ ಕಂಡಿರುವ ರಮೇಶ ಪಟ್ನೆ ಹೇಳಿದರು. ಪಟ್ಟದ್ದೇವರ ಅಸಂಖ್ಯ ಮಾನವೀಯ, ಸಾಮಾಜಿಕ, ವಿಧಾಯಕ ಕಾರ್ಯಗಳು ನೂರಾರು ಅನಾಥ ಮಕ್ಕಳಿಗೆ ಅನ್ನ, ಆಶ್ರಯ ಮತ್ತು ಶಿಕ್ಷಣ ನೀಡಿ ಅವರ ಬದುಕನ್ನು ಪ್ರಜ್ವಲ ದೀಪದಂತೆ ಬೆಳಗುತ್ತಿವೆ ಎನ್ನುತ್ತಾರೆ ಸಾಹಿತಿ ರಾಜು ಜುಬರೆ.

ಪಟ್ಟದ್ದೇವರ ಅಗಣಿತ ಸಮಾಜಮುಖಿ, ಶೈಕ್ಷಣಿಕ, ಧಾರ್ಮಿಕ, ಮಾನವೀಯ ಕೆಲಸಗಳನ್ನು ಗುರುತಿಸಿ ರಾಷ್ಟ್ರೀಯ ಬಸವ ಪುರಸ್ಕಾರ ಸೇರಿದಂತೆ ಸರ್ಕಾರ, ಸಂಘ, ಸಂಸ್ಥೆಗಳು ಅನೇಕ ಪ್ರಶಸ್ತಿಗಳನ್ನು ನೀಡಿವೆ. ಈಚೆಗೆ ಹಂಪಿ ವಿಶ್ವವಿದ್ಯಾಲಯವು ನಾಡೋಜ ಪ್ರಶಸ್ತಿಯನ್ನು ನೀಡಿದೆ.

ಅಮೃತ ಮಹೋತ್ಸವ ಕಾರ್ಯಕ್ರಮ: ಪಟ್ಟಣದ ಚನ್ನಬಸವಾಶ್ರಮದಲ್ಲಿ ಅಮೃತ ಮಹೋತ್ಸವ ಸ್ವಾಗತ ಸಮಿತಿ ವತಿಯಿಂದ ಸೋಮವಾರ ಬೆಳಿಗ್ಗೆ 11 ಗಂಟೆಗೆ ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಸಮಾರಂಭ ಉದ್ಘಾಟನೆಗೊಳ್ಳಲಿದೆ. ಸುತ್ತೂರು ಶ್ರೀಕ್ಷೇತ್ರ ವೀರಸಿಂಹಾಸನ ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಮಾರಂಭದ ಸಾನ್ನಿಧ್ಯ ವಹಿಸಲಿದ್ದಾರೆ. ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಶಿವರಾಜ ಪಾಟೀಲ ಸಮಾರಂಭ ಉದ್ಘಾಟಿಸಲಿದ್ದಾರೆ. ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸುವರು. ಸಂಸದ ಸಾಗರ್ ಖಂಡ್ರೆ, ಮಾಜಿ ಶಾಸಕ ಪ್ರಕಾಶ ಖಂಡ್ರೆ ಸೇರಿದಂತೆ ಮುಂತಾದ ಗಣ್ಯರು, ಸಾಹಿತಿಗಳು, ಬುದ್ಧಿಜೀವಿಗಳು, ಚಿಂತಕರು ಭಾಗವಹಿಸಲಿದ್ದಾರೆ.

## ವಿವಿಧ ಫಲಾನುಭವಿ ಆಧಾರಿತ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.25–ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2025–26ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಹ ವಿಕಲಚೇತನ ಫಲಾನುಭವಿಗಳಿಂದ ಸೇವಾ ಸಿಂಧು ಪೋರ್ಟಲ್‌ದಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ. ಈ ಫಲಾನುಭವಿ ಆಧಾರಿತ ಯೋಜನೆಗಳನ್ನು ಸೇವಾ ಸಿಂಧು ತಂತ್ರಾಂಶ ಇವರು ಡಿ.ಬಿ.ಟಿ. (ನೇರ ನಗದು ವರ್ಗಾವಣೆ) ಆನ್‌ಲೈನ್ ವೇದಿಕೆ ತಂತ್ರಾಂಶದಡಿ ಅಳವಡಿಸಿದ್ದು, ವಿವಿಧ ಫಲಾನುಭವಿ ಆಧಾರಿತ ಯೋಜನೆಗಳಾದ ಆಧಾರ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ

ಪ್ರೋತ್ಸಾಹಧನ ಯೋಜನೆ, ನಿರುದ್ಯೋಗ ಭತ್ಯೆ,ಶಿಶು ಪಾಲನಾ

ಭತ್ಯೆ, ಮರಣ ಪರಿಹಾರ ನಿಧಿ, ಪ್ರತಿಭೆ ಯೋಜನೆ, ಅಂ–ಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್‌ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ,

ಶ್ರವಣದೋಷವುಳ್ಳ

ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನ ಸಲಕರಣೆಗಳ ಯೋಜನೆ ಹಾಗೂ ದೈಹಿಕ ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ದ್ವಿಚಕ್ರ ವಾಹನ ಯೋಜನೆಗಳಡಿ ಅರ್ಜಿ ಸಲ್ಲಿಸಬಹುದಾಗಿದೆ.

# ರಂಭಾಪುರಿ ಜಗದ್ಗುರುಗಳ ದಸರಾ ದರ್ಬಾರ್ ಕಾರ್ಯಕ್ರಮಕ್ಕೆ "ಮಾನವ ಧರ್ಮ ಸಭಾಮಂಟಪದ ಭೂಮಿ ಪೂಜೆ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಆ 25 ನಗರದಲ್ಲಿ ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 2ರ ವರೆಗೆ ಜರುಗಲಿರುವ ಶ್ರೀಮದ್ ರಂಭಾಪುರಿ ಜಗದ್ಗುರುಗಳವರ 34ನೇ ದಸರಾ ದರ್ಬಾರ್ ಕಾರ್ಯಕ್ರಮ ಪ್ರಯುಕ್ತ ಗೌರವ ಅಧ್ಯಕ್ಷರಾದ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ಪಾವನ ಸಾನಿಧ್ಯದಲ್ಲಿ ಸೋಮವಾರ ಅಕ್ಕಮಹಾದೇವಿ ಕಾಲೇಜು ಆವರಣದಲ್ಲಿ ಮಾನವ ಧರ್ಮ ಸಭಾಮಂಟಪದ ಭೂಮಿ ಪೂಜೆ ಹಾಗೂ ಪಂಚಾಚಾರ್ಯ



ಧ್ವಜಾರೋಹಣ ಕಾರ್ಯಕ್ರಮ ಜರುಗಿತು. ಪೂಜ್ಯಶ್ರೀ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು.

ಸ್ವಾಗತ ಸಮಿತಿಯ ಅಧ್ಯಕ್ಷರು ಹಾಗೂ ಸಚಿವರಾದ ಈಶ್ವರ ಬಿ. ಖಂಡ್ರೆ, ಕಾರ್ಯಾಧ್ಯಕ್ಷರು ಹಾಗೂ ತಾಲೂಕಿನ ಶಾಸಕರಾದ ಶರಣು ಸಲಗರ, ಮಾಜಿ ಎಂಎಲ್ಸಿ ವಿಜಯ್ ಸಿಂಗ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸ್ವಾಗತ ಸಮಿತಿಯ ಪದಾಧಿಕಾರಿಗಳು, ಸದಸ್ಯರು, ಗಣ್ಯರು ಉಪಸ್ಥಿತರಿದ್ದರು.

# ಸಾರ್ವಜನಿಕ ಗಣೇಶೋತ್ಸವ: ಗಜಾನನ ಮಂಡಳಿಗಳಿಗೆ ಕಟ್ಟುನಿಟ್ಟಿನ ಮಾರ್ಗಸೂಚಿ ಜಾರಿಗೊಳಿಸಿದ ಜೇಸ್ಕಾಂ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ 25 : ಬೀದರ ವಿಭಾಗದ ವ್ಯಾಪ್ತಿಯಲ್ಲಿನ ವಿವಿಧ ಸಂಘ/ಮಂಡಳಿಗಳ ವತಿಯಿಂದ ದಿನಾಂಕ 27–08–2025 ರಂದು ಆರಂಭವಾಗುವ ಗಣೇಶೋತ್ಸವ ಮತ್ತು ಮೆರವಣಿಗೆಗಳು ಜರುಗಲಿರುವ ಹಿನ್ನಲೆಯಲ್ಲಿ ಸಾರ್ವಜನಿಕರ ಜೀವ ಹಾಗೂ ಆಸ್ತಿ ಪಾಸ್ತಿಯ ಸುರಕ್ಷತೆಯನ್ನು ಖಾತ್ರಿಪಡಿಸಲು ಗು.ವಿ.ಸ.ಕಂ.ನಿ (ಜೇಸ್ಕಾಂ) ವತಿಯಿಂದ ನೀಡುವ ಸೂಚನೆಗಳನ್ನು ಸಾರ್ವಜನಿಕರು ಕಟ್ಟುನಿಟ್ಟಾಗಿ ಪಾಲಿಸುವಂತೆ ಬೀದರ ಗುವಿಸಕಂನಿ (ಜೇಸ್ಕಾಂ) ಕಾರ್ಯನಿರ್ವಾಹಕ ಇಂಜಿನೀಯರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯುತ್ ಸುರಕ್ಷತೆಗೆ ಪಾಲಿಸಬೇಕಾದ ಸೂಚನೆಗಳು: ಮಂಟಪ/ಪಂಡಾಲ್‌ಗಳ ನಿರ್ಮಾಣ ವೇಳೆ ಉನ್ನತ ಒತ್ತಡ (ಎಚ್‌ಟಿ) ಮತ್ತು ಕಡಿಮೆ ಒತ್ತಡ (ಎಲ್‌ಟಿ) ವಿದ್ಯುತ್ ಮಾರ್ಗಗಳಿಂದ ಕನಿಷ್ಠ 3 ಮೀಟರ ಅಂತರ ಕಾಯ್ದುಕೊಳ್ಳಬೇಕು. ಮೆರವಣಿಗೆಗಳಲ್ಲಿ ಬಳಸುವ ಧ್ವಜ/ ಕಂಬಗಳು ಅಥವಾ ಎತ್ತರದ ವಸ್ತುಗಳು ವಿದ್ಯುತ್ ತಂತಿಗಳಿಗೆ ತಾಗದಂತೆ 3 ಮೀ. ಅಡ್ಡ ಹಾಗೂ 2 ಮೀ. ಕೆಳ ಅಂತರ ಕಡ್ಡಾಯವಾಗಿ ಪಾಲಿಸಬೇಕು. ಲೋಹದಿಂದ ಮಾಡಿದ ಕಂಬ /ಧ್ವಜ ಆಧಾರಗಳನ್ನು ಬಳಕೆ ಮಾಡಬಾರದು. ಮೆರವಣಿಗೆ/ ಸಾರ್ವಜನಿಕ ಸಮಾರಂಭದಲ್ಲಿ 100 ಅಥವಾ ಹೆಚ್ಚು ಜನರು ಸೇರುವ ಸಂದರ್ಭಗಳಲ್ಲಿ, ಸಕ್ಷಮ ವಿದ್ಯುತ ಪರಿವೀಕ್ಷಕರ ಅನುಮತಿ ಪಡೆಯುವುದು ಕಡ್ಡಾಯ. ಅಧಿಕೃತವಾಗಿ ಮತ್ತು ಸುರಕ್ಷಿತವಾಗಿ ವಿದ್ಯುತ ಸಂಪರ್ಕ (ಟಜಣಜಡಿಜಜ ಛಿಕಟಟಿಜಛಿ–ಣಿಕಟಿ) ಪಡೆದು ವಿದ್ಯುತ್ ಬಳಸಬೇಕು. ಮಳೆ/ ಬಿರುಗಾಳಿ/ ಅನಿರೀಕ್ಷಿತ ಸಂದರ್ಭಗಳಿಗೆ ತಾತ್ಕಾಲಿಕ ಪವರ ಕಟ್ಟ ಆಗುವ ಸಾಧ್ಯತೆ ಇರುವುದರಿಂದ ಆಉ ಖಜಣ (ಜನರೇಟರ್) ವ್ಯವಸ್ಥೆಯನ್ನು ಕಡ್ಡಾಯವಾಗಿ ಹೊಂದಿರಬೇಕು.

ಪ್ರತಿಯೊಂದು ಪಂಡಾಲ್/ ವೇದಿಕೆಗಳಲ್ಲಿ ಎಥಿರ್‌ಂಗ್ ಮಾಡಿದ ಸ್ವಿಚ್ ಬೋರ್ಡ್, ಶಾಟ್ಸ್‌ಕ್ಯೂಟ್ಬ್ರೇಕರ್ (ಒಆಃ/ಖಅಆಃ), , ಇನ್ಸುಲೇಟೆಡ್ ಕೇಬಲ್‌ಗಳು ಬಳಕೆ ಮಾಡಬೇಕು. ಮಕ್ಕಳ ಹಾಗೂ ಸಾರ್ವಜನಿಕರು ತೆರೆದ ತಂತಿಗಳು, ಜೋಡಣೆಗಳು ಮತ್ತು ಸ್ಥಳೀಯ ಮಿನಿ–ಟ್ರಾನ್ಸ್‌ಫಾರ್ಮ ಪ್ರದೇಶಗಳಿಗೆ ಹತ್ತಿರ ಸೇರುವಂತಿಲ್ಲ.

ತುರ್ತು ಪರಿಸ್ಥಿತಿಗಳಿಗೆ ಸಂಬಂಧಿಸಿದಂತೆ ತಕ್ಷಣ ಸಂಪರ್ಕಿಸಲು ಸಂಬಂಧಪಟ್ಟ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ದೂರವಾಣಿ ಸಂಖ್ಯೆಗಳಿಗೆ ಸಂಪರ್ಕಿಸಬಹುದಾಗಿದೆ. ಉಪವಿಭಾಗ ಮೊ.ಸಂ. 24ಥ7 ನಿರಂತರ ಸೇವಾ ಕೇಂದ್ರ ಸಂಖ್ಯೆ, ಔರಾದ 9448274619/1912, ಭಾಲ್ಕಿ 9448274617/1912, ಬೀದರ ನಗರ 9448357570/ 1912, ಬೀದರ ಗ್ರಾಮೀಣ 9448470119/1912, ಕಮಠಾಣಾ 9448274612/1912 ಗೆ ಸಂಪರ್ಕಿಸಬಹುದಾಗಿದೆ.

ಕಾರಣ ಎಲ್ಲಾ ಸಂಘ–ಮಂಡಳಿಗಳು ಹಾಗೂ ಸಾರ್ವಜನಿಕರು ಈ ಮೇಲಿನ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಗಣೇಶೋತ್ಸವವನ್ನು ಸುರಕ್ಷಿತ ಹಾಗೂ ಹರ್ಷೋದ್ಗಾರದಿಂದ ಆಚರಿಸಲು ಸಹಕರಿಸಬೇಕೆಂದು ಅವರು ತಿಳಿಸಿದ್ದಾರೆ.

# ಹೋಟೆಲ್ ಮಾಲಿಕರ ಸಂಘದಿಂದ ಬಾಗಲಕೋಟೆಯಲ್ಲಿ ಪ್ರತಿಭಾ ಪುರಸ್ಕಾರ, ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.25–ನವನಗರದ ಡಾ.ಬಿ.ಆರ್.ಅಂಬೇಡ್ಕರಭವನದಲ್ಲಿ ಇತ್ತೀಚೆಗೆ ಹೋಟೆಲ್ ಮತ್ತು ಉಪಹಾರ ಮಂದಿರಗಳ ಸಂಘದಿಂದ ಹೋಟೆಲ್ ಮಾಲಿಕರಿಗೆ, ಕಾರ್ಮಿಕರಿಗೆ ಹಾಗೂ ಅವರ ಕುಟುಂಬಸ್ಥರಿಗೆ ಕ್ರೀಡಾಕೂಟ,ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದಲ್ಲಿ ಸಂಘದ ಸದಸ್ಯರ ಮಕ್ಕಳಿಗೆ ಹಾಗೂ ಕಾರ್ಮಿಕ ಮಕ್ಕಳಿಗೆ ಕ್ರೀಡೆಗಳು, ಶಿಕ್ಷಣದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.ಅಲ್ಲದೇ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಂಘದ ಸದಸ್ಯರನ್ನು ಸಹ ಸನ್ಮಾನಿಸಲಾಯಿತು. ಸಂಘದ ಕಾರ್ಯಾಧ್ಯಕ್ಷ ನೀಲಪ್ಪ ಬೇವೂರ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಂಘದ ಗೌರವಾಧ್ಯಕ್ಷ ರವೀಂದ್ರ ಪೂಜಾರಿ, ಕೋಶಾಧ್ಯಕ್ಷ ಶಿವರಾಜ್ ತಾಂಡೂರ, ಹಿರಿಯ ಸದಸ್ಯರಾದ ನಿತ್ಯಾನಂದ ಶೆಟ್ಟಿ,ಪವನ್ ಸೀಮಿಕೇರಿ,ಬಿ.ಎನ್. ರಾಮು, ಶಿವಕುಮಾರ ಬಳ್ಳಾರಿ, ಸೋನಾಲಾಲ ಗೌಡ, ಸುಭಾಸ ಜಮಾದಾರ,ಸಂತೋಷ ಜಕಾತಿ, ಚಿದಾನಂದ ತಾಳಿಕೋಟಿ, ರವಿ ಗಾಣಿಗ ಸೇರಿದಂತೆ ಇತರರು ಇದ್ದರು.

ಪ್ರಾರಂಭದಲ್ಲಿ ಗಿರೀಶ ಉಡುಪಿ ಪ್ರಾರ್ಥನಾ ಗೀತೆ ಹಾಡಿದರು. ಕಾರ್ಯದರ್ಶಿ ಶ್ರೀಧರ ದಾಸ್ ಕಾರ್ಯಕ್ರಮ ನಿರೂಪಿಸಿದರು.

# ಮಹಿಳೆಯರು ಉಚಿತ ಕಾನೂನು ಸೇವೆ ಪಡೆಯಿರಿ– ನ್ಯಾ. ಮಹಾಂತೇಶ ದರಗದ್




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಮಹಿಳೆಯರು ಕಾನೂನು ಸೇವಾ ಪ್ರಾಧಿಕಾರಗಳ ಮೂಲಕ ಉಚಿತವಾದ ಕಾನೂನು ಸೇವೆ ಪಡೆದುಕೊಳ್ಳುವಂತೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ್ ಹೇಳಿದರು.

ಅವರು ಬುಧವಾರ ಕೊಪ್ಪಳದ ಕೃಷಿ ವಿಸ್ತರಣಾ ತರಬೇತಿ ಸಂಸ್ಥೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಬೆಂಗಳೂರು. ದೇವದಾಸಿ ಪುನರ್ವಸತಿ ಯೋಜನೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮತ್ತು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ ಇವರ ಸಹಯೋಗದಲ್ಲಿ ಏರ್ಪಡಿಸಿದ್ದ ಮಾಜಿ ದೇವದಾಸಿ ಮಹಿಳೆಯರಿಗೆ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಖಾಯಂ ಜನತಾ ನ್ಯಾಯಾಲಯದ ಮೂಲಕ ಸಾರ್ವಜನಿಕರು ವ್ಯಾಜ್ಯಗಳನ್ನು ಬೇಗನೆ ಇತ್ಯರ್ಥ ಪಡಿಸಿಕೊಳ್ಳಬಹುದು. ಸರ್ಕಾರಿ ಇಲಾಖೆಗಳಿಂದ ತೊಂದರೆಗಳಾಗಿದ್ದರೆ ಜನತಾ ನ್ಯಾಯಾಲಯದ ಮೂಲಕ ಪರಿಹಾರವನ್ನು ಪಡೆದುಕೊಳ್ಳಬಹುದು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಪಿ.ವೈ ಶೆಟ್ಟೆಪ್ಪನವರ್ ಮಾತನಾಡಿ, ಮಾಜಿ ದೇವದಾಸಿ ಮಹಿಳೆಯರು ಜಾರಿಯಲ್ಲಿರುವ ಸರ್ಕಾರದ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕೃಷಿ ವಿಸ್ತರಣಾ ತರಬೇತಿ ಕೇಂದ್ರದ ವಿಸ್ತರಣಾ ಮುಂದಾಳು ಡಾ. ಎಂ.ವಿ ರವಿ ಅವರು ಮಾತನಾಡಿ, ಎಲ್ಲಾ ಮಹಿಳೆಯರು ತಂಬಾಕು ಮತ್ತು ಗುಟಕಾ ಸೇವನೆಯಂತಹ ದುಶ್ಚಟಗಳಿಂದ ದೂರವಿರಲು ಕರೆ ನೀಡಿದರು.

ಶಿಶು ಅಭಿವೃದ್ಧಿ ಯೋಜನಾಧಿಕಾರ ರೋಹಿಣಿ ಕೊಟಗಾರ ಅವರು, ಬಾಲ್ಯ ವಿವಾಹ ಮತ್ತು ಪೋ–ಕ್ಸೋ ಕಾಯ್ದೆ ಬಗ್ಗೆ ಮಾಹಿತಿ ನೀಡಿದರು.

ದೇವದಾಸಿ ಪುನರ್ವಸತಿ ಯೋಜನೆಯ ಯೋಜನಾಧಿಕಾರಿ ಪೂರ್ಣಿಮಾ ಅವರು, ದೇವದಾಸಿ ಮರು ಸಮೀಕ್ಷೆ ಕೈಗೊಳ್ಳುವ ಕುರಿತು ಮಾತನಾಡಿದರು.

ತಂಬಾಕು ವ್ಯಸನ ಕೇಂದ್ರ ಸೈಕಾಲೋಜಿಸ್ಟ್ ಶಾಂತಾ ಕಟ್ಟಿಮನಿ ಅವರು ಮಹಿಳೆಯರಿಗೆ ದುಶ್ಚಟಗಳಿಂದ ಬರಬಹುದಾದ ಕಾಯಿಲೆಗಳ ಬಗ್ಗೆ ಮಾಡನಾಡಿದರು.

ಈ ಕಾರ್ಯಕ್ರಮದಲ್ಲಿ 90 ಜನ ಮಾಜಿ ದೇವದಾಸಿ ಮಹಿಳೆಯರಿಗೆ ಆರೋಗ್ಯ ಇಲಾಖೆಯಿಂದ ಉಚಿತ ಆರೋಗ್ಯ ತಪಾಸಣೆಯನ್ನು ಮಾಡಲಾಯಿತು.

ಕಿಮ್ಸ್ ವೈದ್ಯಾಧಿಕಾರಿ ಡಾ.ಚನ್ನಕೇಶವ, ಡಾ.ಮುಖೇಶ, ಡಾ.ಅಮರೇಶ, ಡಾ.ಸುಷ್ಮಾ, ಸಖಿ ಕೇಂದ್ರದ ಯಮುನಾ, ಪಿ.ಐ.ಓ ರೇಣುಕಾ, ಸಕ್ಕೂಬಾಯಿ ಸೇರಿದಂತೆ ಇತರರು ಉಪಸ್ಥಿತರಿದ್ದರು. ಕೃಷ್ಣವೇಣಿ ಪ್ರಾರ್ಥನಾ ಗೀತೆ ಹಾಡಿದರೆ, ಅನುಷ್ಠಾನಾಧಿಕಾರಿ ದಾದೇಸಾಬ ಹಿರೇಮನಿ ಅವರು ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಜೆಸ್ಕಾಂ ನಗರ: ಇಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್,25– ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ 33ಕೆ.ವಿ ಪವರ್‌ಗ್ರಿಡ್ ವಿದ್ಯುತ್ ಮಾರ್ಗ ಸ್ಥಳಾಂತರ ಕಾಮಗಾರಿ ಕೈಗೊಂಡ ದ ಆಗಸ್ಟ್ 26ರ ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 03 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ನೊಂದಣಿ ಸಂಖ್ಯೆ : ಸ. ನಿ, ಬೀ. 1/ನೊಂದಣಿ /954/2006–07

## ಪ್ರಗತಿ ಪತ್ತಿನ ಸೌಹಾರ್ದ ಸಹಕಾರ ನಿಯಮಿತ, ಭಾಲ್ಕಿ

ತಾ॥ ಭಾಲ್ಕಿ ಜಿ॥ ಬೀದರ ( ಕರ್ನಾಟಕ ರಾಜ್ಯ )

Pragati Pattin Souhard Sahakar Niyamit Bhalki Tq. Bhalki, Dist. Bidar ( K. S.)

Ref. No. 03/25-26. Date:25-08-2025

ಪತ್ರಿಕಾ ಪ್ರಕಟಣೆಗಾಗಿ

## ಪ್ರಗತಿ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತ

ಭಾಲ್ಕಿ ಜಿ. ಬೀದರ ದಿನಾಂಕ: 25.08.2025

***** 19 ನೇ ವಾರ್ಷಿಕ ಸಾಮಾನ್ಯ ಸಭೆ *****

ಈ ನೋಟಿಸ್ ಮೂಲಕ ಸಂಘದ ಸರ್ವ ಸದಸ್ಯರಿಗೆ ತಿಳಿಸುವದೇನೆಂದರೆ ದಿನಾಂಕ:16.09.2025 ರಂದು ಸಮಯ 12.30 ಗಂಟೆಗೆ ಪ್ರಗತಿ ಪತ್ತಿನ ಸೌಹಾರ್ದ ಸಹಕಾರಿಯ ಕಾರ್ಯಾಲಯದ ಆವರಣದಲ್ಲಿ ಸಂಘದ ವರ್ಷ 2024–25 ನೇ ಸಾಲಿನ ವಾರ್ಷಿಕ ಮಹಾಸಭೆಯನ್ನು ಕರೆಯಲಾಗಿದೆ. ಅದಕ್ಕಾಗಿ ತಾವು ದಯಮಾಡಿ ಸಮಯಕ್ಕೆ ಸರಿಯಾಗಿ ಹಾಜರಿದ್ದು, ಈ ಕೆಳಕಂಡ ವಿಷಯಗಳ ಮೇಲೆ ಚರ್ಚಿಸಿ ಮಹಾಸಭೆಯನ್ನು ಯಶಸ್ವಿಗೊಳಿಸಬೇಕಾಗಿ ವಿನಂತಿ.

***** ಚರ್ಚಿಸತಕ್ಕಂಥ ವಿಷಯಗಳು *****

1. ಮಹಾಸಭೆಯ ನೋಟಿಸ್ ಓದಿ ರಿಕಾರ್ಡ ಮಾಡುವದು
2. ಹಿಂದಿನ ಮಹಾ ಸಭೆಯ ಗೊತ್ತುವಳಿಯನ್ನು ಓದಿ ದೃಢಿಕರಿಸುವದು
3. 2024–25 ನೇ ಸಾಲಿನ ಜಮಾ–ಖರ್ಚು, ಲಾಭ–ಹಾನಿ, ವ್ಯವಹಾರದ ಖಾತೆ ಹಾಗು ಆಸ್ತಿ ಜವಾಬ್ದಾರಿ ತಖ್ತೆಗಳನ್ನು ಪರಿಸಿಲಿಸುವದು ಮತ್ತು ಅಂಗಿಕರಿಸುವದು
4. 2024–25ನೇ ಅಡಿಟ್ ವರದಿಯನ್ನು ಪರಿಸಿಲಿಸುವದು ಮತ್ತು ಆಡಳಿತ ಮಂಡಳಿಯವರು ನೀಡುವ ಸಮಜಾಯಸಿಗಳಿಗೆ ಒಪ್ಪಿಗೆ ನೀಡುವದು
5. 2025–26 ನೇ ಸಾಲಿನ ಆಯ–ವ್ಯಯ ಅಂದಾಜು ಪತ್ರಿಕೆಯನ್ನು ಪರಿಶೀಲಿಸಿ ಒಪ್ಪಿಗೆ ನೀಡುವದು
6. 2024–25 ನೇ ಸಾಲಿನ ಅಡಿಟ್ ವರದಿಯನ್ನು ಸಹಕಾರಿಯ ಕಛೇರಿಯಲ್ಲಿ ವಿಕ್ಷಿಸಲು ಇಡಲಾಗಿದೆ
7. ಸಮಗ್ರ ಉಪವಿಧಿ, (ಬೈಲಾ ತಿದ್ದುಪಡಿ ಮಾಡುವ ಬಗ್ಗೆ
8. ಇತರ ವಿಷಯಗಳು ಅಧ್ಯಕ್ಷರ ಅಪ್ಪಣೆ ಮೇರೆಗೆ

ಇವರಿಗೆ
ಶ್ರೀಮತಿ ಶ್ರೀ..................................

ಸಹಿ/–
ಮುಖ್ಯ ಕಾರ್ಯನಿರ್ವಾಹಕರು
ಪ್ರಗತಿ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತ ಭಾಲ್ಕಿ

# ಗಣೇಶ ಹಬ್ಬ :ಮದ್ಯ ಮಾರಾಟ ನಿಷೇಧ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.25–ಜಿಲ್ಲೆಯಾದ್ಯಂತ ಗಣೇಶ ಹಬ್ಬದ ಪ್ರಯುಕ್ತ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಆಗಸ್ಟ 27 ರಿಂದ ಸೆಪ್ಟೆಂಬರ 16 ವರೆಗೆ ಮದ್ಯಪಾನಿಯಗಳ ಮಾರಾಟ ಮತ್ತು ಸಾಗಾಣಿಕೆಯನ್ನು ನಿಷೇಧಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಸಂಗಪ್ಪ ಆದೇಶ ಹೊರಡಿಸಿದ್ದಾರೆ.

ಬಾಗಲಕೋಟೆ ತಾಲೂಕಿನಾದ್ಯಂತ ಆಗಸ್ಟ 26ರ ಮಧ್ಯರಾತ್ರಿಯಿಂದ 28ರ ಬೆಳಿಗ್ಗೆ 6 ಗಂಟೆಯವರೆಗೆ, ಆ.30ರ ಮಧ್ಯರಾತ್ರಿಯಿಂದ ಸೆ.1 ಬೆಳಿಗ್ಗೆ 6 ಗಂಟೆಯವರೆಗೆ, ಸೆ.1 ರ ಮಧ್ಯರಾತ್ರಿಯಿಂದ ಸೆ.3ರ ಬೆಳಿಗ್ಗೆ 6 ಗಂಟೆಯವರೆಗೆ, ಸೆ.3ರ ಮಧ್ಯರಾತ್ರಿಯಿಂದ ಸೆ.5 ಬೆಳಿಗ್ಗೆ 6 ಗಂಟೆಯವರೆಗೆ ನಿಷೇಧ ಹೇರಲಾಗಿದೆ.

ಬೀಳಗಿ ತಾಲೂಕಿನಾದ್ಯಂತ ಆ.26ರ ಮಧ್ಯರಾತ್ರಿಯಿಂದ 28ರ ಬೆಳಿಗ್ಗೆ 6 ಗಂಟೆ, ಆ.30ರ ಮಧ್ಯರಾತ್ರಿಯಿಂದ ಸೆ.1 ಬೆಳಿಗ್ಗೆ 6 ಗಂಟೆ, ಸೆ.1ರ ಮಧ್ಯರಾತ್ರಿಯಿಂದ ಸೆ.3 ಬೆಳಿಗ್ಗೆ 6 ಗಂಟೆ, ಸೆ.3ರ ಮಧ್ಯರಾತ್ರಿಯಿಂದ ಸೆ.5 ಬೆಳಿಗ್ಗೆ 6 ಗಂಟೆ,ಸೆ.5ರ ಮಧ್ಯರಾತ್ರಿಯಿಂದ ಸೆ.7 ಬೆಳಿಗ್ಗೆ 6 ಗಂಟೆ ಹಾಗೂ ಸೆ.15ರ ಮಧ್ಯರಾತ್ರಿಯಿಂದ ಸೆ.17 ಬೆಳಿಗ್ಗೆ 6 ಗಂಟೆಯವರೆಗೆ ನಿಷೇಧಿಸಲಾಗಿದೆ.

ಹುನಗುಂದ ತಾಲೂಕಿನಾದ್ಯಂತ ಆ.26ರ ಮಧ್ಯರಾತ್ರಿಯಿಂದ 28ರ ಬೆಳಿಗ್ಗೆ 6 ಗಂಟೆ, ಆ.30ರ ಮಧ್ಯರಾತ್ರಿಯಿಂದ ಸೆ.1 ಬೆಳಿಗ್ಗೆ 6 ಗಂಟೆ, ಸೆ.1ರ ಮಧ್ಯರಾತ್ರಿಯಿಂದ ಸೆ.3 ಬೆಳಿಗ್ಗೆ 6 ಗಂಟೆ, ಸೆ.3ರ ಮಧ್ಯರಾತ್ರಿಯಿಂದ ಸೆ.5 ಬೆಳಿಗ್ಗೆ 6 ಗಂಟೆ, ಸೆ.5ರ ಮಧ್ಯರಾತ್ರಿಯಿಂದ ಸೆ.7 ಬೆಳಿಗ್ಗೆ 6 ಗಂಟೆ, ಇಲಕಲ್ಲ ತಾಲೂಕಿನಾದ್ಯಂತ ಆ.26ರ ಮಧ್ಯರಾತ್ರಿಯಿಂದ 28 ಬೆಳಿಗ್ಗೆ 6 ಗಂಟೆ,ಆ.30ರ ಮಧ್ಯರಾತ್ರಿಯಿಂದ ಸೆ.1 ಬೆಳಿಗ್ಗೆ 6 ಗಂಟೆ, ಸೆ.1ರ ಮಧ್ಯರಾತ್ರಿಯಿಂದ ಸೆ.3 ಬೆಳಿಗ್ಗೆ 6 ಗಂಟೆ, ಸೆ.5ರ ಮಧ್ಯರಾತ್ರಿಯಿಂದ ಸೆ.7 ಬೆಳಿಗ್ಗೆ 6 ಗಂಟೆಯವರೆಗೆ ನಿಷೇಧಿಸಲಾಗಿದೆ.

ಬಾದಾಮಿ ಮತ್ತು ಗುಳೇದಗುಡ್ಡ ತಾಲೂಕಿನಾದ್ಯಂತ ಆ.26ರ ಮಧ್ಯರಾತ್ರಿಯಿಂದ 28 ಬೆಳಿಗ್ಗೆ 6 ಗಂಟೆ,ಆ.30ರ ಮಧ್ಯರಾತ್ರಿಯಿಂದ ಸೆ.1 ಬೆಳಿಗ್ಗೆ 6 ಗಂಟೆ, ಸೆ.1ರ ಮಧ್ಯರಾತ್ರಿಯಿಂದ ಸೆ.3 ಬೆಳಿಗ್ಗೆ 6 ಗಂಟೆ, ಸೆ.3ರ ಮಧ್ಯರಾತ್ರಿಯಿಂದ ಸೆ.7 ಬೆಳಿಗ್ಗೆ 6 ಗಂಟೆಯವರೆಗೆ. ಜಮಖಂಡಿ ತಾಲೂಕಿನಾದ್ಯಂತ ಆ.26ರ ಮಧ್ಯರಾತ್ರಿಯಿಂದ 28 ಬೆಳಿಗ್ಗೆ 6 ಗಂಟೆ, ಆ.30 ಮಧ್ಯರಾತ್ರಿಯಿಂದ 31 ಬೆಳಿಗ್ಗೆ 6 ಗಂಟೆ, ಸೆ.1ರ ಮಧ್ಯರಾತ್ರಿಯಿಂದ ಸೆ.2 ಬೆಳಿಗ್ಗೆ 6 ಗಂಟೆ, ಸೆ.3ರ ಮಧ್ಯರಾತ್ರಿಯಿಂದ ಸೆ.4 ಬೆಳಿಗ್ಗೆ 6 ಗಂಟೆ, ಸೆ.5ರ ಮಧ್ಯರಾತ್ರಿಯಿಂದ ಸೆ.6 ಬೆಳಿಗ್ಗೆ 6 ಗಂಟೆಯವರೆಗೆ ನಿಷೇಧ ವಿಧಿಸಲಾಗಿದೆ.

ರಬಕವಿ–ಬನಹಟ್ಟಿ ಮತ್ತು ತೇರದಾಳ ತಾಲೂಕಿನಾದ್ಯಂತ ಆ.26ರ ಮಧ್ಯರಾತ್ರಿಯಿಂದ 30 ಬೆಳಿಗ್ಗೆ 6 ಗಂಟೆ, ಆ.30ರ ಮಧ್ಯರಾತ್ರಿಯಿಂದ 31 ಬೆಳಿಗ್ಗೆ 6 ಗಂಟೆ, ಸೆ.1ರ ಮಧ್ಯರಾತ್ರಿಯಿಂದ ಸೆ.3 ಬೆಳಿಗ್ಗೆ 6 ಗಂಟೆ, ಸೆ.3ರ ಮಧ್ಯರಾತ್ರಿಯಿಂದ ಸೆ.5 ಬೆಳಿಗ್ಗೆ 6 ಗಂಟೆ, ಸೆ.5ರ ಮಧ್ಯರಾತ್ರಿಯಿಂದ ಸೆ.7 ಬೆಳಿಗ್ಗೆ 6 ಗಂಟೆ ಹಾಗೂ ಸೆ.7 ಮಧ್ಯರಾತ್ರಿಯಿಂದ ಸೆ.9 ಬೆಳಿಗ್ಗೆ 6 ಗಂಟೆಯವರೆಗೆ ಮತ್ತು ಮುಧೋಳ ತಾಲೂಕಿನಾದ್ಯಂತ ಆ.26ರ ಮಧ್ಯರಾತ್ರಿಯಿಂದ ಆ.28 ಬೆಳಿಗ್ಗೆ 6 ಗಂಟೆ,ಆ.30ರ ಮಧ್ಯರಾತ್ರಿಯಿಂದ ಸೆ.1 ಬೆಳಿಗ್ಗೆ 6 ಗಂಟೆ, ಸೆ.1ರ ಮಧ್ಯರಾತ್ರಿಯಿಂದ ಸೆ.3 ಬೆಳಿಗ್ಗೆ 6 ಗಂಟೆ, ಸೆ.3ರ ಮಧ್ಯರಾತ್ರಿಯಿಂದ ಸೆ.7 ಬೆಳಿಗ್ಗೆ 6 ಗಂಟೆ ಹಾಗೂ ಸೆ.7ರ ಮಧ್ಯರಾತ್ರಿಯಿಂದ ಸೆ.9 ಬೆಳಿಗ್ಗೆ 6 ಗಂಟೆವರೆಗೆ ನಿಷೇಧಿಸಿ ಆದೇಶ ಹೊರಡಿಸಿದ್ದಾರೆ.

ಈ ಆದೇಶ ಉಲ್ಲಂಘಿಸಿದಲ್ಲಿ ಅಬಕಾರಿ ಕಾಯ್ದೆ 1965ರಡಿ 6 ತಿಂಗಳುಗಳಿಂದ 5 ವರ್ಷದವರೆಗೆ ಜೈಲು ಶಿಕ್ಷೆ ಹಾಗೂ 10 ಸಾವಿರದಿಂದ 50 ಸಾವಿರ ರೂ.ಗಳ ವರೆಗೆ ದಂಡವಿಧಿಸಲಾಗುತ್ತದೆ. ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಕಾಯ್ದೆ 2023ರಡಿ ಸಾರ್ವಜನಿಕ ಶಾಂತಿಭಂಗ ಅಥವಾ ಅಧಿಕಾರಿಗಳ ಆದೇಶ ಉಲ್ಲಂಘಿಸಿದರೆ 1 ವರ್ಷವರೆಗೆ ಜೈಲು ಶಿಕ್ಷೆ ಮತ್ತು ಹೆಚ್ಚುವರಿ ದಂಡ ವಿಧಿಸಲಾಗುತ್ತದೆ. ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಉಪ ವಿಭಾಗಾಧಿಕಾರಿಗಳು, ಜಿಲ್ಲಾ ಅಬಕಾರಿ ಅಧಿಕಾರಿಗಳು, ತಹಶೀಲ್ದಾರರು ಮತ್ತು ಸ್ಥಳೀಯ ಪೊಲೀಸ್ ಠಾಣೆಯ ಅಧಿಕಾರಿಗಳು ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವಂತೆ ಆದೇಶದಲ್ಲಿ ತಿಳಿಸಿದ್ದಾರೆ.

# ವಿವಿಧ ಕಾಮಗಾರಿಗಳು ಕೈಗೊಳ್ಳಲು ಸಚಿವ ಜಾರಕಿಹೊಳಿಗೆ ಶಾಸಕ ತುನ್ನೂರು ಮನವಿ.

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಯಾದಗಿರಿ ಮತಕ್ಷೇತ್ರದಲ್ಲಿನ ಎನ್ ಜಿಓ ವಸತಿ ಗೃಹಗಳ, ಪ್ರವಾಸಿ ಮಂದಿರ ಮತ್ತು ಭೀಮಾ ಸೇತುವೆ ದುರಸ್ತಿ ಮತ್ತು ನಿರ್ಮಾಣ ಕಾಮಗಾರಿಗಳಿಗೆ ಅನುಮೊದನೆ ನೀಡಿ ಅನುದಾನ ಬಿಡುಗಡೆ ಮಾಡಬೇಕೆಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಅವರು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರಿಗೆ ಭಾನುವಾರ ಮನವಿ ಸಲ್ಲಿಸಿದ್ದಾರೆ.



ಇಲ್ಲಿನ ಅತಿಥಿ ಗೃಹದಲ್ಲಿ ಸಚಿವರನ್ನು ಭೇಟಿ ಮಾಡಿದ ಅವರು, ತಮ್ಮ ಮತಕ್ಷೇತ್ರದ ಲೋಕೋಪಯೋಗಿ ಇಲಾಖೆ ವ್ಯಾಪ್ತಿಯ ಸರ್ಕಾರಿ ವಸತಿ ಗೃಹಗಳು ಐವತ್ತು ವರ್ಷಗಳ ಹಿಂದೆ ನಿರ್ಮಾಣಗೊಂಡಿದ್ದು, ಅವುಗಳಲ್ಲಿ 30 ಕಟ್ಟಡಗಳು ಶಿಥಿಲಾವಸ್ಥೆಗೆ ತಲುಪಿವೆ. ಕಾರಣ ಹೊಸ ಕಟ್ಟಡಗಳ ನಿರ್ಮಾಣಕ್ಕೆ ಅನುದಾನ ನೀಡಬೇಕೆಂದು ಮನವಿಯಲ್ಲಿ ಕೊರಿದ್ದಾರೆ.

ವಿವಿಐಪಿ ಪ್ರವಾಸ ಮಂದಿರ, ಭೀಮಾ ಸೇತುವೆ ದುರಸ್ತಿ ಹಾಗೂ ಹೊಸ ಸೇತುವೆ ನಿರ್ಮಾಣಕ್ಕಾಗಿ ಈಗಾಗಲೇ ಇಲಾಖೆಯಿಂದ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಈ ಎಲ್ಲ ಕಾಮಗಾರಿಗಳಿಗೆ ಅನುಮೊದನೆ ನೀಡಿ ಅಗತ್ಯ ಅನುದಾನ ಬಿಡುಗಡೆ ಮಾಡುವಂತೆಯೇ ಶಾಸಕರು ಸಚಿವರಿಗೆ ಸಲ್ಲಿಸಿದ ಕಾಮಗಾರಿಗಳ ಪಟ್ಟಿಯೊಂದಿಗೆ ಮನವಿ ಮಾಡಿದ್ದಾರೆ.

ಮನವಿ ಸ್ವೀಕರಿಸಿದ ಸಚಿವರು ಸ್ಪಂದಿಸಿದ್ದಾರೆ.

# ಕೊಪ್ಪಳ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರ: ಸದಸ್ಯ ಸ್ಥಾನಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲೆಯ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರದಲ್ಲಿ ಖಾಲಿ ಇರುವ ನಾಗರೀಕ ಸಮಾಜದ ಸದಸ್ಯ ಸ್ಥಾನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ತಮ್ಮ ಹೆಸರು ಮತ್ತು



ವೈಯಕ್ತಿಕ ಮಾಹಿತಿ ಯೊಂದಿಗೆ 15 ದಿನಗಳೊಳಗಾಗಿ ಅರ್ಜಿಯನ್ನು ಜಿಲ್ಲಾ ಪೊಲೀಸ್ ಕಛೇರಿಗೆ ಖುದ್ದಾಗಿ ಸಲ್ಲಿಸುವಂತೆ ಕೊಪ್ಪಳ ಜಿಲ್ಲಾ ಪೊಲೀಸ್ ಅಧೀಕ್ಷಕರು ಹಾಗೂ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಡಾ.ರಾಮ್ ಎಲ್.ಅರಸಿದ್ದಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭೋಸಗಾ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ನೂತನ ಎಸ್ ಡಿ ಎಂ ಸಿ ರಚನೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಆ 25 ತಾಲೂಕಿನ ಭೋಸಗಾ ಗ್ರಾಮದಲ್ಲಿ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ನೂತನ ಎಸ್. ಡಿ.ಎಂ.ಸಿ.ರಚನೆ ಮಾಡಲಾಯಿತು. ನೂತನ ಅಧ್ಯಕ್ಷರಾಗಿ ಶ್ರೀರಂಗ ರಾಮ್ ನಾರಾಯಣಪುರೆ. ಉಪಾಧ್ಯಕ್ಷರಾಗಿ ಕಾವೇರಿ ಮಹೇಶ್. ಸದಸ್ಯರಾಗಿ ಲಕ್ಷ್ಮಣ್ ಸಾಯಿಬಣ್ಣ . ಕೃಷ್ಣಾ ರಾಚಪ್ಪ ಗಾಯಕ್ವಾಡ್. ರಾಜಕುಮಾರ ಗೋವಿಂದ. ಶ್ರೀರಾಮ ಮಾರುತಿ. ಅರವಿಂದ್ ದಶರಥ. ಸಿದ್ದಲಿಂಗ ಬಾಬು. ಗಜಾನಂದ ಬಾಬು. ಅನುರಾಧ ವಿಶ್ವನಾಥ್. ಸು–ರೇಖಾ ಯಾದವ್ . ಗಂಗಮ್ಮ ಅಂಬಣ್ಣಾ . ಅನ್ನಪೂರ್ಣ ಅಂಬಾದಾಸ್. ಸವಿತಾ ನಾರಾಯಣ್ . ಲಲಿತ ಅಶೋಕ್ . ಯಾಸ್ಮಿನ್ ಮೊಹ್ಮದ್ ರಫಿ. ಅಂಬಿಕಾ ಶಿವಕುಮಾರ್. ಆಯ್ಕೆಯಾಗಿದ್ದಾರೆ. ಭೋಸಗಾ ವಲಯದ ಸಿ. ಆರ್. ಪಿ. ಗಳಾದ ಅಣ್ಣೆಪ್ಪ ಚಿಟ್ಟಂಪಲ್ಲೆ. ಶಾಲೆಯ ಮುಖ್ಯ ಗುರುಗಳಾದ ಡಾ. ಮಾರುತಿ ಪೂಜಾರಿ ಬಗದುರಿ. ಅಂಬಾರಾಯ ಉಗಾಜಿ. ಭೀಮಶಾ ಗಾಯಕವಾಡ ಹಾಗೂ ಶಿಕ್ಷಕರು ಮತ್ತು ಶಿಕ್ಷಕಿಯರು ಅಭಿನಂದಿಸಿದರು.

# ಗ್ರಾಮೀಣ ಭಾಗದ ಅಭಿವೃದ್ಧಿಗೆ ಬದ್ಧ: ಡಾ. ಶೈಲೇಂದ್ರ ಬೆಲ್ದಾಳೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ವಿಶೇಷ ಕಾಳಜಿ ವಹಿಸಿ ಸರ್ಕಾರದ ವಿವಿಧ ಇಲಾಖೆಗಳಿಂದ ಅನುದಾನ ತಂದು ಜನರಿಗಾಗಿ ದುಡಿದು ಕ್ಷೇತ್ರ ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದು ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ತಿಳಿಸಿದರು. ತಾಲೂಕಿನ ನಿರ್ಣಾ ಗ್ರಾಮದ ಹೊರವಲಯದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ 18 ಕೋಟಿ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಾಣವಾಗಲಿರುವ ಡಾ.ಬಿ.ಆರ್. ಅಂಬೇಡ್ಕರ್ ರವರ ಬಾಲಕಿಯರ ವಸತಿ ಶಾಲೆ ಕಟ್ಟಡ ನಿರ್ಮಾಣ ಕಾಮಗಾರಿ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಗ್ರಾಮೀಣ ಭಾಗಗಳ ಸಮಗ್ರ ಅಭಿವೃದ್ಧಿಗೆ ಹತ್ತಾರು ಯೋಜನೆಗಳ ಕಾಮಗಾರಿಗೆ ಚಾಲನೆ ನೀಡಿ ಶಿಕ್ಷಣ, ಆರೋಗ್ಯ ಮೂಲ ಸೌಕರ್ಯಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಪಂಚಾಯತ್ ವ್ಯಾಪ್ತಿಯ ಗ್ರಾಮಗಳಿಗೆ ಪ್ರಮುಖವಾಗಿ ಕುಡಿಯುವ ನೀರು, ರಸ್ತೆ ಚರಂಡಿ ಸ್ವಚ್ಚತೆ, ಉತ್ತಮ ಪರಿಸರ ನಿರ್ಮಾಣ ಸೇರಿದಂತೆ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಅಧಿಕಾರಿಗಳು ಹೆಚ್ಚಿನ ನಿಗಾ ವಹಿಸಿ ಕೆಲಸ ಮಾಡಬೇಕು. ಪ್ರಮುಖವಾಗಿ ಮೂಲ ಸೌಲಭ್ಯಗಳ ಕೊರತೆ ಎದುರಿಸುತ್ತಿದ್ದ ಗ್ರಾಮಗಳಿಗೆ ಗ್ರಾಮಸ್ಥರ ಸಾಕಷ್ಟು ವರ್ಷಗಳ ಬೇಡಿಕೆಯಾಗಿದ್ದ ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ.ಮುಂದಿನ ದಿನಗಳಲ್ಲಿ ಕ್ಷೇತ್ರದ ಪ್ರಗತಿಗೆ ಮತ್ತಷ್ಟು ನೆರವು ನೀಡಲಾಗುವುದು ಎಂದು ಹೇಳಿದರು. ಕ್ಷೇತ್ರದ ಬಡಜನರ ಕಲ್ಯಾಣಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಹಲವು ಮಹತ್ವದ ಕ್ರಮಗಳನ್ನು ಕೈಗೊಂಡಿದೆ ಪ್ರತಿಯೊಂದು ಯೋಜನೆ ಜನರ ಮನೆ ಬಾಗಿಲಿಗೆ ತಲುಪಿಸುವುದು ನನ್ನ ಜವಾಬ್ದಾರಿ ಈ ನಿಟ್ಟಿನಲ್ಲಿ ಶ್ರಮಿಸಲಾಗುತ್ತಿದೆ. ಗ್ರಾಮೀಣ ಪ್ರದೇಶದ ಮೂಲಸೌಕರ್ಯಗಳಿಗೆ ಒತ್ತು ನೀಡಿರುವುದು ಪಾರದರ್ಶಕತೆ ಮತ್ತು ಕೆಳಹತಂದ ಜನರಿಗೂ ಅನುಕೂಲಗಳನ್ನು ತ್ವರಿತವಾಗಿ ತಲುಪಿಸಲಾಗುವುದು. ಅಧಿಕಾರಿಗಳು, ಗುತ್ತಿಗೆದಾರರು ಕಾಮಗಾರಿ ಉತ್ತಮವಾಗಿ ಪೂರ್ಣಗೊಳಿಸಬೇಕು ಎಂದು ಸೂಚಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷೆ ಗೀತಾ ಎಂ. ಜೋಗಣಿ, ಉಪಾಧ್ಯಕ್ಷ ಸಂಜೀಕುಮಾರ ಕಿರಣ, ಪಿಡಿಓ ಬಸವರಾಜ ಗುಗ್ಗರಿ, ಮುಖಂಡರಾದ ಸುರೇಶ ಮಾಶೆಟ್ಟಿ, ಮಾಣಿಕಪ್ಪ ಖಾಶೆಂಪುರ, ಚಂದ್ರಯ್ಯ ಸ್ವಾಮಿ, ಶ್ರೀನಿವಾಸ ಪೊದ್ದಾರ, ಫಾಳೇಪ್ಪ ಚಟ್ಟನಳ್ಳಿ, ಡಾ. ರವಿ ಸ್ವಾಮಿ ನಿರ್ಣಾ, ಶಿವರಾಜ, ಜಗನ್ನಾಥ ಮಜಗೆ, ರಾಜು ಪಸಾರ, ಚನ್ನಬಸಪ್ಪ ಸೊಪ್ಪಣ್ಣ, ವೆಂಕಟರೆಡ್ಡಿ, ನರಸ್ನಾ ರೆಡ್ಡಿ, ಕೃಷ್ಣ ರೆಡ್ಡಿ, ಶರಣು ಪಾಟೀಲ, ಸುನೀತಾ ಮಂಗಲಗಿ, ಸತೀಶ್ ತೆಳಮನಿ, ಮಹೇಶ, ಗೋಪಾಲ, ಶಂಕರ ಉದಗೀರೆ, ಈರಯ್ಯ ಸ್ವಾಮಿ, ರಮೇಶ ಧೂಳ, ದಿಲೀಪ್ ಪಸಾರ, ಭದ್ರಪ್ಪ ಭದ್ರಪ್ಪನೋರ, ಸಂಜು ಬಿಜಾಪುರ, ಅರುಣಕುಮಾರ ಬಾವಗಿ, ಬಸವ ನಿರ್ಣಾ, ರಮೇಶ ಧೋಳ, ವೀರಶೆಟ್ಟಿ ನಾಗವಾರ, ಮಂಜುನಾಥ್, ಈಶ್ವರ, ವಿಜಯಕುಮಾರ, ಶಾಮರಾವ ಮತ್ತಿತರು ಉಪಸ್ಥಿತರಿದ್ದರು.

# ಪ್ರತಿಯೊಬ್ಬರು ಕಡ್ಡಾಯವಾಗಿ ಪ್ರತಿ ವರ್ಷ ಹವನ ಮಾಡಿ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ತಾಲ್ಲೂಕಿನ ನಿರ್ಣಾ ಗ್ರಾಮದ ಆರ್ಯ ಸಮಾಜದಲ್ಲಿ ಹಮ್ಮಿಕೊಂಡಿದ್ದ ಶ್ರಾವಣ ಮಾಸದ ವೇದ ಪ್ರಚಾರ ಸಪ್ತಾಹ ಮಹಾಯಜ್ಞ, ಮಂಗಲೋತ್ಸವ ಕಾರ್ಯಕ್ರಮದಲ್ಲಿ ಪಂಡಿತರಾದ ಶ್ರದ್ಧಾನಂದ ಶಾಸ್ತ್ರಿ ಜೀ ಮಾತನಾಡಿ, ಪ್ರತಿಯೊಬ್ಬ ನಾಗರಿಕರು ಕಡ್ಡಾಯವಾಗಿ ಪ್ರತಿ ವರ್ಷ ಹವನ ಮಾಡಿ ಪರಿಸರ ಶುಧತೆಗೆ ಸಹಾಯ ಮಾಡಬೇಕೆಂದು, ತಂದೆ ತಾಯಿಗಳನ್ನು ದೇವರಂತೆ



ಗೌರವಿಸಿ ಪೂಜಿಸಬೇಕೆಂದು ಹೇಳಿದರು. ಉಪ ಪ್ರಧಾನ ಗಣೇಶ ಆರ್ಯ ಮಾತನಾಡಿ, ಶ್ರದ್ಧಾನಂದ ಶಾಸ್ತ್ರಿವರು ನಿರ್ಣಾ ಗ್ರಾಮದಲ್ಲಿ ಹುಟ್ಟಿ ನಿರ್ಣಾದ ಧಾರ್ಮಿಕ ಕ್ಷೇತ್ರದಲ್ಲಿ ಅದ್ಭುತ ಸಾಧನೆ ಮಾಡಿರುವ ಪಂಡಿತರಾದ ಶ್ರದ್ಧಾನಂದ ಶಾಸ್ತ್ರಿ ಜೀ ರವರ ಕೊಡುಗೆ ಆರ್ಯ ಸಮಾಜಕ್ಕೆ ಅಪಾರವಾಗಿದೆ ಎಂದರು. ಪ್ರತಿ ವರ್ಷ ತಪ್ಪಲಾರದೆ ತಮ್ಮ ಹುಟ್ಟುರು ನಿರ್ಣಾದಲ್ಲಿ ಶ್ರಾವಣ ಪರ್ವ ಹಾಗೂ ವೇದಕಥಾ ಕಾರ್ಯಕ್ರಮ ಹಮ್ಮಿಕೊಂಡು ಯಜ್ಞ ಮತ್ತು ಆರ್ಯ ಸಮಾಜದ ತತ್ವವನ್ನು ಮನೆ ಮನೆಗೆ ಮುಟ್ಟಿಸುತ್ತಿದ್ದಾರೆ ಎಂದು ತಿಳಿಸಿದರು. ಶ್ರಾವಣ ಮಂಗಲೋತ್ಸವ ಅಂಗವಾಗಿ ಐದು ಪಂಚ ಯಜ್ಞಗಳು ಸಡಗರದಿಂದ ಜರುಗಿದವು.

ಈ ಸಂದರ್ಭದಲ್ಲಿ ನಿರ್ಣಾ ಆರ್ಯ ಸಮಾಜದ ಪ್ರಧಾನ ಮಲ್ಲಪ್ಪಾ ಗೊಲ್ಲರ, ಮಂತ್ರಿ ಸಂಗಪ್ಪ ಹಾಳೋಳ್ಳಿ ನಿರ್ಣಾ, ಕೋಶಾಧ್ಯಕ್ಷ ಸಂಜೀವಕುಮಾರ ಕುಂಬಾರ, ಪ್ರಚಾರ ಮಂತ್ರಿ ರಾಜಕುಮಾರ ಮೇತ್ರಸ್ಕರ್, ವೇದಕುಮಾರ್ ಔರಾದಕರ್, ಆನಂದ ಉಪಾರ್, ಕೃಷ್ಣ ಔರಾದಕರ್, ರಮೇಶ ಸೇರಿದಂತೆ ಸುತ್ತ ಮುತ್ತಲಿನ ಆರ್ಯ ಸಮಾಜದ ಮುಖಂಡರು ಮಹಿಳಾ ತಾಯಿಯಂದಿಯರು, ಮಕ್ಕಳು ಹಾಗೂ ನಿರ್ಣಾ ಗ್ರಾಮಸ್ಥರು ಉಪಸ್ಥಿತರಿದ್ದರು. ಶ್ರಾವಣ ಸಮಾಸದ ಮಂಗಲೋತ್ಸವ ನಿಮಿತ್ಯ ಅನ್ನ ದಾಸೋಹ ಜರುಗಿತು.

## ಮಡಿವಾಳೇಶ್ವರ ರುದ್ರ ಅಭಿಷೇಕ ನಿಮಿತ್ತ ಅನ್ನದಾಸೋಹ





ಕಮಲನಗರ:ತಾಲೂಕಿನ ಡಿಗ್ಗಿ ಗ್ರಾಮದ ಮಡಿವಾಳೇಶ್ವರ ಜಾತ್ರೆ ಕಾರ್ಯಕ್ರಮದಲ್ಲಿ ಗ್ರಾಮದ ಹೆಣ್ಣುಮಕ್ಕಳು ದೇವರಿಗೆ ಆರುತಿ ಬೆಳಗ್ಗಿ, ದೀಪ ಹಚ್ಚಿದರು. ಈ ಸಂದರ್ಭದಲ್ಲಿ ರಾಧಾ ಮುಚ್ಚಳಂಬೆ, ಸಪ್ನಾ ತೊಂಡಾರೆ, ಉಷಾಕ್ಕಾ ಪುರಾಣಿಕ, ಅಂಬಿಕಾ, ಜಯಶ್ರೀ, ರಾಮಿಕಾ, ಭಾಗ್ಯಶ್ರೀ,ನಂಬ್ರತಾ ಸೇರಿದಂತೆ ಇತರ ಇದ್ದರು.

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.25:ತಾಲೂಕಿನ ಡಿಗ್ಗಿ ಗ್ರಾಮದ ಆರಾಧ್ಯದೇವರಾದ ಮಡಿವಾಳೇಶ್ವರ

ದೇವಾಲಯದಲ್ಲಿ ಶ್ರಾವಣ ಮಾಸ ನಿಮಿತ್ಯನಿರಂತರವಾಗಿ ಒಂದು ತಿಂಗಳ ಭಜನೆ ಕಾರ್ಯಕ್ರಮ ಸೋಮವಾರ ರುದ್ರ ಅಭಿಷೇಕದೊಂದಿಗೆ ಸಮಾಪ್ತಿ ಮಾಡಲಾಯಿತು.

ಬೆಳಿಗ್ಗೆ 8 ಗಂಟೆಯಿಂದ 12 ಗಂಟೆಯವರೆಗೆ ಪೂಜೆ, ಅರ್ಚನೆ, ಭಜನೆ ಮಾಡುವ ಮೂಲಕ ಬಹಳ ವಿಜೃಂಭಣೆಯಿಂದ ನಡಿಯಿತು. ನಂತರ ಭವ್ಯವಾದ ಮಡಿವಾಳೇಶ್ವರ ದೇವರ ಮೂರ್ತಿಯನ್ನು ಅಲಂಕಾಸಿರಿ ಭಕ್ತರ ದರ್ಶನಕ್ಕೆ ಇಡಲಾಯಿತು.

ಡಿಗ್ಗಿ ಗ್ರಾಮ ಸೇರಿದಂತೆ ಗಡಿ ಮಹಾರಾಷ್ಟ್ರರಾಜ್ಯ ಹಾಗೂ ವಿವಿಧ ಗ್ರಾಮದಿಂದ

ಬಂದ ಭಕ್ತರು ಮಹಾಪ್ರಸಾದ ಸೇವನೆ ಮಾಡಿದರು.

ಭಕ್ತರಿಗಾಗಿ ವಿಶೇಷ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು, ಗೋಧಿ ಹುಗ್ಗಿ,ಹಾಲು, ತುಪ್ಪ,ಚಪಾತಿ, ಸಪ್ಪನಬೆಳಿ, ಚೆಟ್ನಿ, ಅನ್ನ,ಸಾಂಬಾರ, ಪಾಪಡ ಪ್ರಸಾದವನ್ನು ಸವಿದು ಆನಂದ ಪಟ್ಟರು.

ಈ ಸಂದರ್ಭದಲ್ಲಿ ಮಡಿವಾಳೇಶ್ವರ ದೇವಾಲಯ ಟ್ರಸ್ಟ್'ನ ಪದಾಧಿಕಾರಿಗಳು, ಗ್ರಾಮದ ಯುವಕರು, ಹಿರಿಯರು, ಅಕ್ಕನ ಬಳಗ, ಅಣ್ಣನ ಬಳಗ ಸೇರಿದಂತೆ ಇನ್ನಿತರ ಇದ್ದರು.

## ಹೇಮರೆಡ್ಡಿ ಮಲ್ಲಮ್ಮ ಮಂದಿರ: ಶ್ರಾವಣ ಸಮಾಪ್ತಿ



ಬೀದರ. ಆ. 25 : ಶ್ರಾವಣ ನಿಮಿತ್ತ ಇಲ್ಲಿಯ ಅಮಲಾಪುರ ರಸ್ತೆಯಲ್ಲಿ ಇರುವ ಹೇಮರೆಡ್ಡಿ ಮಲ್ಲಮ್ಮ ಮಂದಿರದಲ್ಲಿ ಆಯೋಜಿಸಿದ್ದ ಒಂದು ತಿಂಗಳ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಭಾನುವಾರ ಮುಕ್ತಾಯಗೊಂಡವು.

ಹೇಮರೆಡ್ಡಿ ಮಲ್ಲಮ್ಮ ಅವರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಸಂಗೀತ ಹಾಗೂ ಭಕ್ತಿ ಸೇವೆ ಗೈದವರನ್ನು ಸನ್ಮಾನಿಸಲಾಯಿತು.

ಜಿಲ್ಲಾ ರೆಡ್ಡಿ ಸಮಾಜದ ಅಧ್ಯಕ್ಷ ಶಂಕರ ರೆಡ್ಡಿ ಚಿಟ್ಟಾ, ಗೋಪಾಲ್ ರೆಡ್ಡಿ, ರಾಜರೆಡ್ಡಿ ಶೇರಿಕಾರ್, ರಾಜು ಚಿಂತಾಮಣಿ, ಶಾಲಿನಿ ಚಿಂತಾಮಣಿ, ಸಂಗ್ರಾಮ ರೆಡ್ಡಿ, ಪೆಂಟಾರೆಡ್ಡಿ, ಸಂಜೀವ್ ರೆಡ್ಡಿ ಜಂಪಾ, ರವಿ ರೆಡ್ಡಿ, ವೆಂಕಟ ರೆಡ್ಡಿ, ರಾಜ-ರೆಡ್ಡಿ ಚಿದ್ರಿ, ಚಂದ್ರಶೇಖರ ರೆಡ್ಡಿ, ಬಲವಂತ ರೆಡ್ಡಿ, ಶ್ರೀನಿವಾಸ್ ರೆಡ್ಡಿ, ಸುಭಾಷ್ ರೆಡ್ಡಿ, ಭಜನಾ ಮಂಡಳಿ ಸದಸ್ಯರಾದ ವಿಜಯಲಕ್ಷ್ಮಿ ಶೆಟಕಾರ್, ವಿಜಯಲಕ್ಷ್ಮಿ, ಕರುಣಾರೆಡ್ಡಿ, ಸ್ವರೂಪಾ ರೆಡ್ಡಿ ಮತ್ತಿತರರು ಇದ್ದರು.

## ಸ್ವಾತಂತ್ರ್ಯಕ್ಕೆ ಸಾಹಿತಿಗಳ ಕೊಡುಗೆ ಅನನ್ಯ



ಬೀದರ. ಆ. 25 : ದೇಶದ ಸ್ವಾತಂತ್ರ್ಯಕ್ಕೆ ಸಾಹಿತಿಗಳ ಕೊಡುಗೆ ಅನನ್ಯವಾಗಿದೆ ಎಂದು ಚಿದಂಬರ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಹಾವಗಿರಾವ್ ಮೈಲಾರೆ ಹೇಳಿದರು.

ನಗರದ ಸದ್ಗುರು ಸಿದ್ಧಾರೂಢ ಮಹಿಳಾ ಪದವಿ ಕಾಲೇಜಿನಲ್ಲಿ ಸೋಮವಾರ ನಡೆದ ಸ್ವಾತಂತ್ರ್ಯ ಚಳವಳಿಯಲ್ಲಿ ಸಾಹಿತ್ಯದ ಪಾತ್ರ ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಲೇಖನಿ ಖಡ್ಗಕ್ಕಿಂತ ಹರಿತವಾದದ್ದು. ಅದರಿಂದ ಮೂಡುವ ಅಕ್ಷರಗಳು ಜನರಲ್ಲಿ ಜಾಗೃತಿ ಉಂಟು ಮಾಡುತ್ತವೆ ಎಂದು ತಿಳಿಸಿದರು.

ಉದ್ಘಾಟನೆ ನೆರವೇರಿಸಿದ ಚಿದಂಬರ ಶಿಕ್ಷಣ ಸಂಸ್ಥೆಯ ನಿರ್ದೇಶಕ ಸ್ವಾತ್ಮಾನಂದಗಿರಿ ಸ್ವಾಮೀಜಿ ಮಾತನಾಡಿ, ಸಾಹಿತ್ಯ ಅರಮನೆ ಇದ್ದ ಹಾಗೆ. ಅದರಲ್ಲಿ ಮುತ್ತು, ರತ್ನಗಳೂ ಸಿಗುತ್ತವೆ. ಅದರೊಳಗೆ ಪ್ರವೇಶಿಸಿದವನಿಗೆ ಮಾತ್ರ ಅದರ ಮಹತ್ವ ಗೊತ್ತಾಗುತ್ತದೆ ಎಂದು ಹೇಳಿದರು.

ಪ್ರಾಚಾರ್ಯ ನಾಗಪ್ಪ ಜಾನಕನೋರ ಮಾನಾಡಿ, ಸ್ವಾತಂತ್ರ್ಯ ಹೋರಾಟ ರೂಪಿಸುವಲ್ಲಿ ಸಾಹಿತಿಗಳು ಹಾಗೂ ಪತ್ರಕರ್ತರು ಮಹತ್ವದ ಪಾತ್ರ ವಹಿಸಿದ್ದರು ಎಂದು ತಿಳಿಸಿದರು.

ಸಾಹಿತಿ ಎಸ್.ಎಂ. ಜನವಾಡಕರ್ ಮಾತನಾಡಿ, ಕಾವ್ಯ, ಕಾದಂಬರಿ, ವಚನ, ಕೀರ್ತನೆ ಕೃತಿಗಳು ಹಾಗೂ ನಾಟಕಗಳು ಸ್ವಾತಂತ್ರ್ಯ ಹೋರಾಟಕ್ಕೆ ಪ್ರೇರಣೆ ಆದವು ಎಂದು ಹೇಳಿದರು.

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಪ್ರಾದೇಶಿಕ ಕೇಂದ್ರದ ನಿರ್ದೇಶಕ ಪ್ರೊ. ಆರ್.ವಿ. ಗಂಗಶೆಟ್ಟಿ ಮಾತನಾಡಿ, ಕನ್ನಡ ಭಾಷೆ ಹಾಗೂ ಸಾಹಿತ್ಯದ ಬೆಳವಣಿಗೆಗೆ ಎಲ್ಲರೂ ಶ್ರಮಿಸಬೇಕು ಎಂದು ಹೇಳಿದರು.

ಸಾಹಿತಿ ಡಾ. ಸಂಗಪ್ಪ ತೌಡಿ ಮಾತನಾಡಿ, ದ.ರಾ. ಬೇಂದ್ರೆ, ಡಿ.ಎಸ್. ಕರ್ಕಿ, ಹುಯಿಲ್‌ಗೋಳ ನಾರಾಯಣಪ್ಪ ಮತ್ತಿತರರು ಸ್ವಾತಂತ್ರ್ಯ ಚಳವಳಿಗೆ ಕೊಡುಗೆ ನೀಡಿದ್ದರು ಎಂದು ಸ್ಮರಿಸಿದರು.

ಚಕೋರ ಸಾಹಿತ್ಯ ವೇದಿಕೆಯ ಜಿಲ್ಲಾ ಸಂಚಾಲಕಿ ಡಾ. ಮುಕ್ತುಂಬಿ ಮಾತನಾಡಿ, ಗಡಿ ಭಾಗದಲ್ಲಿ ಮಾತೃ ಭಾಷೆ ಕನ್ನಡವನ್ನು ಇನ್ನಷ್ಟು ಗಟ್ಟಿಗೊಳಿಸಬೇಕಿದೆ. ಅನ್ಯ ಭಾಷೆಗಳ ಪ್ರಭಾವದ ಮಧ್ಯೆ ಕನ್ನಡತನ ಉಳಿಸಬೇಕಿದೆ ಎಂದು ತಿಳಿಸಿದರು.

ಉಪನ್ಯಾಸಕರಾದ ನಟರಾಜ, ರಾಜಶೇಖರ, ನೆಹರೂ ಪವಾರ್, ಬಸವರಾಜ ಬಿರಾದಾರ, ಮಂಗಲಾ, ಶ್ವೇತಾ, ರಾಜಮ್ಮ ನೇಳಗೆ, ಅರ್ಚನಾ, ಸಪ್ನಾ, ವಿಜಯಲಕ್ಷ್ಮಿ, ಸಿಬ್ಬಂದಿ ಆಕಾಶ್, ಶೋಭಾ ಇದ್ದರು.

ಉಪನ್ಯಾಸಕಿ ರಾಖಿ ಕಾಡಗೆ ನಿರೂಪಿಸಿದರು. ಈಶ್ವರ ರೆಡ್ಡಿ ಸ್ವಾಗತಿಸಿದರು. ಶ್ರೀಲತಾ ವಂದಿಸಿದರು.

ಬೆಂಗಳೂರಿನ ಕರ್ನಾಟಕ ಸಾಹಿತ್ಯ ಅಕಾಡೆಮಿ, ಚಕೋರ ಸಾಹಿತ್ಯ, ವಿಚಾರ ವೇದಿಕೆ ಹಾಗೂ ಸದ್ಗುರು ಸಿದ್ಧಾರೂಢ ಮಹಿಳಾ ಪದವಿ ಕಾಲೇಜು ವತಿಯಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

## ಹವಾ ಮಲ್ಲಿನಾಥ ಮಹಾರಾಜ ಜನ್ಮದಿನ: ಬ್ಯಾರಿಕೇಡ್ ಹಸ್ತಾಂತರ ಇಂದು





ಬೀದರ. ಆ. 25 : ಜೈ ಭಾರತ ಮಾತಾ ಸೇವಾ ಸಮಿತಿಯ ರಾಷ್ಟ್ರೀಯ ಸಂಸ್ಥಾಪಕ ಅಧ್ಯಕ್ಷ ಹವಾ ಮಲ್ಲಿನಾಥ ಮಹಾರಾಜರ ಜನ್ಮದಿನದ ನಿಮಿತ್ತ ಸಮಿತಿಯು ಮಂಗಳವಾರ (ಆ. 26) ಬೆಳಿಗ್ಗೆ 11.30ಕ್ಕೆ ಇಲ್ಲಿಯ ಜಿಲ್ಲಾ ಪೊಲೀಸ್ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಆವರಣದಲ್ಲಿ ಬ್ಯಾರಿಕೇಡ್ ಹಸ್ತಾಂತರ ಕಾರ್ಯಕ್ರಮ ಹಮ್ಮಿಕೊಂಡಿದೆ.


ಸಂಸದ ಸಾಗರ್ ಖಂಡ್ರೆ ಹಾಗೂ ಬೀದರ್ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಜಂಟಿಯಾಗಿ ಕಾರ್ಯಕ್ರಮ ಉದ್ಘಾಟಿಸುವರು.

ಹುಲಸೂರಿನ ಶಿವಾನಂದ ಸ್ವಾಮೀಜಿ, ಹಲಬರ್ಗಾದ ಹಾವಗಿಲಿಂಗೇಶ್ವರ ಶಿವಾಚಾರ್ಯ, ಮಳಚಾಪುರದ ಸದ್ರೂಪಾನಂದ ಸ್ವಾಮೀಜಿ ಸಾನಿಧ್ಯ, ಜೈ ಭಾರತ ಮಾತಾ ಸೇವಾ ಸಮಿತಿಯ ಭಾಲ್ಕಿ ತಾಲ್ಲೂಕು ಅಧ್ಯಕ್ಷ ಪಪ್ಪು ಪಾಟೀಲ ಖಾನಾಪುರ ಅಧ್ಯಕ್ಷತೆ ವಹಿಸುವರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ, ಡಿವೈಎಸ್‌ಪಿ, ಶಿವನಗೌಡ ಪಾಟೀಲ, ಸಂಚಾರ ಠಾಣೆ ಸಿಪಿಐ ಬಾಬುರಾವ್ ಪಾಟೀಲ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಹವಾ ಮಲ್ಲಿನಾಥ ಮಹಾರಾಜರ ಜನ್ಮದಿನವನ್ನು ಪ್ರತಿ ವರ್ಷ ಸಾಮಾಜಿಕ ಕಾರ್ಯಗಳೊಂದಿಗೆ ಆಚರಿಸುತ್ತಾ ಬರಲಾಗಿದೆ. ಈ ಬಾರಿ ಪೊಲೀಸ್ ಇಲಾಖೆಗೆ ಬ್ಯಾರಿಕೇಡ್ ವಿತರಣೆ ಮೂಲಕ ಜನ್ಮದಿನ ಆಚರಿಸಲಾಗುತ್ತಿದೆ ಎಂದು ಪಪ್ಪು ಪಾಟೀಲ ಖಾನಾಪುರ ತಿಳಿಸಿದ್ದಾರೆ.

## ನಾಳೆ ಬೀದರ್ ಮುಕ್ತಿಧಾಮದಲ್ಲಿ ತಮಲೂರು ಶ್ರೀಗಳ ಜನ್ಮ ದಿನೋತ್ಸವ



ಬೀದರ. ಆ. 25 :ನಾಳೆ(27/08/2025) ಬುಧವಾರ ಗಣೇಶ ಚತುರ್ಥಿ ದಿನದಂದು ಮಧ್ಯಾಹ್ನ12 ಗಂಟೆಗೆ ತಮಲೂರು ಹಿರೇಮಠ ಸಂಸ್ಥಾನದ ಪರಮ ಪೂಜ್ಯಶ್ರೀ ಶಿವಾನಂದ ಮಹಾಸ್ವಾಮಿಗಳವರ 58ನೇ ಜನ್ಮ ದಿನೋತ್ಸವ ಬೀದರ್ ನಗರದ ಪ್ರತಾಪನಗರ ಬಡಾವಣೆಯಲ್ಲಿರುವ ಮುಕ್ತಿಧಾಮದಲ್ಲಿ ಸಡಗರ ಹಾಗೂ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಪ್ರತಿ ವರ್ಷದಂತೆ ಈ ವರ್ಷವೂ ಸಹ ಜಿಲ್ಲೆಯ ಉಸ್ತುವಾರಿ ಮಂತ್ರಿಗಳು, ಸ್ಥಳಿಯ ಶಾಸಕರು, ವಿಧಾನ ಪರಿಷತ್ ಸದಸ್ಯರು, ಸಂಸದರು ಸೇರಿದಂತೆ ಗಣ್ಯಾತಿಗಣ್ಯರ ಸಮ್ಮುಖದಲ್ಲಿ ಹಾಗೂ ವಿವಿಧ ಮಠಾಧೀಶರ ಸನ್ನಿಧಾನದಲ್ಲಿ ತಮಲೂರು ಶ್ರೀಗಳ ಸದ್ಭಕ್ತರಿಂದ ಹುಟ್ಟು ಹಬ್ಬ ಆಚರಿಸಲಾಗುತ್ತಿದೆ. ಶ್ರೀಗಳ ಜನ್ಮದಿನದ ಪ್ರಯುಕ್ತ ಕಾರ್ಯಕ್ರಮದ ಮುನ್ನಾದಿನ ಮಂಗಳವಾರ ಹಲವು ಧಾರ್ಮಿಕ ಕಾರ್ಯಕ್ರಮಗಳು, ರುದ್ರಾಭಿಷಕ, ಭಜನೆ, ಪ್ರವಚನ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಕಾರಣ ಶ್ರೀಗಳ ಸದ್ಭಕ್ತರು ಜನ್ಮದಿನೋತ್ಸವ ಸಂದರ್ಭದಲ್ಲಿ ಪಾಲ್ಗೊಂಡು ಶ್ರೀಗಳ ಆಶಿರ್ವಾದಕ್ಕೆ ಪಾತ್ರರಾಗಬೇಕೆಂದು ಶ್ರೀಗಳ ಸದ್ಭಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡ ನಾಮಫಲಕ ಆದೇಶ ಪಾಲನೆಗೆ ಆಗ್ರಹ



ಬೀದರ. ಆ. 25 : ನಗರದ ಅಂಗಡಿ ಮುಂಗಟ್ಟುಗಳ ನಾಮಫಲಕಗಳ ಮೇಲ್ಭಾಗದ ಶೇ 60 ರಷ್ಟು ಸ್ಥಳದಲ್ಲಿ ಕನ್ನಡ ಬಳಕೆ ಆದೇಶ ಪಾಲನೆಗೆ ಕ್ರಮ ಕೈಗೊಳ್ಳಬೇಕು ಎಂದು ನಮ್ಮ ಕರ್ನಾಟಕ ಸೇನೆ ಒತ್ತಾಯಿಸಿದೆ.

ಸೇನೆಯ ಪದಾಧಿಕಾರಿಗಳು ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಜ್ಯಾಂತಿ ಅವರ ನೇತೃತ್ವದಲ್ಲಿ ನಗರದಲ್ಲಿ ಸೋಮವಾರ ಪೌರಾಯುಕ್ತ ಶಿವರಾಜ ರಾಠೋಡ್ ಅವರಿಗೆ ಈ ಕುರುತು ಮನವಿ ಪತ್ರ ಸಲ್ಲಿಸಿದರು. ನಾಮಫಲಕಗಳ ಶೇ 60 ರಷ್ಟು ಭಾಗದಲ್ಲಿ ಕನ್ನಡ ಬಳಕೆ ಕಡ್ಡಾಯಗೊಳಿಸಿ ರಾಜ್ಯ ಸರ್ಕಾರ 2024ರ ಆಗಸ್ಟ್ 22 ರಂದು ಆದೇಶ ಹೊರಡಿಸಿದೆ. ಆದರೆ, ಬೀದರನಲ್ಲಿ ಆದೇಶ ಪಾಲನೆ ಆಗುತ್ತಿಲ್ಲ. ನಗರಸಭೆ ಕಚೇರಿ ನಾಮಫಲಕದಲ್ಲಿ ಅನ್ಯ ಭಾಷೆಯನ್ನೂ ಬಳಸಲಾಗಿದೆ ಎಂದು ದೂರಿದರು. ಸರ್ಕಾರದ ಆದೇಶ ಪಾಲನೆಗೆ ಕ್ರಮ ಕೈಗೊಳ್ಳದಿದ್ದಲ್ಲಿ ಬರುವ ದಿನಗಳಲ್ಲಿ ಕನ್ನಡ ಬಳಸದ ಕಚೇರಿ, ಖಾಸಗಿ ಆಸ್ಪತ್ರೆ, ಮಳಿಗೆ, ಅಂಗಡಿ ಮುಂಗಟ್ಟುಗಳ ನಾಮಫಲಕಗಳಿಗೆ ಕಪ್ಪು ಮಸಿ ಬಳಿಯಲಾಗುವುದು ಎಂದು ಎಚ್ಚರಿಕೆ ನೀಡಿದರು. ನಗರ ಸೌಂದರ್ಯ ವೃದ್ಧಿಗೆ ಆಕರ್ಷಕ ಕಂಬಗಳನ್ನು ಅಳವಡಿಸಿ, ಬೀದಿದೀಪ ಹಾಕಲಾಗಿದೆ. ಆದರೆ, ಕಾರ್ಯಕ್ರಮಗಳ ಬ್ಯಾನರ್‌ಗಳು ಕಂಬಗಳ ಅಂದಗೆಡಿಸುತ್ತಿವೆ ಎಂದು ಆಪಾದಿಸಿದರು. ಬೀದಿ ದೀಪ ಕಂಬಕ್ಕೆ ಬ್ಯಾನರ್‌ಗಳು ಅಳವಡಿಸದಂತೆ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಅಂತಹ ಬ್ಯಾನರ್‌ಗಳನ್ನು ಹರಿದು ಹಾಕಲಾಗುವುದು ಎಂದು ಎಚ್ಚರಿಕೆ ನೀಡಿದರು. ವೇದಿಕೆಯ ಜಿಲ್ಲಾ ಘಟಕದ ಉಪಾಧ್ಯಕ್ಷ ಶಶಿಕಾಂತ್ ಅಷ್ಟೂರೆ, ಪ್ರಧಾನ ಕಾರ್ಯದರ್ಶಿ ಸಂಜು ಯಾದವ್, ಪ್ರಧಾನ ಸಂಚಾಲಕ ಸುಧಾಕರ್ ರಾಠೋಡ್, ಅನಿಲ್ ರಾಜಗೀರಾ, ಸಂತೋಷ್ ಮಳಚಾಪುರೆ, ಸಂತೋಷ್ ಪಾಟೀಲ, ರವಿ ಪಾಟೀಲ, ಸಾಯಿ ಕಿರಣ್, ಬಸ್ಸು ದಾನಿ, ರಾಜಕುಮಾರ ಸ್ವಾಮಿ, ಕರಣ್ ತವರ್, ಅಪ್ಪು ಸ್ವಾಮಿ ಮತ್ತಿತರರು ಇದ್ದರು.

# ರೈತರಿಗೆ ಅನ್ಯಾಯವಾಗಲು ಬಿಡುವುದಿಲ್ಲ: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಔರಾದ:ಅ.25:ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಔರಾದ(ಬಿ) ತಾಲ್ಲೂಕಿನ ಧುಡುಕನಾಳ ಹಾಗೂ ಮಾನೂರ ಗ್ರಾಮಗಳ ವ್ಯಾಪ್ತಿಯಲ್ಲಿ ಆ.24ರಂದು ಸಂಚರಿಸಿ ಮಳೆಯಿಂದ ಉಂಟಾಗಿರುವ ಬೆಳೆ ಹಾನಿಯನ್ನು ಪರಿಶೀಲಿಸಿ ರೈತರ ಸಮಸ್ಯೆಗಳನ್ನು ಆಲಿಸಿದರು.

ಬೆಳೆ ಹಾನಿ ಸಮೀಕ್ಷೆ ಕುರಿತು ರೈತರು ತೀವ್ರ ಬೇಸರ ವ್ಯಕ್ತಪಡಿಸುತ್ತಿದ್ದಾರೆ. ಅಧಿಕಾರಿಗಳು ಎಲ್ಲ ಕೃಷಿ ಭೂಮಿಗಳಿಗೆ ಓಡಾಡುವುದಿಲ್ಲವೆಂದು ದೂರು ಹೇಳುತ್ತಿದ್ದಾರೆ. ಈ ಬಾರಿ ಹೀಗಾಗಬಾರದು ಸಮೀಕ್ಷಾ ಕಾರ್ಯದ ಜವಾಬ್ದಾರಿ ವಹಿಸಿರುವ ಕಂದಾಯ, ಕೃಷಿ, ತೋಟಗಾರಿಕೆ ಸೇರಿದಂತೆ ಎಲ್ಲ ಅಧಿಕಾರಿಗಳು ತಪ್ಪದೇ ಬೆಳೆಹಾನಿಯಾದ ಕೃಷಿ ಭೂಮಿಗಳಿಗೆ ಹೋಗಿ ವಾಸ್ತವ ಪರಿಸ್ಥಿತಿಯನ್ನು ವರದಿ ಮಾಡಬೇಕೆಂದು ತಿಳಿಸಿದರು.

ಧುಡುಕನಾಳ ಸೇತುವೆ ನಿರ್ಮಾಣ ಕೆಲಸ ಸ್ಥಗಿತಗೊಂಡ ಕಾರಣದಿಂದಾಗಿ ಪಕ್ಕದಲ್ಲಿ ನಿರ್ಮಿಸಿದ್ದ ತಾತ್ಕಾಲಿಕ ಸೇತುವೆ ಮಳೆಯಿಂದ ಕೊಚ್ಚಿಕೊಂಡು ಹೋಗಿದ್ದು, ಯಾವುದೇ ವಾಹನಗಳು ಗ್ರಾಮಕ್ಕೆ ಬರಲು ಸಾಧ್ಯವಾಗುತ್ತಿಲ್ಲ. ನಮ್ಮ ಊರಿನ ವಿದ್ಯಾರ್ಥಿಗಳು, ಔರಾದ(ಬಿ), ಎಕಂಬಾ ಹಾಗೂ ಮತ್ತಿತರೆ ಕಡೆ ಶಾಲೆ-ಕಾಲೇಜುಗಳಿಗೆ ಹೋಗುತ್ತಾರೆ. ಸದ್ಯಕ್ಕೆ ರಸ್ತೆ ಸಂಪರ್ಕ ಕಡಿತಗೊಂಡಿರುವುದರಿಂದ ಗ್ರಾಮಕ್ಕೆ ಬಸ್‌ಗಳು ಬರುತ್ತಿಲ್ಲ. ಹಾಗಾಗಿ ವಿದ್ಯಾರ್ಥಿಗಳು ಶಾಲೆ-ಕಾಲೇಜುಗಳಿಗೆ ಹೋಗಲು ಸಾಧ್ಯವಾಗುತ್ತಿಲ್ಲವೆಂದು ಗ್ರಾಮಸ್ಥರು ಶಾಸಕರೆದು ತಮ್ಮ ಅಳಲನ್ನು ತೋಡಿಕೊಂಡರು.

ಈ ವೇಳೆ ಸಂಬಂಧಪಟ್ಟ ಅಧಿಕಾರಿಗಳನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ ಸಮಸ್ಯೆ ಇತ್ಯರ್ಥಪಡಿಸುವಂತೆ ಸೂಚಿಸಿದರು. ಇದೇ ವೇಳೆ ಕೆಎಸ್‌ಆರ್‌ಟಿಸಿ ಡಿಪೋ ವ್ಯವಸ್ಥಾಪಕರನ್ನು ಸಂಪರ್ಕಿಸಿ ಪರ್ಯಾಯ ಮಾರ್ಗದ ಮೂಲಕ ಧುಡಕನಾಳ ಗ್ರಾಮಕ್ಕೆ ಬಸ್ ಸಂಚಾರ ಕೂಡಲೇ ಆರಂಭಿಸುವಂತೆ ನಿರ್ದೇಶನ ನೀಡಿದರು.

ಮಹಾರಾಷ್ಟ್ರದ ದೇಗಲೂರ ತಾಲ್ಲೂಕಿನಲ್ಲಿ ಬರುವ ಯೆಡೂರ ಕೆರೆಯಲ್ಲಿ ಉಂಟಾಗಿರುವ ಸಮಸ್ಯೆಯಿಂದಾಗಿ ಅಲ್ಲಿನ ನೀರು ಮಹಾರಾಷ್ಟ್ರ-ಕರ್ನಾಟಕ ಗಡಿಯಲ್ಲಿರುವ ಮಾನೂರ(ಕೆ) ಗ್ರಾಮದ ವ್ಯಾಪ್ತಿಯಲ್ಲಿನ ಕೃಷಿ ಭೂಮಿಗಳಿಗೆ ನುಗ್ಗಿ ಅಪಾರ ಪ್ರಮಾಣದ ಬೆಳೆ ಹಾನಿಯಾಗಿದೆ. ಬೆಳೆದು ನಿಂತಿದ್ದ ಹತ್ತಿ, ತೊಗರಿ, ಉದ್ದು, ಹೆಸರು, ಸೋಯಾಬೀನ್ ಬೆಳೆಗಳು ಮುಳುಗಡೆಯಾಗಿವೆ ಎಂದು ರೈತರು ಶಾಸಕರೆದುರು ಸಮಸ್ಯೆ ಹಂಚಿಕೊಂಡರು.

ಬೆಳೆಹಾನಿಯನ್ನು ವೀಕ್ಷಿಸಬೇಕು. ಮತ್ತು ರೈತರ ಸಮಸ್ಯೆಗಳನ್ನು ಆಲಿಸಬೇಕು ಎಂಬ ಉದ್ದೇಶದಿಂದಲೇ ಹಾನಿ ಪ್ರದೇಶಗಳಿಗೆ ಭೇಟಿ ನೀಡುತ್ತಿದ್ದೇನೆ. ಈಗಾಗಲೇ ಕ್ಷೇತ್ರದಲ್ಲಿ ಸಂಚರಿಸಿ ಮಾಹಿತಿಯನ್ನು ಪಡೆದಿದ್ದೇನೆ. ಈ ಕುರಿತಂತೆ ಮುಖ್ಯಮಂತ್ರಿಗಳು ಮತ್ತು ಸಂಬಂಧಪಟ್ಟ ಸಚಿವರನ್ನು ಭೇಟಿಯಾಗಿದ್ದು, ಅಧಿವೇಶನದಲ್ಲಿಯೂ ವಿಷಯ ಪ್ರಸ್ತಾಪಿಸಿದ್ದೇನೆ. ನಾನು ರೈತರ ಜೊತೆಗಿದ್ದೇನೆ. ಬೆಳೆ ಹಾನಿಯಾದ ರೈತರಿಗೆ ಪರಿಹಾರ ಕೊಡಿಸುವ ವರೆಗೂ ಸುಮ್ಮನಿರುವುದಿಲ್ಲ. ರೈತರು ಯಾವುದೇ ಕಾರಣಕ್ಕೂ ಆತಂಕಕ್ಕೆ ಒಳಗಾಗದಿರಿ ಎಂದು ಧೈರ್ಯ ತುಂಬಿದರು.

ನಂತರ ನಾಂದೇಡ ಜಿಲ್ಲಾಧಿಕಾರಿಗಳನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ, ಮಹಾರಾಷ್ಟ್ರ-ಕರ್ನಾಟಕ ಗಡಿಯಲ್ಲಿರುವ ಯೆಡೂರ ಕೆರೆಯಲ್ಲಿನ ಸಮಸ್ಯೆಯಿಂದಾಗಿ ಅಲ್ಲಿನ ನೀರು ಮಾನೂರ ಗ್ರಾಮದ ಕೃಷಿ ಭೂಮಿಗಳಿಗೆ ನುಗ್ಗಿ ಸಾಕಷ್ಟು ಬೆಳೆ ಹಾನಿಯಾಗಿದೆ. ಪ್ರತಿ ಮಳೆಗಾದಲ್ಲಿಯೂ ಈ ರೀತಿಯ ಸಮಸ್ಯೆ ಪುನರಾವರ್ತನೆಯಾಗುತ್ತಿದ್ದು, ಕೂಡಲೇ ಸರಿಪಡಿಸಿ ರೈತರಿಗೆ ಆಗುತ್ತಿರುವ ನಷ್ಟವನ್ನು ತಪ್ಪಿಸಬೇಕು ಎಂದು ತಿಳಿಸಿದರು.

*ಸ್ವಚ್ಛತೆ ನಿರ್ಲಕ್ಷ್ಯ-ಅಧಿಕಾರಿಗಳಿಗೆ ತರಾಟೆ:* ಧುಡುಕನಾಳ ಗ್ರಾಮದಲ್ಲಿ ಸ್ವಚ್ಛತಾ ಕಾರ್ಯ ಸರಿಯಾಗಿ ನಡೆಯುತ್ತಿಲ್ಲ. ಚರಂಡಿಗಳು ತುಂಬಿ ಹರಿಯುತ್ತಿವೆ ಎಂದು ಗ್ರಾಮಸ್ಥರು ಶಾಸಕರ ಗಮನಕ್ಕೆ ತಂದಾಗ ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡರು. ಕೆಲಸ ಮಾಡಲು ಇಷ್ಟವಿದ್ದರೆ ಸರಿಯಾಗಿ ಕೆಲಸ ಮಾಡಿ, ಗ್ರಾಮದ ಸ್ವಚ್ಛತೆಗೆ ಆದ್ಯತೆ ಕೊಡಿ ಇಲ್ಲವೆಂದರೆ ಕೆಲಸ ಬಿಟ್ಟು ಹೋಗಿ ಎಂದು ಖಾರವಾಗಿ ಎಚ್ಚರಿಸಿದರು. ಈ ಸಂದರ್ಭದಲ್ಲಿ ತಹಸೀಲ್ದಾರರಾದ ಮಹೇಶ ಪಾಟೀಲ, ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕರಾದ ಶಿವಕುಮಾರ ಘಾಟೆ, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗದ ಎಇಇ ಸುನೀಲ ಚಿಲ್ಲರ್ಗೆ, ಸಣ್ಣ ನೀರಾವರಿ ಇಲಾಖೆಯ ಸಂಗಮೇಶ, ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಶಿವಾಜಿರಾವ ಪಾಟೀಲ ಮುಂಗನಾಳ, ಧೊಂಡಿಬಾ ನರೋಟೆ, ಶಿವರಾಜ ಅಲ್ಮಾಜೆ, ಪ್ರವೀಣ ಕಾರಬಾರಿ, ಯಾದು ಸಗರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ರಕ್ತದಾನ ಜೀವದಾನ, ಎಲ್ಲರೂ ಮುಕ್ತವಾಗಿ ರಕ್ತದಾನ ಮಾಡಿ:ಸಿ.ಪಿ.ಐ. ಶ್ರೀಕಾಂತ ಅಲ್ಲಾಪುರೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.25:ರಕ್ತದಾನ ಜೀವದಾನ, ಎಲ್ಲರೂ ಮುಕ್ತವಾಗಿ ರಕ್ತದಾನ ಮಾಡಿ, ರಕ್ತದಾನವು ಜೀವಗಳನ್ನು ಉಳಿಸುವ ಒಂದು ಶ್ರೇಷ್ಠ ಕೊಡುಗೆಯಾಗಿದೆ,

ಮನುಷ್ಯ ಮಾಡುವ ಅನೇಕ ದಾನದಲ್ಲಿ ರಕ್ತದಾನ ಮಹಾದಾನವಾಗಿದೆ ಎಂದು ಕಮಲನಗರ ಸಿ.ಪಿ.ಐ ಶ್ರೀಕಾಂತ ಅಲ್ಲಾಪುರೆ ಅವರು ಹೇಳಿದರು.

ತಾಲೂಕಿನ ಡಿಗ್ಗಿ ಗ್ರಾಮದ ಆರಾಧ್ಯ ದೇವ ಮಡಿವಾಳೇಶ್ವರ ದೇವರ ಜಾತ್ರಾ ಮಹೋತ್ಸವ ನಿಮಿತ್ಯವಾಗಿ, ನಾಗಪ್ಪ ಅಂಬರಖಾನೆ ಬ್ಲಡ್ ಸೆಂಟರ್ ಇವರ ಸಂಯುಕ್ತ ಆಶ್ರಯದಲ್ಲಿ ರಕ್ತದಾನ ಜೀವದಾನ ಶಿಬಿರ ಉದ್ಘಾಟನೆ ಮಾಡಿ ಅವರು ಮಾತನಾಡಿದರು.

ಗ್ರಾಮದ ಯುವಕರು ಮತ್ತು ಹಿರಿಯರು, ಒಗ್ಗಟ್ಟಿನಿಂದ ಪಾಲ್ಗೊಂಡು, ಬಹಳ ಒಳ್ಳೆಯ ಕಾರ್ಯ ಆಯೋಜನೆ ಮಾಡಿದ್ದೀರಿ ಎಂದು ಅಭಿನಂದಿಸಿದರು.

ಮಡಿವಾಳೇಶ್ವರ ದೇವಾಲಯ ಟ್ರಸ್ಟ್ ಕಾರ್ಯದರ್ಶಿ ಮಡಿವಾಳಪ್ಪ ಮುರ್ಕೆ ಪ್ರಸ್ತಾವಿಕ ನುಡಿ ನುಡಿದರು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿರುವ ದೇವಾಲಯ ಟ್ರಸ್ಟ್ ಅಧ್ಯಕ್ಷರು ಅಧ್ಯಕ್ಷ ಭಾಷಣ ಮಾಡಿದರು.

ಕಾರ್ಯಕ್ರಮದ ಉಸ್ತುವಾರಿ ವಹಿಸಿರುವ ರಾಜಕುಮಾರ ಕುಂಬಾರಗಿರೆ,

ಸೋಮನಾಥ ಶ್ರೀಗಿರೆ, ಬಸವರಾಜ ಬಿರಾದಾರ, ಸಂತೋಷ ಸ್ವಾಮಿ, ಸಂದೀಪ ಬನವಾಸೆ, ಪರಮೇಶ ರಾಂಪುರೆ, ಓಂಕಾರ ರಾಂಪುರೆ, ಸುನಿಲ ಚಾಂಡೇಶ್ವರೆ, ಸಂಗಮನಾಥ ಬಿರಾದಾರ, ಮಹೇಶ ಚಾಂಡೇಶ್ವರೆ, ಸೇರಿದಂತೆ ರಕ್ತದಾನ ಶಿಬಿರದಲ್ಲಿ 50 ಜನರು ತಮ್ಮ ರಕ್ತದಾನ ಮಾಡಿ ಸಾಮಾಜಿಕ ಭದ್ಧತೆ ತೋರಿಸಿದರು.

ಈ ಸಂದರ್ಭದಲ್ಲಿ ಡಾ. ಗಣಪತಿ ವಟಗೆ ಶಿವಕುಮಾರ ರಾಂಪುರೆ, ವಿಜಯಕುಮಾರ ಪಾಟೀಲ, ಸೂರ್ಯಕಾಂತ ಬಿರಾದಾರ, ಸತೀಶ ರಾಂಪುರೆ, ಧನರಾಜ ರಾಂಪುರೆ, ಚನ್ನಬಸವ ಬಿರಾದಾರ, ಸೋಮನಾಥ ರಾಂಪುರೆ, ಮಯೂರ ಕುಂಬಾರಗಿರೆ, ಸತೀಶ ತಪ್ಪಸಾಳೆ, ಸೇರಿದಂತೆ ಇನ್ನಿತರ ಇದ್ದರು. ಪರಮೇಶ ರಾಂಪುರೆ ಕಾರ್ಯಕ್ರಮ ನಿರೂಪಣೆ ಮಾಡಿದರು.


## ಸಾಹಿತ್ಯ ಪರಿಚಾರಿಕೆಗೆ ಹಂಶಕವಿ ಕೊಡುಗೆ ಅಪಾರ: ಡಾ.ಗವಿಸಿದ್ಧಪ್ಪ ಪಾಟೀಲ

ಕಲಬುರಗಿ:ಅ.25:ಬೀದರ ಜಿಲ್ಲೆಯಲ್ಲಿ ದೇಶಾಂಶ ಹುಡುಗಿಯವರ ಜೊತೆಗೆ ಧರಿನಾಡು ಕನ್ನಡ ಸಂಘ ಕಟ್ಟಿ ನೂರಾರು ಕೃತಿ ಪ್ರಕಟಿಸಿ, ಹಲವರಿಗೆ ವೇದಿಕೆ ನೀಡಿ,ಯುವ ಲೇಖಕರ ಸೃಷ್ಟಿಸಿದವರು

ಸ್ವತಃ ಕವಿ,ಲೇಖಕ,ಬರಹಗಾರರಾಗಿ,75 ಕ್ಕೂ ಹೆಚ್ಚು ಆಧುನಿಕ ವಚನ ಸಂಪುಟಗಳನ್ನು ಪ್ರಕಟಿಸಿದ ಕೀರ್ತಿ ಜೊತೆಗೆ ಸಾಹಿತ್ಯ ಪರಿಚಾರಿಕೆ ಕೆಲಸ ಮಾಡಿದ ಹಂಶಕವಿ ಗಳ ಕೊಡುಗೆ ಅಪಾರ ಎಂದು ಸಾಹಿತಿ- ಜಿಲ್ಲಾ ವೇದಿಕೆ ಅಧ್ಯಕ್ಷ ಡಾ.ಗವಿಸಿದ್ಧಪ್ಪ ಪಾಟೀಲ ಅಭಿಮತ ಪಟ್ಟರು.

ಪೋಲಿಸ್ ಇಲಾಖೆಯಿಂದ ನಿವೃತ್ತರಾದ ಕವಿ,ಸಾಹಿತಿ,ಶ್ರೀ ಹಂಶಕವಿ, ಅವರಿಗೆ ಸನ್ಮಾನಿಸಿ ಪೋಲಿಸ್ ಇಲಾಖೆಗೂ ಅವರ ಸೇವೆ ಸಂದಿದೆ ಎಂದರು. ಸಿರಿಗನ್ನಡ ವೇದಿಕೆ ಮತ್ತು ಸಾಕ್ಷಿ ಪ್ರತಿಷ್ಠಾನ ದಿಂದ ಸನ್ಮಾನಿಸಿ ಮಾತನಾಡಿದರು.

ಬೀದರ ಕರ್ನಾಟಕ ಕಾಲೇಜಿನ ಇತಿಹಾಸ ಪ್ರಾಧ್ಯಾಪಕರಾಗಿ ನಿವೃತ್ತರಾದ ಪ್ರೊ.ವೈಜನಾಥ ಚಿಕ್ಕಬಸೆ ಅವರು ಇತಿಹಾಸ ಬೋಧನೆಯ ಜೊತೆಗೆ




ಅಪಾರ ಶಿಷ್ಯರನ್ನು ಬೆಳೆಸಿದವರು ಅವರ ಕಾರ್ಯ ಶ್ಲಾಘನೀಯ ಹಾಗೆ ಅಂತಾರಾಷ್ಟ್ರೀಯ ಗಾಯಕ ಕಲಾವಿದರಾಗಿ ಜಾನಪದ ಹಾಡು,ಭಾವಗೀತೆ ಮೂಲಕ ವಿಶ್ವಅಕ್ಕ ಸಮ್ಮೇಳನದಲ್ಲಿ ಮಿಂವಿದವರು.ಸ್ವತಃ ಹಾಯಿಕು ಕವಿಗಳಾಗಿ ಐದು ಸಂಕಲನ ಪ್ರಕಟಿಸಿದವರು,ನಿವೃತ್ತ ಮುಖ್ಯೋಪಾಧ್ಯಾಯರಾದ ಶ್ರೀ ಶಂಭುಲಿಂಗ ವಾಲ್ದೊಡ್ಡಿ ಅವರನ್ನು ಸನ್ಮಾನಿಸಲಾಯಿತು. ಕೇಂದ್ರ ಸಾಹಿತ್ಯ ಅಕಾಡೆಮಿ ಕನ್ನಡ ಸಲಹಾ ಸಮಿತಿ ಸದಸ್ಯೆ ಡಾ.ಜಯದೇವಿ ಗಾಯಕವಾಡ,ಶ್ರೀಮತಿ ಬಸಮ್ಮ ಮಲ್ಲಪ್ಪ ಗಾಯಕವಾಡ,

ದಿಶಾ ಪದವಿ ಪೂರ್ವ

ಕಾಲೇಜಿನ ಕನ್ನಡ ಅಧ್ಯಾಪಕ ಡಾ.ವಿದ್ಯಾಸಾಗರ,ಪಾಲಿ ಅಧ್ಯಯನ ಸಂಸ್ಥೆಯ ಅತಿಥಿ ಪ್ರಾಧ್ಯಾಪಕ ಡಾ.ಪೀರಪ್ಪ ಸಜ್ಜನ,ಸಾಕ್ಷಿ, ಸೃಷ್ಟಿ ಇದ್ದರು.

## ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಡಿ ವಿವಿಧ ಯೋಜನೆಯಡಿ ಅರ್ಜಿ ಆಹ್ವಾನ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 25 : 2025–26ನೇ ಸಾಲಿನ ಕರ್ನಾಟಕ ಪರಿಶಿಷ್ಟಜಾತಿ,ಪರಿಶಿಷ್ಟಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಡಿ ವಿವಿಧ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಚನ್ನಬಸಪ್ಪ ಅವರು ತಿಳಿಸಿದ್ದಾರೆ. ಕರ್ನಾಟಕ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಸೇವಾ ಸಿಂಧು ಪೋರ್ಟಲ್‌ನಲ್ಲಿ ವಿವಿಧ ಯೋಜನೆಯಡಿ ಅರ್ಜಿ ಆಹ್ವಾನಿಸಿದೆ. ಅರ್ಜಿಗಳನ್ನು ಸಲ್ಲಿಸಲು ಎಲ್ಲಾ ಸಾರ್ವಜನಿಕರಿಗೆ ಹೆಚ್ಚಿನ ಮಾಹಿತಿ ನೀಡುವುದು 2023–24 ಹಾಗೂ 2024–25ನೇ ಸಾಲಿನಲ್ಲಿ ಅರ್ಜಿಸಲ್ಲಿಸಿದವರು ಮತ್ತೊಮ್ಮೆ ಅರ್ಜಿಸಲ್ಲಿಸುವ ಅವಶ್ಯಕತೆ ಇರುವುದಿಲ್ಲ ಆ ಸಾಲಿನ ಅರ್ಜಿಗಳನ್ನು ಸೇರಿಸಿ ಪರಿಗಣಿಸಲಾಗುವುದು. 2023–24, 2024–25ನೇ ಹಾಗೂ 2025–26ನೇ ಸಾಲಿನ ಅರ್ಜಿಗಳನ್ನು ಪರಿಗಣಿಸಿಕೊಂಡು ಜಿಲ್ಲಾಧಿಕಾರಿಗಳ ಜಿಲ್ಲಾ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳ ಆಯ್ಕೆ ನಡೆಸುವುದು, ಆಯ್ಕೆಯಾದ ಫಲಾನುಭವಿಗಳ ಜಾತಿ, ಯೋಜನೆ, ಮತ್ತು ಪೂರ್ಣ ವಿಳಾಸದೊಂದಿಗೆ ಪಟ್ಟಿಯನ್ನು ಸಿದ್ದಪಡಿಸುವುದು ಆಯ್ಕೆ ಮಾಡಿರುವ ಫಲಾನುಭವಿಗಳನ್ನು ಮತ್ತೊಮ್ಮೆ ಆಯ್ಕೆ ಮಾಡಲು ಸಾಧ್ಯವಿರುವುದಿಲ್ಲ ಸೌಲಭ್ಯವಂಚಿತರಿಗೆ ಮೊದಲ ಆದ್ಯತೆ ನೀಡಲು ತಿಳಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯಾದಗಿರಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 24 : ಜಿಲ್ಲಾಡಳಿತ ಯಾದಗಿರಿ ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ತಾಲೂಕ ಪಂಚಾಯತ್ ಹಾಗೂ ಯಾದಗಿರಿ ನಗರ ಸಭೆ ಸಂಯುಕ್ತಾಶ್ರಾಯದಲ್ಲಿ ಯಾದಗಿರಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಕಾರ್ಯಕ್ರಮವನ್ನು 2025ರ ಆಗಸ್ಟ್ 25ರ ಸೋಮವಾರ ರಂದು ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಯಾದಗಿರಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ ಅವರ ಘನ ಉಪಸ್ಥಿತಿಯಲ್ಲಿ ನೆರವೇರಲಿದೆ.

ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಕಾರ್ಯಕ್ರಮ ಅಧ್ಯಕ್ಷತೆ ವಹಿಸುವರು.


ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ ಹಾಗೂ ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ಯಾದಗಿರಿ ನಗರಸಭೆ ಅಧ್ಯಕ್ಷರು ಕು.ಲಲಿತಾ ಅನಪೂರ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ಬಾಬುರಾವ್ ಕಾಡ್ಲೂರ, ಯಾದಗಿರಿ ನಗರಸಭೆ ಸರ್ವಸದಸ್ಯರು ಕ್ರೀಡಾಪಟುಗಳು, ಸಂಘ ಸಂಸ್ಥೆಗಳು, ಸಮಸ್ತನಾಗರಿಕರು ಹಾಗೂ ಮಾಧ್ಯಮದವರು ವಿಶೇಷ ಆಹ್ವಾನಿತರಾಗಿ ಆಗಮಿಸುವರು.

ಸರ್ವರಿಗೂ ಆದರದ ಸುಸ್ವಾಗತವನ್ನು ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್, ಯಾದಗಿರಿ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ರಾಜು ಬಾವಿಹಳ್ಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಧುಡುಕನಾಳ, ಮಾನೂರನಲ್ಲಿ ಬೆಳೆ ಹಾನಿ ಪರಿಶೀಲನೆ

## ರೈತರಿಗೆ ಅನ್ಯಾಯವಾಗಲು ಬಿಡುವುದಿಲ್ಲ: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಔರಾದ.ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಔರಾದ(ಬಿ) ತಾಲ್ಲೂಕಿನ ಧುಡುಕನಾಳ ಹಾಗೂ ಮಾನೂರ ಗ್ರಾಮಗಳ ವ್ಯಾಪ್ತಿಯಲ್ಲಿ ಆ.24ರಂದು ಸಂಚರಿಸಿ ಮಳೆಯಿಂದ ಉಂಟಾಗಿರುವ ಬೆಳೆ ಹಾನಿಯನ್ನು ಪರಿಶೀಲಿಸಿ ರೈತರ ಸಮಸ್ಯೆಗಳನ್ನು ಆಲಿಸಿದರು. ಬೆಳೆ ಹಾನಿ ಸಮೀಕ್ಷೆ ಕುರಿತು ರೈತರು ತೀವ್ರ ಬೇಸರ ವ್ಯಕ್ತಪಡಿಸುತ್ತಿದ್ದಾರೆ. ಅಧಿಕಾರಿಗಳು ಎಲ್ಲ ಕೃಷಿಭೂಮಿಗಳಿಗೆ ಓಡಾಡುವುದಿಲ್ಲವೆಂದು ದೂರು ಹೇಳುತ್ತಿದ್ದಾರೆ. ಈ ಬಾರಿ ಹೀಗಾಗಬಾರದು ಸಮೀಕ್ಷಾ ಕಾರ್ಯದ ಜವಾಬ್ದಾರಿ ವಹಿಸಿರುವ ಕಂದಾಯ, ಕೃಷಿ, ತೋಟಗಾರಿಕೆ ಸೇರಿದಂತೆ ಎಲ್ಲ ಅಧಿಕಾರಿಗಳು ತಪ್ಪದೇ ಬೆಳೆಹಾನಿಯಾದ ಕೃಷಿಭೂಮಿಗಳಿಗೆ ಹೋಗಿ ವಾಸ್ತವ ಪರಿಸ್ಥಿತಿಯನ್ನು ವರದಿ ಮಾಡಬೇಕೆಂದು ತಿಳಿಸಿದರು.

ಧುಡುಕನಾಳ ಸೇತುವೆ ನಿರ್ಮಾಣ ಕೆಲಸ ಸ್ಥಗಿತಗೊಂಡ ಕಾರಣದಿಂದಾಗಿ ಪಕ್ಕದಲ್ಲಿ ನಿರ್ಮಿಸಿದ್ದ ತಾತ್ಕಾಲಿಕ ಸೇತುವೆ ಮಳೆಯಿಂದ ಕೊಚ್ಚಿಕೊಂಡು ಹೋಗಿದ್ದು, ಯಾವುದೇ ವಾಹನಗಳು ಗ್ರಾಮಕ್ಕೆ ಬರಲು ಸಾಧ್ಯವಾಗುತ್ತಿಲ್ಲ. ನಮ್ಮ ಊರಿನ ವಿದ್ಯಾರ್ಥಿಗಳು, ಔರಾದ(ಬಿ), ಎಕಂಬಾ ಹಾಗೂ ಮತ್ತಿತರೆ ಕಡೆ ಶಾಲೆ–ಕಾಲೇಜುಗಳಿಗೆ ಹೋಗುತ್ತಾರೆ. ಸದ್ಯಕ್ಕೆ ರಸ್ತೆ ಸಂಪರ್ಕ ಕಡಿತಗೊಂಡಿರುವುದರಿಂದ ಗ್ರಾಮಕ್ಕೆ ಬಸ್‌ಗಳು ಬರುತ್ತಿಲ್ಲ. ಹಾಗಾಗಿ ವಿದ್ಯಾರ್ಥಿಗಳು ಶಾಲೆ–ಕಾಲೇಜುಗಳಿಗೆ ಹೋಗಲು ಸಾಧ್ಯವಾಗುತ್ತಿಲ್ಲವೆಂದು ಗ್ರಾಮಸ್ಥರು ಶಾಸಕರೆದು ತಮ್ಮ ಅಳಲನ್ನು ತೋಡಿಕೊಂಡರು. ಈ ವೇಳೆ ಸಂಬಂಧಪಟ್ಟ ಅಧಿಕಾರಿಗಳನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ ಸಮಸ್ಯೆ ಇತ್ಯರ್ಥಪಡಿಸುವಂತೆ ಸೂಚಿಸಿದರು. ಇದೇ ವೇಳೆ ಕೆಎಸ್‌ಆರ್‌ಟಿಸಿ ಡಿಪೋ ವ್ಯವಸ್ಥಾಪಕರನ್ನು ಸಂಪರ್ಕಿಸಿ ಪರ್ಯಾಯ ಮಾರ್ಗದ ಮೂಲಕ ಧುಡಕನಾಳ ಗ್ರಾಮಕ್ಕೆ ಬಸ್ ಸಂಚಾರ ಕೂಡಲೇ ಆರಂಭಿಸುವಂತೆ ನಿರ್ದೇಶನ ನೀಡಿದರು. ಮಹಾರಾಷ್ಟ್ರದ ದೇಗಲೂರ ತಾಲ್ಲೂಕಿನಲ್ಲಿ ಬರುವ ಯೆಡೂರ ಕೆರೆಯಲ್ಲಿ ಉಂಟಾಗಿರುವ ಸಮಸ್ಯೆಯಿಂದಾಗಿ ಅಲ್ಲಿನ ನೀರು ಮಹಾರಾಷ್ಟ್ರ–ಕರ್ನಾಟಕ ಗಡಿಯಲ್ಲಿರುವ ಮಾನೂರ(ಕೆ) ಗ್ರಾಮದ ವ್ಯಾಪ್ತಿಯಲ್ಲಿನ ಕೃಷಿ ಭೂಮಿಗಳಿಗೆ ನುಗ್ಗಿ ಅಪಾರ ಪ್ರಮಾಣದ ಬೆಳೆ ಹಾನಿಯಾಗಿದೆ. ಬೆಳೆದು ನಿಂತಿದ್ದ ಹತ್ತಿ, ತೊಗರಿ, ಉದ್ದು, ಹೆಸರು, ಸೋಯಾಬೀನ್ ಬೆಳೆಗಳು ಮುಳುಗಡೆಯಾಗಿವೆ ಎಂದು ರೈತರು ಶಾಸಕರೆದುರು ಸಮಸ್ಯೆ ಹಂಚಿಕೊಂಡರು.

ಬೆಳೆಹಾನಿಯನ್ನು ವೀಕ್ಷಿಸಬೇಕು. ಮತ್ತು ರೈತರ ಸಮಸ್ಯೆಗಳನ್ನು ಆಲಿಸಬೇಕು ಎಂಬ ಉದ್ದೇಶದಿಂದಲೇ ಹಾನಿ ಪ್ರದೇಶಗಳಿಗೆ ಭೇಟಿ ನೀಡುತ್ತಿದ್ದೇನೆ. ಈಗಾಗಲೇ ಕ್ಷೇತ್ರದಲ್ಲಿ ಸಂಚರಿಸಿ ಮಾಹಿತಿಯನ್ನು ಪಡೆದಿದ್ದೇನೆ. ಈ ಕುರಿತಂತೆ ಮುಖ್ಯಮಂತ್ರಿಗಳು ಮತ್ತು ಸಂಬಂಧಪಟ್ಟ ಸಚಿವರನ್ನು ಭೇಟಿಯಾಗಿದ್ದು, ಅಧಿವೇಶನದಲ್ಲಿಯೂ ವಿಷಯ ಪ್ರಸ್ತಾಪಿಸಿದ್ದೇನೆ. ನಾನು ರೈತರ ಜೊತೆಗಿದ್ದೇನೆ. ಬೆಳೆ ಹಾನಿಯಾದ ರೈತರಿಗೆ ಪರಿಹಾರ ಕೊಡಿಸುವ ವರೆಗೂ ಸುಮ್ಮನಿರುವುದಿಲ್ಲ. ರೈತರು ಯಾವುದೇ ಕಾರಣಕ್ಕೂ ಆತಂಕಕ್ಕೆ ಒಳಗಾಗದಿರಿ ಎಂದು ಧೈರ್ಯ ತುಂಬಿದರು. ನಂತರ ನಾಂದೇಡ ಜಿಲ್ಲಾಧಿಕಾರಿಗಳನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ, ಮಹಾರಾಷ್ಟ್ರ–ಕರ್ನಾಟಕ ಗಡಿಯಲ್ಲಿರುವ ಯೆಡೂರ ಕೆರೆಯಲ್ಲಿನ ಸಮಸ್ಯೆಯಿಂದಾಗಿ ಅಲ್ಲಿನ ನೀರು ಮಾನೂರ ಗ್ರಾಮದ ಕೃಷಿಭೂಮಿಗಳಿಗೆ ನುಗ್ಗಿ ಸಾಕಷ್ಟು ಬೆಳೆ ಹಾನಿಯಾಗಿದೆ. ಪ್ರತಿ ಮಳೆಗಾದಲ್ಲಿಯೂ ಈ ರೀತಿಯ ಸಮಸ್ಯೆ ಪುನರಾವರ್ತನೆಯಾಗುತ್ತಿದ್ದು, ಕೂಡಲೇ ಸರಿಪಡಿಸಿ ರೈತರಿಗೆ ಆಗುತ್ತಿರುವ ನಷ್ಟವನ್ನು ತಪ್ಪಿಸಬೇಕು ಎಂದು ತಿಳಿಸಿದರು. **ಸ್ವಚ್ಛತೆ ನಿರ್ಲಕ್ಷ್ಯ–ಅಧಿಕಾರಿಗಳಿಗೆ ತರಾಟೆ:** ಧುಡುಕನಾಳ ಗ್ರಾಮದಲ್ಲಿ ಸ್ವಚ್ಛತಾ ಕಾರ್ಯ ಸರಿಯಾಗಿ ನಡೆಯುತ್ತಿಲ್ಲ. ಚರಂಡಿಗಳು ತುಂಬಿ ಹರಿಯುತ್ತಿವೆ ಎಂದು ಗ್ರಾಮಸ್ಥರು ಶಾಸಕರ ಗಮನಕ್ಕೆ ತಂದಾಗ ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡರು. ಕೆಲಸ ಮಾಡಲು ಇಷ್ಟವಿದ್ದರೆ ಸರಿಯಾಗಿ ಕೆಲಸ ಮಾಡಿ, ಗ್ರಾಮದ ಸ್ವಚ್ಛತೆಗೆ ಆದ್ಯತೆ ಕೊಡಿ ಇಲ್ಲವೆಂದರೆ ಕೆಲಸ ಬಿಟ್ಟು ಹೋಗಿ ಎಂದು ಖಾರವಾಗಿ ಎಚ್ಚರಿಸಿದರು. ಈ ಸಂದರ್ಭದಲ್ಲಿ ತಹಸೀಲ್ದಾರರಾದ ಮಹೇಶ ಪಾಟೀಲ, ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕರಾದ ಶಿವಕುಮಾರ ಘಾಟೆ, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗದ ಎಇಇ ಸುನೀಲ ಚಿಲ್ಲರ್ಗೆ, ಸಣ್ಣ ನೀರಾವರಿ ಇಲಾಖೆಯ ಸಂಗಮೇಶ, ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಶಿವಾಜಿರಾವ ಪಾಟೀಲ ಮುಂಗನಾಳ, ಧೊಂಡಿಬಾ ನರೋಟೆ, ಶಿವರಾಜ ಅಲ್ಮಾಜೆ, ಪ್ರವೀಣ ಕಾರಬಾರಿ, ಯಾದು ಸಗರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಶಹಾಪೂರ ನಗರಸಭೆ ವಾರ್ಡ್ ನಂ.28ಕ್ಕೆ ಹಣಮಂತಪ್ಪ ಗುತ್ತೇದಾರ ನಗರ ಎಂದು ನಾಮಕರಣ : ಆಕ್ಷೇಪಣೆ ಅರ್ಜಿ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 25 : ಶಹಾಪೂರ ನಗರಸಭೆ ವ್ಯಾಪ್ತಿಯಲ್ಲಿ ಬರುವ ವಾರ್ಡ್ ನಂ.28ಕ್ಕೆ ಹಣಮಂತಪ್ಪ ಗುತ್ತೇದಾರ ನಗರ ಎಂದು ನಾಮಕರಣ ನೇಮಕ ಮಾಡಲಾಗಿದ್ದು, ಈ ಆಕ್ಷೇಪಣೆ ಅರ್ಜಿ ಅವಕಾಶ ಕಲ್ಪಿಸಲಾಗಿದೆ ಎಂದು ಶಹಾಪೂರ ನಗರಸಭೆ ಪೌರಾಯುಕ್ತರು ಜೀವನಕುಮಾರ ಅವರು ತಿಳಿಸಿದ್ದಾರೆ.

ಶಹಾಪೂರ ನಗರಸಭೆ ವ್ಯಾಪ್ತಿಯಲ್ಲಿ ಬರುವ ವಾರ್ಡ್ ನಂಬರ 28ಕ್ಕೆ ಹಣಮಂತಪ್ಪ ಗುತ್ತೇದಾರ ನಗರ ಎಂದು ನಾಮಕರಣ ಮಾಡಲು ಸಾಮಾನ್ಯ ಸಭೆಯಲ್ಲಿ ನಿರ್ಣಯಿಸಿದ್ದು, ವಿವರ ಈ ಕೆಳಕಂಡ ಇರುತ್ತದೆ. ಶಹಾಪೂರ ನಗರಸಭೆ ವಾರ್ಡ್ 28ಕ್ಕೆ ಹಣಮಂತಪ್ಪ ಗುತ್ತೇದಾರ ನಗರ ನಾಮಕರಣ ಯಾವುದೇ ಆಕ್ಷೇಪಣೆ ಇದ್ದಲ್ಲಿ ಪ್ರಕಟಣೆ ಹೊರಡಿಸಿದ 15 ದಿನ ಒಳಗೆ ಲಿಖಿತವಾಗಿ, ಕಛೇರಿಯ ಸಮಯದಲ್ಲಿ ಆಕ್ಷೇಪಣೆ ಸಲ್ಲಿಸಲು ಸೂಚಿಸಿದೆ. ಸಮಯ ಮೀರಿಬಂದ ಆಕ್ಷೇಪಣೆಗಳನ್ನು ತಿರಸ್ಕರಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ಯಾಂಕ್ ಮ್ಯಾನೇಜರ್ ಮೇಲೆ ಹಲ್ಲೆ ನಡೆಸಿ ಹಣ, ಚಿನ್ನಾಭರಣ ದರೋಡೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.25–ಬ್ಯಾಂಕ್ ಮ್ಯಾನೇಜರ್ ಒಬ್ಬರ ಮೇಲೆ ಹಲ್ಲೆ ನಡೆಸಿ ಹಣ, ಚಿನ್ನಾಭರಣ ದರೋಡೆ ಮಾಡಿರುವ ಘಟನೆ ನಗರದಲ್ಲಿ ನಡೆದಿದೆ. ಬಾಗಲಕೋಟೆ ಜಿಲ್ಲೆಯ ಬನಹಟ್ಟಿ ತಾಲ್ಲೂಕಿನ ಆಸಂಗಿ ಗ್ರಾಮದಲ್ಲಿರುವ ಬ್ಯಾಂಕ್ ಆಫ್ ಬರೋಡಾದಲ್ಲಿ ಜಾಯಿಂಟ್ ಮ್ಯಾನೇಜರ್ ಆಗಿರುವ ಮಲ್ಲಿಕಾರ್ಜುನ ಕಡೂನ್ ಎಂಬುವವರ ಮೇಲೆ ಹಲ್ಲೆ ನಡೆಸಿ 80 ಸಾವಿರ ರೂ. ಮೌಲ್ಯದ ಬಂಗಾರದ ಚೈನ್, 2,500ರೂ.ನಗದು ದೋಚಲಾಗಿದೆ.

# ಯಾದಗಿರಿ ಜಿಲ್ಲಾ ಮಾಧ್ಯಮ ಪ್ರತಿನಿಧಿಗಳಿಗೆ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು 'ವಾರ್ತಾಲಾಪ'

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆ:25: ಭಾರತ ಸರ್ಕಾರದ ವಾರ್ತಾ ಶಾಖೆಯಿಂದ ಯಾದಗಿರಿಯಲ್ಲಿ 29 ಆಗಸ್ಟ್, 2025ರಂದು ಕಾರ್ಯಾಗಾರ ಆಯೋಜನೆ

ಭಾರತ ಸರ್ಕಾರದ ವಾರ್ತಾ ಶಾಖೆ (ಪಿಐಬಿ) ಬೆಂಗಳೂರು ಹಾಗೂ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ (ರಿ)., ಕರ್ನಾಟಕ ಕಾರ್ಯನಿರತ ಪತ್ರಿಕೆಗಳ ಸಂಪಾದಕರ ಸಂಘ (ರಿ). ಜಿಲ್ಲಾ ಘಟಕ ಯಾದಗಿರಿ ಇವರ ಸಂಯುಕ್ತಾಶ್ರಯದಲ್ಲಿ ಇದೇ 29 ಶುಕ್ರವಾರದಂದು ಯಾದಗಿರಿಯ ಎಸ್ ಡಿ ಎನ್ ಹೋಟೆಲ್ ನಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ "ವಾರ್ತಾಲಾಪ ಕಾರ್ಯಾಗಾರ" ಆಯೋಜಿಸಲಾಗಿದೆ.

ಕರ್ನಾಟಕ ಸರ್ಕಾರದ ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪಗೌಡ ದರ್ಶನಾಪೂರ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸಲಿದ್ದು, ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ ಅವರು ಗೌರವ ಉಪಸ್ಥಿತಿ ವಹಿಸಲಿದ್ದು, ಯಾದಗಿರಿ ಕ್ಷೇತ್ರದ ಮಾನ್ಯ ಶಾಸಕರಾದ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ವಾರ್ತಾಲಾಪದ ಉದ್ಘಾಟನೆಯನ್ನು ರಾಯಚೂರು ಲೋಕಸಭಾ ಕ್ಷೇತ್ರದ ಮಾನ್ಯ ಸಂಸದರಾದ ಶ್ರೀ ಜಿ. ಕುಮಾರ ನಾಯಕ ಹಾಗೂ ಕಲಬುರಗಿ ಲೋಕಸಭಾ ಕ್ಷೇತ್ರದ ಮಾನ್ಯ ಸಂಸದರಾದ ಶ್ರೀ ರಾಧಾಕೃಷ್ಣ ದೊಡ್ಡಮನಿ ಅವರು ನೆರವೇರಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್‌ನ ಮಾನ್ಯ ಶಾಸಕರುಗಳಾದ ಡಾ. ಬಿ.ಜಿ. ಪಾಟೀಲ, ಡಾ. ಚಂದ್ರಶೇಖರ ಬಿ. ಪಾಟೀಲ, ಶ್ರೀ ಶಶೀಲ್ ಜಿ. ನಮೋಶಿ, ಗುರುಮಠಕಲ್ ಕ್ಷೇತ್ರದ ಮಾನ್ಯ ಶಾಸಕರಾದ ಶ್ರೀ ಶರಣಗೌಡ ಕಂದಕೂರ, ಸುರುಪುರ ಕ್ಷೇತ್ರದ ಮಾನ್ಯ ಶಾಸಕರಾದ ಶ್ರೀ ರಾಜಾ ವೇಣುಗೋಪಾಲನಾಯಕ, ಯಾದಗಿರಿ ನಗರಸಭೆಯ ಮಾನ್ಯ ಅಧ್ಯಕ್ಷರಾದ ಕು. ಲಲಿತಾ ಅನಪೂರ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರದ ಮಾನ್ಯ ಅಧ್ಯಕ್ಷರಾದ ಶ್ರೀ ಬಾಬೂರಾವ್ ಕಾಡ್ಲೂರ, ಭಾರತ ಸರ್ಕಾರದ ವಾರ್ತಾ ಶಾಖೆಯ ಹೆಚ್ಚುವರಿ ಮಹಾನಿರ್ದೇಶಕರಾದ ಶ್ರೀ ಎಸ್.ಜಿ. ರವೀಂದ್ರ, ಯಾದಗಿರಿ ಜಿಲ್ಲಾಧಿಕಾರಿಗಳಾದ ಶ್ರೀ ಹರ್ಷಲ್ ಭೋಯರ್, ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀ ಪೃಥ್ವಿಕ್ ಶಂಕರ್, ಯಾದಗಿರಿ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಲವೀಶ್ ಒರಡಿಯಾ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ (ಹೆ. ಪ್ರ.) ಶ್ರೀ ಸುಲೈಮಾನ್ ಡಿ.ನದಾಫ್, ಯಾದಗಿರಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಶ್ರೀ ಮಲ್ಲಪ್ಪ ಸಂಕೀನ್, ಕರ್ನಾಟಕ ಕಾರ್ಯನಿರತ ಪತ್ರಿಕೆಗಳ ಸಂಪಾದಕರ ಸಂಘ (ರಿ). ಯಾದಗಿರಿ ಜಿಲ್ಲಾ ಘಟಕದ ಅಧ್ಯಕ್ಷರಾದ ಶ್ರೀ ಸಿದ್ದಪ್ಪ ಲಿಂಗೇರಿ ಅವರುಗಳು ಭಾಗವಹಿಸಲಿದ್ದಾರೆ.

ಕಾರ್ಯಾಗಾರದ ಮೊದಲ ಅಧಿವೇಶನದಲ್ಲಿ 'ಮಹತ್ವಾಕಾಂಕ್ಷೆ ಜಿಲ್ಲೆಯ ಪ್ರಾಮುಖ್ಯತೆ ಮತ್ತು ಉದ್ದೇಶ' ವಿಷಯದ ಕುರಿತು ಯಾದಗಿರಿ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಲವೀಶ್ ಒರಡಿಯಾ ಅವರು ಮಾತನಾಡಲಿದ್ದಾರೆ.

'ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ, ಭಾರತೀಯ ನ್ಯಾಯ ಸಂಹಿತೆ ಹಾಗೂ ಭಾರತೀಯ ಸಾಕ್ಷ್ಯ ಅಧಿನಿಯಮ, 2023ರ ಕುರಿತು ಸುರಪುರದ ಉಪ ಪೊಲೀಸ್ ಅಧೀಕ್ಷಕರಾದ ಶ್ರೀ ಜಾವೇದ್ ಇನಾಂದಾರ್ ಅವರು ಮಾಹಿತಿ ಹಂಚಿಕೊಳ್ಳಲಿದ್ದಾರೆ.

ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನದ ಕುರಿತು ಯಾದಗಿ–ರಿಯ ಎಸ್ ಬಿ ಐ ಹಾಗೂ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ನ ವ್ಯವಸ್ಥಾಪಕರಾದ ಶ್ರೀ ಭೀಮರಾವ್ ಪಂಚಾಳ, ಕೃಷಿ ತೋಟಗಾರಿಕಾ ವಲಯದ ಯೋಜನೆಗಳ ಅನುಷ್ಠಾನದ ಕುರಿತು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀ ರತೇಂದ್ರನಾಥ ಸೂಗೂರ ಅವರು ಮಾತನಾಡಲಿದ್ದಾರೆ.

ಮಧ್ಯಾಹ್ನದ ಎರಡನೇ ಅಧಿವೇಶನದಲ್ಲಿ ಉದ್ಯೋಗ ಆಧಾರಿತ ಪ್ರೋತ್ಸಾಹಧನ (ಇಐಖ) ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿ ಪ್ರಚಾರ ಯೋಜನೆ (ಖಕಖಇಇ) ವಿಷಯದ ಕುರಿತು ಕಲಬುರಗಿಯ ಇ.ಎಸ್.ಐ.ಸಿ ಜಂಟಿ ನಿರ್ದೇಶಕರಾದ ಶ್ರೀ ಯುವರಾಜ್ ಎಸ್.ವಿ., ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಯೋಜನೆಗಳ ಅನುಷ್ಠಾನದ ಕುರಿತು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಶ್ರೀ ಮಹೇಶ್ ಬಿರಾದಾರ್ ಅವರು ಮಾಹಿತಿ ಹಂಚಿಕೊಳ್ಳಲಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಯೋಜನೆಗಳ ಅನುಷ್ಠಾನದ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಶ್ರೀ ತಿಪ್ಪಣ್ಣ ಪಿ. ಸಿರಸಿಗಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಶ್ರೀಮತಿ ನಿರ್ಮಲಾ ಹಾಗೂ ಯುವ ಸಬಲೀಕರಣ–ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಕಲಬುರಗಿ ನೆಹರು ಯುವ ಕೇಂದ್ರದ ಜಿಲ್ಲಾ ಯುವಜನ ಅಧಿಕಾರಿಗಳಾದ ಶ್ರೀ ಮಯೂರ್ ಕುಮಾರ್ ಮಾತನಾಡಲಿದ್ದಾರೆ.

## ಸಮಾಜದಲುದ್ಧಾರವೇ ಮಹಾತ್ಮರಜೀವನದ ಪರಮಗುರಿ ;ಚನ್ನವೀರ ಶಿವಾಚಾರ್ಯರು

ಮಲ್ಲಮ್ಮ ನುಡಿ ವಾರ್ತೆ

ದೋರನಹಳ್ಳಿ:ಮೌನಅನುಷ್ಠಾನದ ಬಲದಿಂದ ಗಳಿಸುವ ಶಕ್ತಿಯನ್ನು ಭಕ್ತರಉದ್ಧಾರಕ್ಕಾಗಿ ಬಳಸಿ, ಸಮಾಜದಉದ್ಧಾರವೇಮಹಾತ್ಮರಜೀವನದ ಪರಮಗುರಿಎಂದು ಭಾವಿಸುವ ಪರಂಪರೆಯು ಮಹಾಂತೇಶ್ವರ ಹಿರೇಮಠದಆಧ್ಯಾತ್ಮಿಕಸಂಪತ್ತುಆಗಿದೆಎಂದು ಬಾಡಿಯಾಲ ಮೂಲಮಠದ ಪೂಜ್ಯ ಶ್ರೀ ಚನ್ನವೀರ ಶಿವಾಚಾರ್ಯರು ಹೇಳಿದರು.ದೋರನಹಳ್ಳಿ ಗ್ರಾಮದ ಮಹಾಂತೇಶ್ವರಗುಡ್ಡದಲ್ಲಿ ನಡೆದ ಪೂಜ್ಯಅಭಿನವ ಮಹಾಂತೇಶ್ವರ ಶಿವಾಚಾರ್ಯರ ಮೌನಅನುಷ್ಠಾನದ ಮಹಾಮಂಗಲಕಾರ್ಯಕ್ರಮದಲ್ಲಿಸಾನ್ನಿಧ್ಯ ವಹಿಸಿಅವರುಮಾತನಾಡಿದರು.ಸಾಧು ಸಂತರಅನುಷ್ಠಾನ, ತಪಃ ಶಕ್ತಿ ಲೋಕಕಲ್ಯಾಣಕ್ಕೆ ಬಳಕೆಯಾಗುತ್ತದೆ. ಮೌನಅನುಷ್ಠಾನದಂತಹಕಾರ್ಯ ಮಾಡಿದಾಗ ಶರೀರವೇ ಮಂತ್ರ ಶರೀರವಾಗಿ, ತಪಸ್ಸಿನ ಪುಣ್ಯ ಫಲವು ಭಕ್ತನಿಗೆದೊರೆತಾಗಆತನ ಸಕಲ ಸಮಸ್ಯೆಗಳುನಿವಾರಣೆಯಾಗುತ್ತವೆಎಂದು ಹೇಳಿದರು.ಶಾಂಭವಿ ಮಾತಾಚಿಕ್ಕಮಠದ ಪೂಜ್ಯ ಶ್ರೀ ಶಿವಲಿಂಗ ರಾಜೇಂದ್ರ ಶಿವಾಚಾರ್ಯರುಮಾತನಾಡಿ,ಜೀವನದಲ್ಲಿ ಶಾಂತಿ, ನೆಮ್ಮದಿ ಪಡೆಯಲು ಮೌನ ಮಹತ್ವದ ಪಾತ್ರವಹಿಸುತ್ತದೆ. ಮಾತು ಬಿಟ್ಟುಸುಮ್ಮನೆ ಕುಳಿತುಕೊಳ್ಳುವುಷ್ಟೇ ಮೌನವಲ್ಲ. ಮನಸ್ಸಿನ ಚಂಚಲತೆಯನ್ನು ಹತೋಟಿಯಲ್ಲಿಟ್ಟುಕೊಂಡು ಶಿವನ ಆರಾಧನೆ ಮೂಲಕ ಮನಸ್ಸನ್ನು ಗಟ್ಟಿಗೊಳಿಸಿಕೊಳ್ಳುವುದು ನಿಜವಾದ ಮೌನಎಂದು ಹೇಳಿದರು.

ಮೌನಾನುಷ್ಠಾನಮಂಗಲಗೊಳಿಸಿದ ನಂತರಮಹಾಂತೇಶ್ವರ ಹಿರೇಮಠದ ಪೂಜ್ಯ ಶ್ರೀ ಅಭಿನವಮಹಾಂತೇಶ್ವರ ಶಿವಾಚಾರ್ಯರುಶ್ರೀಗಳುಮಾತನಾಡಿ, ಸಾವಿರದೇವರುಸದ್ಗುರು ಮಹಾಂತೇಶ್ವರಕೃಪೆಯಿಂದಭಕ್ತರಕಲ್ಯಾಣ ಕ್ಕಾಗಿ ಮೌನ ಅನುಷ್ಠಾನ ಕೈಗೊಂಡು ಲೋಕಕಲ್ಯಾಣಕ್ಕಾಗಿ ಶ್ರೀಮಠದಿಂದ ನಿರಂತರವಗಿ ಶ್ರಮಿಸುವೆಎಂದು ಹೇಳಿದರು. ಅಧ್ಯಾತ್ಮದಲ್ಲಿಉನ್ನತಸಾಧನೆ ಮಾಡುವಲ್ಲಿ ಮೌನಅನುಷ್ಠಾನವು ಸೇತುವೆರೀತಿಯಲ್ಲಿ ಕೆಲಸ ಮಾಡುತ್ತದೆ.ಜೀವನಲ್ಲಿ ನೊಂದು ಬೆಂದವರಿಗೆಆರಾಧನೆ, ಅನುಷ್ಠಾನ, ಜಪ, ತಪ, ಪೂಜೆ ಪುನಸ್ಕಾರಗಳು ನವ ಚೈತನ್ಯನೀಡುವ ದಿವ್ಯಔಷಧಿಗಳಂತೆ ಕಾರ್ಯ ನಿರ್ವಹಿಸುತ್ತವೆ. ಅದಕ್ಕಾಗಿ ಪ್ರತಿಯೊಬ್ಬರುಧ್ಯಾನ,ಜಪ,ತಪಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.

ಡಿ.ಡಿ.ಯುಸಮೂಹಶಿಕ್ಷಣಸಂಸ್ಥೆಗಳ ಸಂಸ್ಥಾಪಕ ಡಾ.ಭೀಮಣ್ಣ ಮೇಟಿ ಮಾತನಾಡಿ ನಾಡಿನ ಸಮೃದ್ಧಿಗಾಗಿ ಹಿರೇಮಠದ ನೂತನ ಶ್ರೀಗಳು ಮೌನಅನುಷ್ಠಾನ ಮಾಡಿರುವುದು ಶ್ಲಾಘನೀಯ. ಲಿಂಗೈಕ ವೀರಮಹಾಂತ ಶಿವಾಚಾರ್ಯರ ಸದಾಜನಪರ ಸಮಾಜ ಮುಖಿ ಕಾರ್ಯಗಳು ಮಾಡಿಕೊಂಡು ಬಂದಿದ್ದಾರೆ. ಅದರಂತೆ

ಮಹಾಂತೇಶ್ವರ ಹಿರೇಮಠದ ಸಂಸ್ಥಾನದ ವತಿಯಿಂದ ಲೋಕ ಕಲ್ಯಾಣಕ್ಕಾಗಿ ,ಸಮಾಜ ಮುಖಿ ಕಾರ್ಯಗಳು ನಿರಂತರವಾಗಿ ನಡೆ–ಯಲಿ ಎಂದು ಹೇಳಿದರು.ಶ್ರೀಮಠದ ಸದ್ಭಕ್ತರಾದ ಶ್ರೀ ವೀರಸಂಗಣ್ಣದೇಸಾಯಿ ಪ್ರಸ್ತಾವಿಕವಾಗಿ ಮಾತನಾಡಿದರು.

ಈ ಸಮಾರಂಭದಲ್ಲಿ ದೋರನಹಳ್ಳಿ, ಗ್ರಾಮದ ಸದ್ಭಕ್ತರಾದಗಣಪತಿರಾವ ಜೋಳದ ಈಶ್ವರಪ್ಪಗೌಡ ಲಕ್ಕಶೇಟ್ಟಿ,ಷಣುಖಪ್ಪಕಕ್ಕೇರಿ,ನಿಂಗಣ್ಣಗೌಡ ಪೋಲಿಸ್ ಪಾಟೀಲ್,ಗೊಲ್ಲಾಳಪ್ಪ ಗೊಲಗೇರಿ,ಸಂಗಣ್ಣಕರಿಸಂಗ ,ತಿಪ್ಪಣ್ಣಆಂದೇಲಿ,ಪ್ರಭುರಾಯ ಮಲಗೊಂಡ ಮಹಾಂತಪ್ಪ ನಂದಿಕೋಲ,ದೊಡ್ಡಪ್ಪದೇಸಾಯಿ, ಮಾನಪ್ಪ ಹುಲಸೂರು,ನಿಂಗಣ್ಣ ಮಲಗೊಂಡ,ತಮ್ಮಣ್ಣಗೌಡಜೋಳದ, ಕಲ್ಲಪ್ಪಖಾನಾಪುರ,ಮಲ್ಲಣ್ಣಗೌಡ ಕನ್ಯೆಕೊಳುರು,ಚನ್ನಯ್ಯ ಹಿರೇಮಠಖಾನಾಪುರಸಾಬಣ್ಣ ಗೋಷಿ,ಖಾಜೆಪಟೇಲ್,ಅಬ್ದುಲ್ ಭಾಷಾಅರ್ಜಣಿಗಿ,ಚನ್ನಯ್ಯಸ್ವಾಮಿಕರುಕಂದಾ,ವಿಶಾಲ್ ಶಿಂಧೆ,ಶಿವರಾಜ ಜಂಗಳಿ,ದಶವಂತ ದೊರೆ,ಹಾಗೂ ಸುತ್ತಲಿನ ಗ್ರಾಮಗಳ ಸಕಲ ಸದ್ಭಕ್ತರಿದ್ದರು.ಸ್ನೇಹಾ ಪಾಟೀಲ್ ಪ್ರಾರ್ಥಿಸಿದರು.ಬಸವರಾಜ ಹಳ್ಳದ ಸ್ವರಚನೆ ಭಕ್ತಿಗೀತೆ ಹಾಡಿದರು.

ಯು.ಪಿ.ಎಸ್.ಸಿ ನಾಗರೀಕ ಸೇವೆ, ಕೆ.ಎ.ಎಸ್ ಗೆಜೆಟೆಡ್ ಪ್ರೋಬೇಷನರ್,

## ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಆಯ್ಕೆ ಅರ್ಜಿ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆಗಸ್ಟ್25–:2025–26ನೇ ಸಾಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆವತಿಯಿಂದ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಯು.ಪಿ.ಎಸ್.ಸಿ ನಾಗರೀಕ ಸೇವೆ, ಕೆ.ಎ.ಎಸ್ ಗೆಜೆ–ಟೆಡ್ ಪ್ರೋಬೇಷನರ್, ಗ್ರೂಪ್–ಸಿ, ಆರ್‌ಆರ್‌ಬಿ, ಎಸ್‌ಎಸ್‌ಸಿ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಗೆ ಆಯ್ಕೆ ಮಾಡುವ ಸಂಬಂಧ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಅವಧಿ ವಿಸ್ತರಿಸಿದೆ ಎಂದು ಯಾದಗಿರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಭಾಗ್ಯಶ್ರೀ ಕುಂಬಾರ ಅವರು ತಿಳಿಸಿದ್ದಾರೆ.

ಅಲ್ಪಸಂಖ್ಯಾತರಕಲ್ಯಾಣ ಇಲಾಖೆದಿಂದ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಯು.ಪಿ.ಎಸ್.ಸಿ ನಾಗರೀಕ ಸೇವೆ, ಕೆ.ಎ.ಎಸ್ ಗೆಜೆಟೆಡ್ ಪ್ರೋಬೇಷನರ್, ಗ್ರೂಪ್–ಸಿ, ಆರ್‌ಆರ್‌ಬಿ, ಎಸ್‌ಎಸ್‌ಸಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ರಾಜ್ಯದ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿಯನ್ನು ನೀಡಲಾಗುತ್ತಿದ್ದು, ತರಬೇತಿಗೆ ಅಭ್ಯರ್ಥಿಗಳಿಂದ ಸೇವಾಸಿಂಧು ಪೋರ್ಟಲ್ ಆನ್‌ಲೈನ್ ,ಜತಛಟಿಟಜುಣ.ಇಚಿಡಿಟಿಚಿಣಚಿಞಚಿ. ರಂತ.ಟಿ ನಲ್ಲಿ 2025ರ ಆಗಸ್ಟ್ 28ರ ವರೆಗೆ ಅರ್ಜಿ ಅವಧಿ ವಿಸ್ತರಣೆ. ಈ ತರಬೇತಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂಬಂಧ ತರಬೇತಿಯ ಅವಧಿ, ಶೈಕ್ಷಣಿಕ ವಿದ್ಯಾರ್ಹತೆ, ಆಯ್ಕೆ ವಿಧಾನ, ಇತರೆ ಮಾರ್ಗಸೂಚಿಗಳು ಮುಂತಾದ ವಿವರಗಳಿಗಾಗಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧಿವೃತ ವೆಬ್‌ಸೈಟ್ dom.karnataka.gov.in ನಲ್ಲಿ ಭೇಟಿ ನೀಡಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಾರ್ಯಾಲಯ, ಕೊಠಡಿ ಸಂಖ್ಯೆ ಸಿ–7, ಮೊದಲನೇ ಮಹಡಿ, ಜಿಲ್ಲಾ ಕಛೇರಿಗಳ ಸಂಕೀರ್ಣ (ಮಿನಿ ವಿಧಾನ ಸೌಧ) ಚಿತ್ತಾಪೂರ ರಸ್ತೆ, ಯಾದಗಿರಿ ದೂ.ಸಂ.08473253235ಗೆ ಸಂಪರ್ಕಿಸಬಹದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಂಪೌಂಡ್ ಇಲ್ಲದ ಶಾಲೆಗೆ ಹೋಗಲು ವಿದ್ಯಾರ್ಥಿನಿ ನಿರಾಕರಣೆ


ಮಲ್ಲಮ್ಮ ನುಡಿ ವಾರ್ತೆ

ತುಮಕೂರು.ಆ25:ತಾನು ಓದುವ ಸರಕಾರಿ ಶಾಲೆಗೆ ಕಾಂಪೌಂಡ್ ಕಟ್ಟಿಸಿಕೊಡುವವರೆಗೆ ನಾನು ಶಾಲೆಗೆ ಹೋಗಲ್ಲ ಎಂದು ನಾಲ್ಕನೇ ತರಗತಿ ಬಾಲಕಿಯೊಬ್ಬಳು ಹಠ ಹಿಡಿದು ಕುಳಿತಿರುವ ಘಟನೆ ತುಮಕೂರು ಜಿಲ್ಲೆಯ ಕೊರಟಗೆರೆ ತಾಲೂಕಿನ ಬೆಳಧರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದಿದೆ.

## ರಾಜೇಶ್ವರ: ಸಡಗರ, ಸಂಭ್ರಮದಿಂದ ನಡೆದ ಹೊಳಾ ಹಬ್ಬ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ಬಸವಕಲ್ಯಾಣ ತಾಲ್ಲೂಕಿನ ರಾಜೇಶ್ವರ ಗ್ರಾಮದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಸಡಗರ ಮತ್ತು ಸಂಭ್ರಮದಿಂದ ಶುಕ್ರವಾರ ಹೊಳಾ ಹಬ್ಬ ವಿಜ್ರಂಭಣೆಯಿಂದ ಆಚರಿಸಲಾಯಿತು.



ಹೋಳ ಹಬ್ಬದ ಅಂಗವಾಗಿ ಶುಕ್ರವಾರ ಐತಿಹಾಸಿಕ ಜೋಡು ಎತ್ತಿನ ಬಂಡಿಗಳ ಓಟದ ಸ್ಪರ್ಧೆ ಅದ್ದುರಿಯಾಗಿ ಜರುಗಿತು. ಈ ಓಟದ ಸ್ಪರ್ಧೆಯಲ್ಲಿ ಒಟ್ಟು 48 ಎತ್ತಿನ ಬಂಡಿಗಳು ಭಾಗವಹಿಸಿದ್ದವು. ಈ ಓಟದ ಸ್ಪರ್ಧೆಯಲ್ಲಿ ಪಿಂಟು ಮಚಕುರಿ ಅವರು 51 ಸಾವಿರ ಪ್ರಥಮ ಬಹುಮಾನ ಪಡೆದರು. ಭೀಮಣ್ಣ 35 ಸಾವಿರ ದ್ವಿತೀಯ ಬಹುಮಾನ ಪಡೆದರೆ ಶರಣಪ್ಪ 25 ಸಾವಿರ ತೃತೀಯ ಬಹುಮಾನ ಪಡೆದರು. ಓಟದ ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲಾ ಎತ್ತಿನ ಬಂಡಿಯ ಪ್ರತಿಯೊಬ್ಬ ರೈತರಿಗೆ ತಲಾ 2 ಸಾವಿರ ಸಮಾಧಾನಕರ ಬಹುಮಾನ ನೀಡಲಾಯಿತು. ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಯುವ ಉದ್ಯಮಿ ಭಾರತೀಯ ಜನತಾ ಪಾರ್ಟಿ ಯುವ ಮುಖಂಡ ಸಂತೋಷ್ ಪಾಟೀಲ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಗುಂಡು ರೆಡ್ಡಿ, ಗ್ರಾಮದ ಮುಖಂಡ ಸತೀಶ ಪಾಟೀಲ, ಪಿಕೆಪಿಎಸ್ ಅಧ್ಯಕ್ಷ ರೇವಣಸಿದ್ಧ ಪಾಟೀಲ, ಕೇಶಪ್ಪಾ ಬಿರಾದರ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ನಂದಾಬಾಯಿ ಪ್ರಭು ಹೋನ್ನಳಿ, ಉಪಾಧ್ಯಕ್ಷೆ ಅನಿತಾಬಾಯಿ ಮಾಲೆ, ಪ್ರಮುಖರಾದ ಮಲ್ಲಿಕಾರ್ಜುನ ಮಾಲೆ, ಪ್ರಭು ಹೋನ್ನಳ್ಳಿ, ಗುರುರಾಜ ಮುಲಗೆ, ಸಂತೋಷ ಸೀಗಿ, ಅಯೋಬ ಘೂಲಾರೆ, ವೀರಣ್ಣಾ ಪಾಟೀಲ, ಶಿವರಾಜ ಸಿಗಿ, ಮೀನಾಜ ಪಾಶಾ, ಸುಶೀಲಕುಮಾರ ಪೋಸ್ತಾರ, ಧುಳಪ್ಪಾ ಪೋಸ್ತಾರ, ಅಜೀಮ, ಸೇರಿದಂತೆ ಗ್ರಾಮಸ್ಥರು, ಇದ್ದರು.

## ಬಳ್ಳಾರಿ ಮಹಾನಗರ ಪಾಲಿಕೆ: ನಿಗದಿಪಡಿಸಿದ ಸ್ಥಳಗಳಲ್ಲಿ ಗಣೇಶ ಮೂರ್ತಿ ವಿಸರ್ಜನೆ ಮಾಡಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.25–ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನೀರಿನ ಮೂಲಗಳ ಸಂರಕ್ಷಣೆಯ ಉದ್ದೇಶದಿಂದ ನಗರದಲ್ಲಿ ತುಂಗಭದ್ರಾ ಕಾಲುವೆಯು ಹಾದು ಹೋಗುವ ವಿವಿಧ ಸ್ಥಳಗಳಲ್ಲಿಯೇ ಕಡ್ಡಾಯವಾಗಿ ಗಣೇಶ ಮೂರ್ತಿಯನ್ನು ವಿಸರ್ಜನೆ ಮಾಡಿ ಪರಿಸರ ಸಂರಕ್ಷಣೆಗಾಗಿ ಪಾಲಿಕೆಯೊಂದಿಗೆ ಸಹಕರಿಸಬೇಕು ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

*ಸ್ಥಳಗಳು:*

ಬೆಂಗಳೂರು ರಸ್ತೆ, ತಾಳೂರು ರಸ್ತೆ, ಕಪ್ಪಗಲ್ಲು ರಸ್ತೆ, ಅಲ್ಲೀಪುರ (ಹೊಸಪೇಟೆ ರಸ್ತೆ), ಬೆಳಗಲ್ಲು ರಸ್ತೆ (ಡಿ.ಸಿ ನಗರ), ಸಿರುಗುಪ್ಪ ರಸ್ತೆಯ ಹವಂಭಾವಿ,ಬಂಡಿಹಟ್ಟಿಯ ಆಲದಹಳ್ಳಿ ರಸ್ತೆ ಮತ್ತು ಭತ್ರಿ.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಅಧಿಸೂಚನೆಯಂತೆ ರಾಜ್ಯದಲ್ಲಿ ಜಲಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್(ಪಿ.ಓ.ಪಿ)ನಿಂದ ತಯಾರಿಸಿದ ಗಣೇಶ ಮೂರ್ತಿಗಳ ಮಾರಾಟ, ಬಳಕೆ ಮತ್ತು ರಾಸಾಯನಿಕದಿಂದ ತಯಾರಿಸಿದ ಬಣ್ಣಗಳ ಲೇಪನವನ್ನು ಗಣೇಶ ಮೂರ್ತಿಯ ತಯಾರಿಕೆಯಲ್ಲಿ ಉಪಯೋಗಿಸುವುದನ್ನು ನಿಷೇಧಿಸಲಾಗಿದೆ.

ಹಾಗಾಗಿ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿ.ಓ.ಪಿ) ಹಾಗೂ ರಾಸಾಯನಿಕ ಬಣ್ಣಗಳ ಲೇಪನದಿಂದ ತಯಾರಿಸಿದ ಗಣೇಶ ಮೂರ್ತಿಗಳನ್ನು ಪೂಜೆಗೆ ಉಪಯೋಗಿಸದೇ ಮಣ್ಣಿನಿಂದ ಹಾಗೂ ನೈಸರ್ಗಿಕ ಬಣ್ಣಗಳನ್ನು ಉಪಯೋಗಿಸಿ ತಯಾರಿಸಿದ ಗಣೇಶ ಮೂರ್ತಿಗಳನ್ನು ಪೂಜಿಸಬೇಕು ಎಂದು ಪಾಲಿಕೆಯು ಪ್ರಕಟಣೆಯಲ್ಲಿ ಕೋರಿದೆ.

## ಬಿ.ವಿ. ಭೂಮರಡ್ಡಿ ಮಹಾವಿದ್ಯಾಲಯ ಎನ್.ಸಿ.ಸಿ. ಕಡೆಟ್ಸ್‌ಗಳಿಂದ ರಕ್ತದಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಶಿವಶಕ್ತಿ ಭುವನ, ರಾಂಪುರೆ ಕಾಲೊನಿ,ಬೀದರ ಶಾಖೆ–ಯ ಆಶ್ರಯದಲ್ಲಿ ರಾಜಯೋಗಿನಿ ದಾದಿ ಪ್ರಕಾಶಮಣಿಯವರ 18ನೆಯ ಪುಣ್ಯಸ್ಮರಣೆ ಅಂಗವಾಗಿ ಇಡೀ ಭಾರತ ಮತ್ತು ನೇಪಾಳ ದೇಶದ 6000 ಶಾಖೆಗಳಿಂದ ರಕ್ತದಾನ ಶಿಬಿರವನ್ನು ಶಾಖೆಯ ಪ್ರಮುಖರಾದ ಬಿ.ಕೆ ಸುಮಂಗಲ ಬಹೆನ್ ಜೀ, ಬಿ.ಕೆ ಸುನಂದಾ ಬಹೆನ್ ಜೀ, ಹಾಗೂ ಬಿ.ಕೆ ಪಾರ್ವತಿ ಬಹೆನ್ ಜೀ, ಅವರ ಮಾರ್ಗದರ್ಶನದಲ್ಲಿ ಆಯೋಜಿಸಲಾಯಿತು. ಈ ಶಿಬಿರದಲ್ಲಿ ಬಿ.ವಿ.ಬಿ ಮಹಾವಿದ್ಯಾಲಯದ ಎನ್.ಸಿ.ಸಿ. ಕಡೆಯಟ್ಸ್ ಉತ್ಸಾಹದಿಂದ ಭಾಗವಹಿಸಿ ರಕ್ತದಾನ ಮಾಡುವುದರ ಮೂಲಕ ಮಾನವೀಯ ಸೇವೆಗೆ ಮಾದರಿಯಾದರು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಸಮಾಜಸೇವಕರಾದ ಶ್ರೀ ಶಿವಶರಣಪ್ಪ ವಾಲಿ, ಶಿಕ್ಷಣ ತಜ್ಞರಾದ ಶ್ರೀ ಬಿ. ಜಿ. ಶೇಟಕಾರ್, ಹಾಗೂ ಶ್ರೀ ಬಸವರಾಜ ಜಾಬಶೆಟ್ಟಿ ಹಾಜರಿದ್ದು,ರಕ್ತದಾನದ ಮಹತ್ವವನ್ನು ಹಿರಿದಾಗಿ ವಿವರಿಸಿದರು. ಅವರು ಯುವಕರು ಇಂತಹ ಸಮಾಜಮುಖಿ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದು ದೇಶದ ಭವಿಷ್ಯಕ್ಕೆ ಶ್ರೇಷ್ಠ ಹೂಡಿಕೆ ಎಂದು ಅಭಿಪ್ರಾಯಪಟ್ಟರು.

ಬಿ.ವಿ.ಬಿ ಮಹಾವಿದ್ಯಾಲಯದ ಪ್ರಾಚಾರ್ಯರು ಡಾ. ಪಿ. ವಿಠಲ ರೆಡ್ಡಿ ಮಾತನಾಡಿ, "ರಕ್ತದಾನವು ಜೀವದಾನ. ಎನ್.ಸಿ.ಸಿ ಕಡೆಯಟ್ಸ್ ತೋರಿಸಿದ ಮಾನವೀಯ ಬದ್ಧತೆ ಎಲ್ಲ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದೆ" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸಂಘಟಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಶಿಬಿರದ ಯಶಸ್ಸಿಗೆ ಸಹಕಾರ ನೀಡಿದರು. ಕಾರ್ಯಕ್ರಮದಲ್ಲಿ ಅನೇಕರು ಸಕ್ರಿಯವಾಗಿ ಪಾಲ್ಗೊಂಡು, ಮಾನವೀಯ ಸೇವೆಯ ಪರಂಪರೆಯನ್ನು ಮುಂದುವರೆಸಿದರು.

## ವಿಶೇಷಚೇತನರ ಕಲ್ಯಾಣ ಇಲಾಖೆ: ಶುಲ್ಕ ಮರುಪಾವತಿ ಯೋಜನೆಯಡಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.25–ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2025–26ನೇ ಸಾಲಿಗೆ ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಯೋಜನೆಯಡಿ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಉನ್ನತ ಶಿಕ್ಷಣ ಪಡೆಯುವ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರಸ್ತಕ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ ಮತ್ತು ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ, ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸಲು ಸರ್ಕಾರವು ಆದೇಶಿಸಿದೆ.

ಅರ್ಜಿ ಸಲ್ಲಿಸಲು ಡಿಸೆಂಬರ್ 31 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಎಂಆರ್‌ಡಬ್ಲೂಗಳಾದ ಬಳ್ಳಾರಿ,ಕಂಪ್ಲಿ–8880875620, ಕುರುಗೋಡು–9538000887, ಸಿರುಗುಪ್ಪ–9743509698, ಸಂಡೂರು–9632052270 ಅಥವಾ ನಗರದ ಕಂಟೋನ್ ಮೆಂಟ್ ನ ಶಾಂತಿಧಾಮ ಆವರಣದ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ದೂ.08392–267886 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಗೋವಿಂದಪ್ಪ ಅವರು ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಬಳ್ಳಾರಿ,ಆ.25–ಬಳ್ಳಾರಿಯ ಗಾಂಧಿನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಹರೀಶ್ ಕುಮಾರ್ ಸ್ವಾಮಿ ಎನ್ನುವ 26 ವರ್ಷದ ವ್ಯಕ್ತಿಯು ಆ.11 ರಂದು ಕಾಣೆ–ಯಾಗಿದ್ದು, ಈ ಕುರಿತು ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಠಾಣಾಧಿಕರಿ ಅವರು ತಿಳಿಸಿದ್ದಾರೆ.

**ಚಹರೆ ಗುರುತು:** ಅಂದಾಜು 5.8 ಅಡಿ ಎತ್ತರ, ದುಂಡು ಮುಖ, ಗೋಧಿ ಮೈಬಣ್ಣ, ಮೂಗಿನ ಮೇಲೆ ಒಂದು ಕಪ್ಪು ಮಚ್ಚೆ ಇರುತ್ತದೆ. ಕಾಣೆಯಾದ ಸಂದರ್ಭದಲ್ಲಿ ಕಪ್ಪು ಬಣ್ಣದ ಟೀ–ಶರ್ಟ್ ಹಾಗೂ ಕಪ್ಪು ಬಣ್ಣ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ತೆಲುಗು, ಹಿಂದಿ ಮತ್ತು ಆಂಗ್ಲ ಭಾಷೆ ಮಾತನಾಡುತ್ತಾನೆ. ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ಗಾಂಧಿನಗರ ಪೊಲೀಸ್ ಠಾಣೆಯ ದೂ.08392–272192 ಅಥವಾ ಪಿಎಸ್‌ಐ ಮೊ.9480803082, ಪಿಐ ಮೊ.9480803046 ಬಳ್ಳಾರಿ ಕಂಟ್ರೋಲ್ ರೂಂ ದೂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೋಟಾರು ಸೈಕಲ್ ವಿಮಾ ಮೊತ್ತ ಪಾವತಿಸುವಂತೆ ಜಿಲ್ಲಾ ಗ್ರಾಹಕರ ಆಯೋಗ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.25–ಬಳ್ಳಾರಿಯ ಪ್ರೋ.ಫೊರಾಜೆನ್ ಸೀಡ್ಸ್ ಪ್ರೈವೇಟ್ ಲಿಮಿಟೆಡ್ ನ ನಿರ್ದೇಶಕ ಕೆ.ಅನಿಲ್ ಕುಮಾರ್ ರೆಡ್ಡಿ ಅವರ ಕಳ್ಳತನವಾದ ಮೋಟಾರು ಸೈಕಲ್ ನ ವಿಮಾ ಮೊತ್ತ ಪಾವತಿಸುವಂತೆ ಹುಬ್ಬಳ್ಳಿಯ ಚೋಲ ಎಂಎಸ್ ಜನರಲ್ ಇನ್ಸೂರೆನ್ಸ್ ಕಂಪನಿ ಲಿಮಿಟೆಡ್ ನ ವ್ಯವಸ್ಥಾಪಕರಿಗೆ ಜಿಲ್ಲಾ ಗ್ರಾಹಕರ ಆಯೋಗವು ಆದೇಶಿಸಿದೆ.

ಕೆ.ಅನಿಲ್ ಕುಮಾರ್ ರೆಡ್ಡಿ ತಮ್ಮ ವಾಹನ ಸಂ. ಕೆಎ 34 ಇಪಿ 8879 ಗೆ 16–01–2023 ರಿಂದ 15–01–2024 ರವರೆಗಿನ ಅವಧಿಗೆ ವಿಮೆ ಮಾಡಿಸಿದ್ದರು. ವಿಮಾ ಪಾಲಿಸಿ ಚಾಲ್ತಿ ಅವಧಿಯಲ್ಲಿ 05–02–2023 ರಂದು ಮೋಕಾ ಗ್ರಾಮದಲ್ಲಿ ಕಾಣೆಯಾಗಿದ್ದು, ಈ ಕುರಿತು ಮೋಕಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು ಹಾಗೂ ವಾಹನವು ಪತ್ತೆಯಾಗದ ಕಾರಣ ಪೊಲೀಸ್ ಇಲಾಖೆಯಿಂದ ನ್ಯಾಯಾಲಯಕ್ಕೆ "ಸಿ" ಅಂತಿಮ ವರದಿ ಸಲ್ಲಿಸಿದ್ದರು. ವಾಹನಕ್ಕೆ ಸಂಬಂಧಿಸಿದ ದಾಖಲೆ ಹಾಗೂ ಪೊಲೀಸ್ ವರದಿ ಸೇರಿ ವಿಮಾ ಕಂಪನಿಗೆ ರೂ.72,022 ಮತ್ತು ಸೇವಾ ನ್ಯೂನ್ಯತೆ, ದೂರಿನ ವೆಚ್ಚ ಪಾವತಿಸುವಂತೆ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ವಿಮಾ ಕಂಪನಿಯು ಪ್ರಕರಣದಲ್ಲಿ ಹಾಜರಾಗಿ ವಾಹನವು ಕಂಪನಿಯ ನಿರ್ದೇಶಕ ಹೆಸರಿನಲ್ಲಿರುವುದರಿಂದ ದೂರುದಾರರು ಗ್ರಾಹಕರಾಗುವುದಿಲ್ಲ ಹಾಗೂ ವಿಮಾ ಕಂಪನಿಗೆ ಕಳ್ಳತನವಾದ 424 ದಿನಗಳ ನಂತರ ಕ್ಲೈಮ್ ಸಲ್ಲಿಸಿರುವುದರಿಂದ ವಿಮಾ ಪಾಲಿಸಿಯ ನಿಬಂಧನೆಗಳನ್ನು ಉಲ್ಲಂಘಿಸಲಾಗಿದೆ ಎಂದು ಕ್ಲೈಮ್‌ನ್ನು ತಿರಸ್ಕರಿಸಿರುವುದಾಗಿ ಆಯೋಗಕ್ಕೆ ತಕರಾರು ಸಲ್ಲಿಸಿದ್ದರು.

ಆಯೋಗದ ಅಧ್ಯಕ್ಷರಾದ ಎನ್. ತಿಪ್ಪೇಸ್ವಾಮಿ ಮತ್ತು ಸದಸ್ಯರಾದ ಮಾರ್ಲಾ ಶಶಿಕಲಾ ಅವರು ಪ್ರಕರಣದ ದಾಖಲಾತಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ವಾದ ವಿವಾದ ಆಲಿಸಿದ ನಂತರ ದೂರುದಾರರು ವಿಮಾ ಪಾಲಿಸಿಗಾಗಿ ವಿಮಾ ಕಂತು ಪಾವತಿಸುವುದರಿಂದ ಗ್ರಾಹಕರಾಗಿರುತ್ತಾರೆ ಹಾಗೂ ವಿಮಾ ಕಂಪನಿಯು ಕ್ಲೈಮ್‌ನ್ನು ಯಾವ ದಿನಾಂಕಕ್ಕೆ ಸಲ್ಲಿಸಿರುವುದೆಂದು ಆಯೋಗಕ್ಕೆ ದಾಖಲಾತಿ ಒದಗಿಸದಿರುವುದು ಸೇವಾ ನಿರ್ಲಕ್ಷ ತನ ಎಂದು ಪರಿಗಣಿಸಿದೆ.

ದೂರುದಾರರು ಕೂಡ ವಿಮಾ ಪಾಲಿಸಿಯ ಷರತ್ತನ್ನು ಉಲ್ಲಂಘಿಸಿದ ಕಾರಣ ನಾನ್–ಸ್ಟಾಂಡರ್ಡ್ ಆಧಾರದಲ್ಲಿ ಪಾಲಿಸಿ ಮೊತ್ತದ ಶೇ.75 ರಷ್ಟು ಅಂದರೆ ರೂ.54,000, ಮಾನಸಿಕ ಹಿಂಸೆಗೆ ಪರಿಹಾರ ರೂ.10,000 ಮತ್ತು ದೂರಿನ ವೆಚ್ಚ ಮೊತ್ತ ರೂ.5,000 ಗಳನ್ನು ವಿಮಾ ಕಂಪನಿಯು ದೂರುದಾರರಿಗೆ 45 ದಿನಗಳೊಳಗಾಗಿ ಪಾವತಿಸುವಂತೆ, ತಪ್ಪಿದಲ್ಲಿ ರೂ.54,000 ಗಳಿಗೆ ಶೇ.8 ರಷ್ಟು ಬಡ್ಡಿ ಪಾವತಿಸುವಂತೆ ಆಯೋಗ ಆದೇಶಿಸಿದೆ.

## ಅಪಘಾತ ವಿಮೆ ಪಾವತಿಸುವಂತೆ ಜಿಲ್ಲಾ ಗ್ರಾಹಕರ ಆಯೋಗ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.25–ಅಪಘಾತಕ್ಕೀಡಾಗಿ ಸಾವನ್ನಪ್ಪಿದ ನಗರದ ನಿವಾಸಿ ದಿಗಂತ ಶಫೀ ಎಂಬುವವರಿಗೆ ಅಪಘಾತ ವಿಮೆ ಪಾವತಿಸುವಂತೆ ಮೆ.ಓರಿಯೆಂಟಲ್ ಇನ್ಸೂರೆನ್ಸ್ ಕಂಪನಿ ಲಿಮಿಟೆಡ್ ನ ಶಾಖಾ ವ್ಯವಸ್ಥಾಪಕರಿಗೆ ಜಿಲ್ಲಾ ಗ್ರಾಹಕರ ಆಯೋಗವು ಆದೇಶಿಸಿದೆ.

ದಿಗಂತ ಶಫೀ ತಮ್ಮ ಮೋಟಾರು ಸೈಕಲ್ ಸಂ. ಕೆಎ 34/ಇಪಿ 1257 ಗೆ 01–02–2023 ರಿಂದ 30–11–2024 ರ ಅವಧಿಗೆ ವಿಮಾ ಕಂಪನಿಯಿಂದ ವಿಮಾ ಪಾಲಿಸಿ ಪಡೆದಿದ್ದರು. 03–06–2024 ರಂದು ಜೋಳದರಾಶಿ ಗ್ರಾಮದ ಬಳಿ ಅಪಘಾತಕ್ಕೀಡಾಗಿ ತೀವ್ರ ಗಾಯಗೊಂಡು ಬಿಎಂಸಿಆರ್‌ಸಿ (ವಿಮ್ಸ್) ಆಸ್ಪತ್ರೆಗೆ ದಾಖಲೆಗೊಂಡು 08–06–2024 ರಂದು ನಿಧನ ಹೊಂದಿದ್ದರು. ಅವರ ಪತ್ನಿ ಹೀನಾ ಕೌಸರ್ ಆ ಪ್ರದೇಶದ ವ್ಯಾಪ್ತಿಯ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ, ವಿಮಾ ಕಂಪನಿಗೆ ಮಾಹಿತಿ ಸಹ ನೀಡಿದ್ದರು. ಸೂಕ್ತ ದಾಖಲೆ ಸಲ್ಲಿಸಿದ್ದ ಅವರ ಕ್ಲೈಮ್‌ನ್ನು ತಿರಸ್ಕರಿಸಿರುವುದಿಲ್ಲ ಮತ್ತು ವಿಮಾ ಮೊತ್ತವನ್ನೂ ಸಹ ಪಾವತಿಸಿರುವುದಿಲ್ಲ. ಹಾಗಾಗಿ ರೂ.15,00,000 ವೈಯಕ್ತಿಕ ಅಪಘಾತದ ಮೊತ್ತ ಹಾಗೂ ಇತರೆ ಪರಿಹಾರ ಕೋರಿ ಆಯೋಗಕ್ಕೆ ದೂರು ದಾಖಲಿಸಿದ್ದರು.

ಆಯೋಗದ ಅಧ್ಯಕ್ಷರಾದ ಎನ್. ತಿಪ್ಪೇಸ್ವಾಮಿ ಹಾಗೂ ಸದಸ್ಯರಾದ ಮಾರ್ಲಾ ಶಶಿಕಲಾ ಅವರು ಉಭಯ ಪಕ್ಷಕಾರರ ವಾದ ವಿವಾದ ಆಲಿಸಿದ ನಂತರ ದೂರುದಾರರ ಪತಿಯು ಅಪಘಾತದ ಸಮಯದಲ್ಲಿ ಸೂಕ್ತ ಚಾಲನಾ ಪರವಾನಿಗೆ ಹಾಗೂ ವಾಹನದ ದಾಖಲೆಗಳನ್ನು ಸಮರ್ಪಕವಾಗಿ ಹೊಂದಿದ್ದರು ಎಂದು ತಿಳಿಸಿದೆ.

ವಿಮಾ ಕಂಪನಿಯು ಪಾಲಿಸಿ ವಿತರಿಸುವ ಸಮಯದಲ್ಲಿ ಸೂಕ್ತ ದಾಖಲೆಗಳನ್ನು ಪರಿಶೀಲಿಸಿದ ನಂತರ ಪಾಲಿಸಿಯನ್ನು ವಿತರಿಸಬೇಕೇ ವಿನಃ ಕ್ಲೈಮ್ ಸಲ್ಲಿಸಿದ ಸಮಯದಲ್ಲಿ ವಿಮಾ ಮೊತ್ತ ಪಾವತಿಸಲು ತಕರಾರು ತೆಗೆಯುವುದು ಸಮಂಜಸವಲ್ಲ. ಜೊತೆಗೆ ದೂರನ್ನು ತಡವಾಗಿ ಸಲ್ಲಿಸಿದ ಮಾತ್ರಕ್ಕೆ ಕ್ಲೈಮ್‌ನ್ನು ತಿರಸ್ಕರಿಸುವಂತಿಲ್ಲ. ಇದು ಸೇವಾ ನ್ಯೂನ್ಯತೆ ಎಂದು ಆಯೋಗ ಅಭಿಪ್ರಾಯಪಟ್ಟಿದೆ.

ದೂರುದಾರರು ಯಾವ ದಿನಾಂಕದಂದು ವಿಮಾ ಕಂಪನಿಗೆ ಮಾಹಿತಿ ಸಲ್ಲಿಸಿದ್ದಾರ ಎಂದು ಆಯೋಗಕ್ಕೆ ಸ್ಪಷ್ಟವಾಗಿ ಮಾಹಿತಿ ಸಲ್ಲಿಸದ ಕಾರಣ ಎದುರುದಾರರು ವೈಯಕ್ತಿಕ ಅಪಘಾತದ ವಿಮಾ ಮೊತ್ತ ರೂ.15,00,000 ಗಳಲ್ಲಿ ಶೇ.75 ರಷ್ಟು ಅಂದರೆ ರೂ.11,25,000 ಮತ್ತು ದೂರಿನ ವೆಚ್ಚ ರೂ.5000 ದೂರುದಾರರಿಗೆ ಪಾವತಿಸಬೇಕು ಎಂದು ಆದೇಶಿದೆ.

ಪ್ರಕರಣದಲ್ಲಿ ವಿಮಾ ಕಂಪನಿಯು ಹಾಜರಾಗಿ ತಕರಾರು ಸಲ್ಲಿಸುತ್ತಾ ಅಪಘಾತವಾದ 6 ದಿನದ ನಂತರ ಪ್ರಕರಣವನ್ನು ದಾಖಲಿಸಿ ಪಾಲಿಸಿ ನಿಬಂಧನೆಗಳನ್ನು ಉಲ್ಲಂಘಿಸಿದ ಕಾರಣ ವಿಮಾ ಮೊತ್ತ ಪಾವತಿಸಿರುವುದಿಲ್ಲವೆಂದು ಸಮರ್ಥಿಸಿಕೊಂಡಿದೆ.

## ಬಳ್ಳಾರಿ: ಗಣೇಶ ಹಬ್ಬ ಸಂದರ್ಭದಲ್ಲಿ ಕಟ್ಟೆಚ್ಚರ ವಹಿಸಿ–ಐಜಿಪಿ ವರ್ತಿಕ ಕಟಿಯಾರ್ ನಿರ್ದೇಶನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.25–ಜಿಲ್ಲೆಯಾದ್ಯಂತ ಪ್ರಸಕ್ತ ಸಾಲಿನಲ್ಲಿ ಆಚರಿಸುವ ಗಣೇಶ ಹಬ್ಬದ ಸಂದರ್ಭದಲ್ಲಿ ಸೂಕ್ತ ಅಗತ್ಯ ಮುಂಜಾಗ್ರತಾ ಕ್ರಮ ಪಾಲಿಸುವಂತೆ ಸೂಚಿಸಬೇಕು. ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡಬಾರದು ಎಂದು ಬಳ್ಳಾರಿ ವಲಯ ಪೊಲೀಸ್ ಮಹಾನೀರಿಕ್ಷಕರಾದ ವರ್ತಿಕ ಕಟಿಯಾರ್ ಅವರು ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯ ಪೊಲೀಸ್ ಅಧಿಕಾರಿಗಳೊಂದಿಗೆ ನಗರದ ಎಸ್‌ಪಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಣೇಶ ಪ್ರತಿಷ್ಠಾಪನೆ ಸಂಬಂಧಿಸಿದಂತೆ ಯಾವುದೇ ಕಾರ್ಯಕ್ರಮಗಳ ಕುರಿತಂತೆ ಸಂಬಂಧಪಟ್ಟ ಇಲಾಖೆಗಳಿಂದ ಪೂರ್ವಾನುಮತಿ ಪಡೆದುಕೊಳ್ಳುವುದು ಕಡ್ಡಾಯವಾಗಿದ್ದು, ಒಂದು ವೇಳೆ ಉಲ್ಲಂಘಿಸಿದಲ್ಲಿ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದು ಹೇಳಿದರು. ಬಳ್ಳಾರಿ ವಲಯದ ಎಲ್ಲಾ ಜಿಲ್ಲೆಯ ಪೊಲೀಸ್ ಠಾಣೆ, ವೃತ್ತಕಚೇರಿ, ಉಪ–ವಿಭಾಗದ ಮತ್ತು ಪೊಲೀಸ್ ಅಧೀಕ್ಷಕರ ಮಟ್ಟದಲ್ಲಿ ಎಲ್ಲಾ ಧರ್ಮದ ಮುಖಂಡರುಗಳನ್ನು ಕರೆದು ಶಾಂತಿ ಸಭೆ ನಡೆಸಿ, ಸಭೆಗೆ ಹಾಜರಾದವರ ಹೆಸರು, ವಿಳಾಸ ಮತ್ತು ದೂರವಾಣಿ ಸಂಖ್ಯೆ ಇತ್ಯಾದಿಗಳ ಜೊತೆಗೆ ಅವರ ಸಹಿ ಪಡೆದು, ಅವಶ್ಯಕ ಸಲಹೆ ಸೂಚನೆಗಳನ್ನು ನೀಡಿ, ಸಾರ್ವಜನಿಕರೊಂದಿಗೆ ನಿಕಟ ಸಂಪರ್ಕ ಹೊಂದಿರಬೇಕು ಎಂದರು. ಸಾಮಾಜಿಕ ಜಾಲತಾಣಗಳಲ್ಲಿ ಕಂಡುಬರುವ ಆಕ್ಷೇಪಾರ್ಹ, ಪ್ರಚೋದನಕಾರಿ ಸಂದೇಶ, ಚಿತ್ರ ಮತ್ತು ವಿಡಿಯೋಗಳ ಬಗ್ಗೆ ಗಮನಹರಿಸಿ ಅಂತಹವುಗಳು ಕಂಡುಬಂದಲ್ಲಿ ಅವರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಅಳವಡಿಸುವ ಬ್ಯಾನ್ಸ್, ಬಂಟಿಂಗ್ಸ್, ಫ್ಲೆಕ್ಸ್ ಗಳಿಗೆ ಸಂಬಂಧಿಸಿದಂತೆ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಗ್ರಾಮ ಪಂಚಾಯತ್ ಅಧಿಕಾರಿಗಳು ಹಾಗೂ ಪಿ.ಡಿ.ಓ ಗಳ ಜೊತೆ ಸಭೆ ನಡೆಸಿ ಅನುಮತಿ ನೀಡುವ ಮೊದಲು ಪೊಲೀಸ್ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಎನ್‌ಓಸಿ ಪಡೆದು ಪರವಾನಿಗೆ ನೀಡಬೇಕು ಎಂದು ಹೇಳಿದರು.

ಗಣೇಶ ಮೂರ್ತಿಗಳ ಮೆರವಣಿಗೆ ಸಮಯದಲ್ಲಿ ಪ್ರತಿಷ್ಠಾಪನಾ ಸ್ಥಳಗಳಲ್ಲಿ ಪಟಾಕಿಗಳನ್ನು ಸಿಡಿಸಲು ಪೂರ್ವಾನುಮತಿ ಪಡೆದುಕೊಳ್ಳದೇ ಇರುವವರಿಗೆ ಪಟಾಕಿ ಬಳಕೆಗೆ ಅವಕಾಶ ನೀಡಬಾರದು. ಯಾವುದೇ ಇತರೇ ಧರ್ಮದ ಧಾರ್ಮಿಕ ಕೇಂದ್ರಗಳ ಮುಂದೆ ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿ ಪಟಾಕಿಗಳನ್ನು ಸಿಡಿಸದಂತೆ ಸೂಚಿಸಬೇಕು ಎಂದರು.

ಗಣೇಶ ಮೂರ್ತಿಗಳ ಮೆರವಣಿಗೆ ಸಮಯದಲ್ಲಿ ವಿಡಿಯೋ ಗ್ರಾಫಿಂಗ್ ಮಾಡಬೇಕು. ಸ್ಕೈ ಸೆಂಟ್ರಿ ಮಾಡುವ ಸಿಬ್ಬಂದಿಗಳು ಸಮವಸ್ತ್ರದಲ್ಲಿದ್ದು, ಸಾರ್ವಜನಿಕವಾಗಿ ಕಾಣಿಸುವಂತೆ ಹಾಜರಿದ್ದು ಕರ್ತವ್ಯ ನಿರ್ವಹಿಸಬೇಕು. ಮೆರವಣಿಗೆಯ ಸಮಯದಲ್ಲಿ ಸಾರ್ವಜನಿಕರಿಗೆ ತಾವು ಸಿ.ಸಿ.ಟಿ.ವಿ ಕ್ಯಾಮೆರಾ ರಲ್ಲಿ ಹಾಗೂ ವಿಡಿಯೋ ಗ್ರಾಫಿಂಗ್‌ನಲ್ಲಿ ಸೆರೆಯಾಗುತ್ತಿದ್ದೀರಿ ಎಂದು ಮನವರಿಕೆ ಮಾಡಿಕೊಡಬೇಕು ಎಂದರು. ಕಳೆದ ವರ್ಷಗಳಲ್ಲಿ ಗಣೇಶ ಪ್ರತಿಷ್ಠಾಪಿಸುವ ಸಂಬಂಧ ಗಲಾಟೆ ನಡೆದ ಪ್ರದೇಶಗಳಲ್ಲಿ ಪ್ರಸ್ತುತದಲ್ಲಿ ಸೂಕ್ತ ರೀತಿಯ ಬಂದೋಬಸ್ತ್ ವ್ಯವಸ್ಥೆ ಮಾಡಬೇಕು. ಸಂಬಂಧಿಸಿದ ಇಲಾಖೆಯಿಂದ ಅನುಮತಿ ಪತ್ರ ಪಡೆದಿರುವ ಬಗ್ಗೆ ಪರಿಶೀಲನೆ ನಡೆಸಬೇಕು. ಅನುಮತಿ ಪಡೆ–ಯದೇ ಇದ್ದವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ರಾತ್ರಿಗಸ್ತು ಚೆಕ್ಕಿಂಗ್, ಉಸ್ತುವಾರಿ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿರುವ ಪ್ರಮುಖ ಗಣೇಶ ಪ್ರತಿಷ್ಠಾಪನಾ ಸ್ಥಳಗಳು, ಮಸೀದಿಗಳು ಮತ್ತು ಇನ್ನಿತರ ಪ್ರಮುಖ ಸ್ಥಳಗಳಿಗೆ ನಿಯಮಿತವಾಗಿ ಭೇಟಿ ನೀಡಬೇಕು. ಭೇಟಿ ನೀಡಿದ ಕುರಿತಾದ ಮಾಹಿತಿಯನ್ನು ಕಂಟ್ರೋಲ್ ರೂಂ ಗೆ ರವಾನಿಸಬೇಕು. ರಾತ್ರಿಗಸ್ತು ಅಧಿಕಾರಿಗಳು ತಮ್ಮ ವಾಹನಗಳ ಟಾಪ್ ಲೈಟ್‌ಗಳನ್ನು ಕಡ್ಡಾಯವಾಗಿ ಬಳಸಬೇಕು. ತಮ್ಮ ಗಸ್ತು ಪುಸ್ತಕದಲ್ಲಿ ನಮೂದು ಮಾಡಬೇಕು. ಈ ಕುರಿತು ಪಿ.ಐ., ಜಿಲ್ಲಾ ನಿಸ್ತಂತು ಘಟಕ ದವರು ರಿಜಿಸ್ಟರ್‌ನಲ್ಲಿ (ಆಯಾ ದಿನದ) ನಮೂದಿಸಬೇಕು ಎಂದರು.

*ವಿಸರ್ಜನೆ ದಿನದಂದು ಕಟ್ಟೆಚ್ಚರ ವಹಿಸಿ:*

ಗಣೇಶ ಮೂರ್ತಿ ವಿಸರ್ಜನೆಯ ದಿನಗಳಂದು ಮೆರವಣಿಗೆಯ ಸಮಯದಲ್ಲಿ ಎಸ್‌ಪಿ, ಎಎಸ್‌ಪಿ, ಡಿಎಸ್‌ಪಿ, ಸಿಪಿಐ, ಪಿಐ, ಪಿಎಸ್‌ಐ ಅಧಿಕಾರಿಗಳು ಸೂಕ್ಷ್ಮ ಹಾಗೂ ಅತಿ ಸೂಕ್ಷ್ಮ ಪ್ರದೇಶಗಳಾದ ದೇವಸ್ಥಾನ, ಚರ್ಚ್, ಮಸೀದಿ ಇತ್ಯಾದಿ ಜನಸಂದಣಿ ಪ್ರದೇಶಗಳಲ್ಲಿ ಹಾಜರಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಕಟ್ಟೆಚರ ವಹಿಸಬೇಕು ಎಂದು ಐಜಿಪಿ ಅವರು ಹೇಳಿದರು. ಗಣೇಶ ಪ್ರತಿಷ್ಠಾಪನಾ ಸ್ಥಳಗಳಲ್ಲಿ, ವಿಸರ್ಜನಾ ಮೆರವಣಿಗೆ ಮಾರ್ಗ ಮತ್ತು ವಿಸರ್ಜನಾ ಸ್ಥಳಗಳಲ್ಲಿ ಸಿ.ಸಿ. ಟಿವಿ ಅಳವಡಿಸಬೇಕು. ವಿಸರ್ಜನಾ ಮೆರವಣಿಗೆ ಮಾರ್ಗ ಹಾಗೂ ವಿಸರ್ಜನಾ ಸ್ಥಳಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಬೇರೆ ಬೇರೆ ವಿಸರ್ಜನಾ ಮಾರ್ಗಗಳು ಹಾಗೂ ಸ್ಥಳಗಳನ್ನು ನಿಗಧಿಪಡಿಸಬೇಕು. ವಿಸರ್ಜನೆ ಸ್ಥಳಗಳ ಹತ್ತಿರ ಸಾಕಷ್ಟು ಬೆಳಕಿನ ವ್ಯವಸ್ಥೆ ಮಾಡಬೇಕು ಎಂದರು. ಗಣೇಶ ವಿಸರ್ಜನಾ ಮೆರವಣಿಗೆ ಮಾರ್ಗದಲ್ಲಿನ ವ್ಯವಸ್ಥೆಗಳ ಕುರಿತು ಸ್ಥಳೀಯ ಆಡಳಿತ ಸಂಸ್ಥೆ, ವಿದ್ಯುತ್ ವಿತರಣಾ ಸಂಸ್ಥೆ, ಅಗ್ನಿಶಾಮಕ ದಳ ಹಾಗೂ ಇತರೇ ಇಲಾಖೆಗಳೊಂದಿಗೆ ಸಂಪರ್ಕದಲ್ಲಿದ್ದು, ಅವರಿಂದ ಅಗತ್ಯ ಸಹಕಾರ ಪಡೆದು ಯಾವುದೇ ಅವ್ಯವಸ್ಥೆ ಉಂಟಾಗದಂತೆ ನೋಡಿಕೊಳ್ಳಬೇಕು. ಸಂಬಂಧಪಟ್ಟ ಪೊಲೀಸ್ ಅಧೀಕ್ಷಕರು ಜಿಲ್ಲಾಡಳಿತದೊಂದಿಗೆ ಚರ್ಚಿಸಿ ಕೃತಕ ವಿಸರ್ಜನಾ ಸ್ಥಳಗಳನ್ನು ನಿರ್ಮಿಸಲು ಕ್ರಮ ವಹಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೆ.ಪಿ.ರವಿಕುಮಾರ್, ಡಿವೈಎಸ್‌ಪಿಗಳು, ವಿವಿಧ ಪೊಲೀಸ್ ಠಾಣೆಗಳ ಪೊಲೀಸ್ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಮಕ್ಕಳೇ ದುಶ್ಚಟಗಳಿಂದ ದೂರವಿರಿ: ಬಸವಲಿಂಗ ಸ್ವಾಮಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.25–ಮಕ್ಕಳು ದುಶ್ಚಟಗಳಿಂದ ದೂರವಿರಬೇಕು ಎಂದು ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ತಾಲ್ಲೂಕಿನ ಸಿದ್ದಯ್ಯನ ಕೋಟೆಯ ವಿಜಯ ಮಹಾಂತೇಶ್ವರ ಶಾಖಾಮಠದ ಬಸವಲಿಂಗ ಮಹಾಸ್ವಾಮಿ ಚಿತ್ತರಗಿ ಅವರು ಹೇಳಿದರು. ನಗರದ ಡಾ.ರಾಜ್ ಕುಮಾರ್ ರಸ್ತೆಯ ಸರ್ಕಾರಿ (ಮಾಜಿ ಪುರಸಭೆ) ಪದವಿ ಪೂರ್ವ ಕಾಲೇಜಿನಲ್ಲಿ "ಮಕ್ಕಳ ಬದುಕಿಗೆ ಶರಣರ ಚಿಂತನೆಗಳು" ಎಂಬ ವಿಷಯ ಕುರಿತು ಸೋಮವಾರ ಏರ್ಪಡಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಗುಟ್ಕಾ, ತಂಬಾಕು, ಮದ್ಯಪಾನ ಇವುಗಳಿಂದ ದೂರವಿರಬೇಕು. ಇವು ಆರೋಗ್ಯ ಮತ್ತು ಜೀವನ ಹಾಳು ಮಾಡುತ್ತವೆ. ಬಸವಣ್ಣನವರ ವಚನಗಳನ್ನು ಅಧ್ಯಯನ ಮಾಡಿ, ಆದರ್ಶ ತತ್ವ ಸಿದ್ಧಾಂತಗಳನ್ನು ಜೀವನದಲ್ಲಿ ರೂಢಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ವಿಜಯ ಮಹಾಂತೇಶ್ವರ ಶಾಖಾಮಠದ ಕಾರ್ಯದರ್ಶಿ ಕಾಂತರಾಜ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಪೂಜ್ಯರು ರಾಜ್ಯದ ಹಲವಾರು ಜಿಲ್ಲೆಗಳಲ್ಲಿರುವ ಶಾಲಾ–ಕಾಲೇಜುಗಳಿಗೆ ಹೋಗಿ ಮಕ್ಕಳ ಬದುಕಿಗೆ ದಾರಿದೀಪವಾಗುವ ಉಪನ್ಯಾಸ ನೀಡುವ ಮೂಲಕ ಮಕ್ಕಳ ದುಶ್ಚಟಗಳನ್ನು ತಮ್ಮ ಜೋಳಿಗೆಗೆ ಹಾಕಿಕೊಳ್ಳುವ ಕಾಯಕ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಕಾಲೇಜಿನ ಪ್ರಾಚಾರ್ಯ ಕೆ.ಸುಂಕಪ್ಪ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಇಂದಿನ ಮಕ್ಕಳು ಮಹಾನ್ ದಾರ್ಶನಿಕರ ಜೀವನದ ಶೈಲಿಗಳನ್ನು ಅಳವಡಿಸಿಕೊಳ್ಳಬೇಕು. ಪಠ್ಯದ ಜೊತೆಗೆ ಆಧ್ಯಾತ್ಮಿಕ ಚಿಂತನೆಗಳ ಉಪನ್ಯಾಸಗಳು ವಿದ್ಯಾರ್ಥಿಗಳ ಬದುಕನ್ನು ಹಸನಾಗಿಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಂಗೀತಕಾರರಾದ ಮುಂಕೇಶ್ ಮತ್ತು ಯೋಗೇಶ್ ವಚನಸಂಗೀತ ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಕಾಲೇಜು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ರಮೇಶ್ ಬುಜ್ಜಿ, ಹಿರಿಯ ಉಪನ್ಯಾಸಕ ಟಿ.ತಿಮ್ಮಪ್ಪ, ರಾಜ್ಯಶಾಸ್ತ್ರ ಉಪನ್ಯಾಸಕ ನಾಗರೆಡ್ಡಿ ಕೆ.ವಿ., ಗಣಿತ ಉಪನ್ಯಾಸಕ ಕೆ.ವಿ.ಚಂದ್ರಹಾಸ, ಉಪನ್ಯಾಸಕ ಹೆಚ್.ಕೆ.ಮಲ್ಲಿಕಾರ್ಜುನ್ ಶೆಟ್ಟಿ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು, ದೋಧಕ–ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ಇನ್ನಿತರರು ಉಪಸ್ಥಿತರಿದ್ದರು.


**ಚಿಟಗುಪ್ಪ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತ, ಚಿಟಗುಪ್ಪಾ**
**ತಾ|| ಚಿಟಗುಪ್ಪಾ ಜಿ|| ಬೀದರ್**
**30 ನೇ ವಾರ್ಷಿಕ ಮಹಾಸಭೆಯ ನೋಟಿಸು**

ಮಹನಿಯರೇ, **ದಿನಾಂಕ:-25-08-2025**

ಈ ಸಹಕಾರಿಯ 2024-25 ನೇ ಸಾಲಿನ ವಾರ್ಷಿಕ ಮಹಾಸಭೆಯ ದಿನಾಂಕ **14-09-2025** ರವಿವಾರ ರಂದು ಸಮಯ ಬೆಳಿಗ್ಗೆ **10-30** ಗಂಟೆಗೆ ಶ್ರೀ ಗಣೇಶ ಮಂದಿರದ ಸಭಾಂಗಣದಲ್ಲಿ **ಶ್ರೀ ರೇವಣಪ್ಪ ಹೂಗಾರ್** ಇವರ ಅಧ್ಯಕ್ಷತೆಯಲ್ಲಿ ಕರೆಯಲಾಗಿದೆ.ಸಭೆಯಲ್ಲಿ ಈ ಕೆಳಕಂಡ ವಿಷಯಗಳನ್ನು ಚರ್ಚಿಸಲು ಏರ್ಪಡಿಸಲಾಗಿದೆ.ದಯಮಾಡಿ ಎಲ್ಲರು ಸರಿಯಾದ ಸಮಯಕ್ಕೆ ಬಂದು ಸಭೆಯನ್ನು ಯಶಸ್ವಿಗೊಳಿಸಬೇಕಾಗಿ ವಿನಂತಿ.

**ವಾರ್ಷಿಕ ಮಹಾಸಭೆಯಲ್ಲಿ ಚರ್ಚಿಸತಕ್ಕಂತ ವಿಷಯಗಳು:-**

1. ಹಿಂದಿನ ಮಹಾಸಭೆಯ ನಡವಳಿಕೆಗಳನ್ನು ದೃಡಿಕರಿಸುವುದು.
2. ಸಹಕಾರಿಯ ವಾರ್ಷಿಕ ವರದಿ ಮಂಡಿಸುವುದು.
3. ವರ್ಷ 2024-25 ನೇ ಸಾಲಿನ ಜಮ ಖರ್ಚು, ಲಾಭ - ಹಾನಿ ಮತ್ತು ಆಡಾವೆ ಪತ್ರಿಕೆಯನ್ನು ಓದುವುದು ಹಾಗು ಮಂಜುರಿ ಪಡೆಯುವುದು.
4. 2025-26 ನೇ ವರ್ಷಕ್ಕೆ ಅಂದಾಜು ಬಜೆಟ್ ಮಂಜೂರು ಪಡೆಯುವುದು.
5. ವರ್ಷ2024-25 ನೇ ಸಾಲಿನ ಲೆಕ್ಕ ಪರಿಶೋಧನೆ ವರದಿಯನ್ನು ಮಂಡಿಸುವುದು.
6. ಇತರೆ ವಿಷಯಗಳು ಅಧ್ಯಕ್ಷರ ಅಪ್ಪಣೆ ಮೇರೆಗೆ.

ಸೂಚನೆ:- 1) ಸದಸ್ಯರು ಯಾವುದಾದರೂ ವಿಷಯಕ್ಕೆ ಸಂಬಂಧಿಸಿದಂತೆ ಪ್ರಶ್ನೆ ಕೆಳುವದಿದ್ದಲ್ಲಿ ಮುಖ್ಯ ಕಾರ್ಯ ನಿರ್ವಾಹಕರಿಗೆ ಸಭೆಯ 5 ದಿವಸ ಮೊದಲೇ ಲಿಖಿತವಾಗಿ ನೀಡತಕ್ಕದ್ದು.
ಕಾರ್ಯಕಾರಿ ಸಮಿತಿಯ ಆದೇಶದ ಮೇರೆಗೆ.

ಸಹಿ
ಮುಖ್ಯ ಕಾರ್ಯನಿರ್ವಾಹಕರು
ಚಿ.ಪ.ಸೌ.ಸ.ನಿ.ಚಿಟಗುಪ್ಪಾ



ಕರ್ನಾಟಕ ಸರ್ಕಾರ
(ಮೀನುಗಾರಿಕೆ ಇಲಾಖೆ)
ಮೀನುಗಾರಿಕೆ ಸಹಾಯಕ ನಿರ್ದೇಶಕರು ರವರ ಕಛೇರಿ ಬಸವಕಲ್ಯಾಣ

ಇ-ಟೆಂಡರ್ ಪ್ರಕಟಣೆ ಸಂಖ್ಯೆ: BK/ALL/01/2025-26 ದಿನಾಂಕ: 22-08-2025

**ಇ-ಟೆಂಡರ್ ಪ್ರಕಟಣೆ**

ಬೀದರ ಜಿಲ್ಲೆಯ ಬಸವಕಲ್ಯಾಣ, ಹುಲಸೂರು ಹಾಗೂ ಚಿಟ್ಟಗುಪ್ಪಾ ತಾಲ್ಲೂಕಿನ ಕೆಳಕಂಡ ಸರ್ಕಾರಿ ಜಲಸಂಪನ್ಮೂಲಗಳ (ಕೆರೆಗಳ, ಇತ್ಯಾದಿ) ಮೀನ ಪಾಶುವಾರು ಹಕ್ಕನ್ನು 2025-26 ನೇ ಮೀನುಗಾರಿಕೆ ಫಸಲಿ ವರ್ಷದಿಂದ 2029-30ನೇ ಮೀನುಗಾರಿಕೆ ಫಸಲಿ ವರ್ಷದವರೆಗೆ (ಅಂದರೆ ದಿನಾಂ 01/07/2025 ರಿಂದ 30/06/2030 ರವರೆಗೆ) ಒಟ್ಟು 5 (ಐದು) ವರ್ಷಗಳ ಅವಧಿಗೆ ಇ-ಟೆಂಡರು ಮೂಲಕ ಈ ಕೆಳಗೆ ನಮೂದಿಸಿರು ವೇಳಾಪಟ್ಟಿಯನ್ವಯ ಸರ್ಕಾರದ ಮೀನುಗಾರಿಕೆ ಇಲಾಖೆಯ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟಂತೆ ವಿಲೇವಾರಿ ಮಾಡಲು ಕರ್ನಾಟಕ ಸರ್ಕಾರ ಇ ಸಂಗ್ರಹಣಾ ಪೋರ್ಟಲ್ (https://kppp.karnataka.gov.in) ಮೂಲಕ ಟೆಂಡರ್ ಆಹ್ವಾನಿಸಲಾಗಿದೆ..

ಮೀನು ಪಾಶುವಾರು ಹಕ್ಕನ್ನು ವಿಲೇವಾರಿ ಮಾಡಲು ಪ್ರಸ್ತಾಪಿಸಿರುವ ಜಲಸಂಪನ್ಮೂಲಗಳ ವಿವರಗಳು

| ಕ್ರ. ಸಂ | ಇ-ಟೆಂಡರ್ ನಂಬರ್ | ಕೆರೆ/ ಜಲಸಂಪನ್ಮೂಲದ ಹೆಸರು | ಗ್ರಾಮದ ಹೆಸರು | ಜಲ ವಿಸ್ತೀರ್ಣ / ಅಚ್ಚುಕಟ್ಟು ಪ್ರದೇಶ ಹೆಕ್ಟೇರ್ ಗಳಲ್ಲಿ | ಭದ್ರತಾ ಠೇವಣಿ (ರೂಗಳಲ್ಲಿ) | ಸರ್ಕಾರಿ ಸವಾಲ್ ಮೊತ್ತ (ರೂಗಳಲ್ಲಿ) | ನಿಗದಿ ಪಡಿಸಿದ ಮೀಸಲಾತಿ |
|---|---|---|---|---|---|---|---|
| 1 | DOF/2025-26/SE3691 | ಮೀರಖಲ್ ಕೆರೆ | ಮೀರಖಲ್ | 05.99 / 79 | 135/- | 2,553/- | ಸಾಮಾನ್ಯ |
| 2 | DOF/2025-26/SE3692 | ಬೇಟ್ಟಬಾಲಕುಂದಾ ಕೆರೆ | ಬೇಟ್ಟಬಾಲಕುದಾ | 141.58 / 1060 | 3185/- | 26168/- | ಸಾಮಾನ್ಯ |
| 3 | DOF/2025-26/SE3693 | ಪರ್ತಾಪೂರ ಕೆರೆ | ಪರ್ತಾಪೂರ | 33.20 /77 | 747/- | 6579/- | ಪರಿಶಿಷ್ಟ ಜಾತಿ |
| 4 | DOF/2025-26/SE3694 | ತಿಪೂರಾಂತ ಕೆರೆ | ತಿಪೂರಾಂತ | 90.00 / 144 | 2025/- | 16634/- | ಸಾಮಾನ್ಯ |
| 5 | DOF/2025-26/SE3695 | ಮುಡಬಿ ಕೆರೆ | ಮುಡಬಿ | 19.00 / 150 | 428/- | 2500/- | ಸಾಮಾನ್ಯ |
| 6 | DOF/2025-26/SE3696 | ಫಾತಿಮ್ಮಾಪೂರ ಕೆರೆ | ಫಾತಿಮ್ಮಾಪೂರ | 18.49 / 167 | 416/- | 2774/- | ಪರಿಶಿಷ್ಟ ಪಂಗಡ |
| 7 | DOF/2025-26/SE3697 | ಚಾಂಗಲೇರಾ ಕೆರೆ | ಚಾಂಗಲೇರಾ | 35.84/ 396 | 806/- | 29664/- | ಸಾಮಾನ್ಯ |
| 8 | DOF/2025-26/SE3698 | ಬೇಳಕೇರಾ ಕೆರೆ | ಬೇಳಕೇರಾ | 37.00/ 278 | 832/- | 3445/- | ಪರಿಶಿಷ್ಟ ಪಂಗಡ |

ಇ-ಟೆಂಡರ್ ವೇಳಾಪಟ್ಟಿ: ಇ-ಟೆಂಡರ್ ದಸ್ತಾವೇಜು ಪಡೆಯುವ ದಿನಾಂಕ: 22-08-2025, ಇ-ಟೆಂಡರ್ ಬಿಡ್ ಸಲ್ಲಿಕೆ ಅಂತಿಮ ದಿನಾಂಕ & ಸಮಯ: 06-09-2025 ಸಂಜೆ: 05:30 ಗಂಟೆಗೆ, ತಾಂತ್ರಿಕ ಬಿಡ್ ತೆರಯುವ ದಿನಾಂಕ & ಸಮಯ: 08-09-2025 ಬೆಳಗ್ಗೆ 11:00 ಗಂಟೆಗೆ, ಆರ್ಥಿಕ ಬಿಡ್ ತೆರಯುವ ದಿನಾಂಕ & ಸಮಯ: 10-09-2025 ಬೆಳಗ್ಗೆ 11:00 ಗಂಟೆಗೆ, ಇ-ಟೆಂಡರ್ ಪೂರ್ವ ಸಭೆಯ ದಿನಾಂಕ & ಸಮಯ : 28-08-2025 ಬೆಳ್ಳಗೆ: 11:00 ಗಂಟೆಗೆ ಸ್ಥಳ: ಮೀನುಗಾರಿಕೆ ಸಹಾಯಕ ನಿರ್ದೇಶಕರು ಕಛೇರಿ ಬಸವಕಲ್ಯಾಣ.

ಹೆಚ್ಚಿನ ಮಾಹಿತಿಗಾಗಿ (https:// kppp.karnataka.gov.in) ಇ-ಸಂಗ್ರಹಣಾ ಪೋರ್ಟಲ್ ಭೇಟಿ ಮಾಡುವುದು.

-ಸಹಿ-
ಮೀನುಗಾರಿಕೆ ಸಹಾಯಕ ನಿರ್ದೇಶಕರು
ಬಸವಕಲ್ಯಾಣ ತಾಲ್ಲೂಕು, ಬೀದರ ಜಿಲ್ಲೆ

ವಿದ್ಯಾರ್ಥಿಗಳ ಆತ್ಮಹತ್ಯೆ ತಡೆಗೆ ಕ್ರಮ । ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ರಚನೆ

## ಶಾಲಾ, ಕಾಲೇಜುಗಳಲ್ಲಿ ಮೊಬೈಲ್ ಬಳಕೆ ನಿಷೇಧ : ಡಿಸಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಆಗಸ್ಟ 25 : ವಿದ್ಯಾರ್ಥಿಗಳ ಆತ್ಮಹತ್ಯೆ ತಡೆಯುವ ನಿಟ್ಟಿನಲ್ಲಿ ಜಿಲ್ಲೆಯಾದ್ಯಂತ ಶಾಲಾ, ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಮೊಬೈಲ್ ಬಳಸುವದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸೋಮವಾರ ವಿದ್ಯಾರ್ಥಿಗಳ ಆತ್ಮಹತ್ಯೆ ತಡೆಯುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದಲ್ಲಿ ರಚಿಸಲಾದ ಮಕ್ಕಳ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳು ಮಾನಸಿಕ ಒತ್ತಡದಿಂದ ಹೊರಬರುವಂತೆ ಮಾಡುವ ನಿಟ್ಟಿನಲ್ಲಿ ಶಾಲಾ, ಕಾಲೇಜು ಅವಧಿಯಲ್ಲಿ ಕಡ್ಡಾಯವಾಗಿ ಮೊಬೈಲ್ ಬಳಸುವದನ್ನು ನಿಷೇಧಿಸಿ ಆದೇಶಿಸಲಾಗಿದೆ. ಆದೇಶ ಜಿಲ್ಲೆಯ ಎಲ್ಲ ಸರಕಾರಿ ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳು ಹಾಗೂ ತರಬೇತಿ ಕೇಂದ್ರಗಳಲ್ಲಿ ಪಾಲನೆಯಾಗುವಂತೆ ಕ್ರಮಕೈಗೊಳ್ಳಲು ಶಾಲಾ ಶಿಕ್ಷಣ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರುಗಳಿಗೆ ಸೂಚನೆ ನೀಡಿದರು. ಸರ್ವೋಚ್ಚನ್ಯಾಯಾಲಯವು ವಿದ್ಯಾರ್ಥಿಗಳ ಮಾನಸಿಕ ಮತ್ತು ಯೋಗಕ್ಷೇಮ ಖಾತ್ರಿಪಡಿಸುವ ನೀತಿ, ಮಾನಸಿಕ ಆರೋಗ್ಯ ಬೆಂಬಲ, ಸುರಕ್ಷಿತ ವಾತಾವರಣ ಮತ್ತು ತಾರತಮ್ಯ ರಹಿತ ಶಿಕ್ಷಣ ನೀಡುವ ಕುರಿತು ಏಕರೂಪದ ಮಾನಸಿಕ ಆರೋಗ್ಯ ನೀತಿಯನ್ನು ಜಾರಿಗೊಳಿಸುವುದು ಸೇರಿದಂತೆ 15 ಮಾರ್ಗಸೂಚಿಗಳನ್ನು ಹೊರಡಿಸಿದೆ. ಈ ಜಿಲ್ಲೆಯಲ್ಲಿ ಜಿಲ್ಲಾ ಮಟ್ಟದಲ್ಲಿ ಮೇಲ್ವಿಚಾರಣಾ ಸಮಿತಿಯನ್ನು ರಚಿಸಲಾಗಿದೆ. ನೂರು ಅಥವಾ ನೂರಕ್ಕಿಂತ ಹೆಚ್ಚು ವಿದ್ಯಾರ್ಥಿಗಳ ದಾಖಲಾತಿ ಹೊಂದಿರುವ ಎಲ್ಲ ಶಿಕ್ಷಣ ಸಂಸ್ಥೆಗಳು ಕನಿಷ್ಟ ಓರ್ವ ತರಬೇತಿ ಪಡೆದ ಸಲಹೆಗಾರ, ಮನಶಾಸ್ತ್ರಜ್ಞ ಅಥವಾ ಸಾಮಾಜಿಕ ಕಾರ್ಯಕರ್ತರನ್ನು ಕಡ್ಡಾಯವಾಗಿ ನೇಮಿಸಿಕೊಳ್ಳತಕ್ಕದ್ದು ಎಂದರು.

> **ಮಾನಸಿಕ ಒತ್ತಡದಿಂದ ಹೊರಬರಲು 14416, 8440632ಗೆ ಕರೆ ಮಾಡಿ**
>
> ಪರೀಕ್ಷೆಯ ಒತ್ತಡ, ಕೌಟುಂಬಿಕ ಸಮಸ್ಯೆಗಳು, ನೆನಪಿನ ಶಕ್ತಿ ಕೊರತೆ, ಒತ್ತಡ, ಖಿನ್ನತೆ ಮುಂತಾದ ಸಮಸ್ಯೆ ಇರುವವರು ರಾಷ್ಟ್ರೀಯ ಟೆಲಿ ಮಾನಸಿಕ ಆರೋಗ್ಯ ಕಾರ್ಯಕ್ರಮದ ಟೆಲಿ ಮಾನಸ್ ಕರ್ನಾಟಕ ಉಚಿತ ಸಹಾಯವಾಣಿ ಸಂಖ್ಯೆ 14416 ಹಾಗೂ ಮನೋ ದರ್ಪನ್ ಸಹಾಯವಾಣಿ ಸಂಖ್ಯೆ 8440632ಗೆ ಕರೆ ಮಾಡಿ ಸಲಹೆಗಳನ್ನು ಪಡೆದುಕೊಳ್ಳಬಹುದಾಗಿದೆ.
>
> –ಸಂಗಪ್ಪ, ಜಿಲ್ಲಾಧಿಕಾರಿ

ಪರೀಕ್ಷಾ ಅವಧಿ ಮತ್ತು ಶೈಕ್ಷಣಿಕ ಪರಿವರ್ತನೆಗಳ ಸಮಯದಲ್ಲಿ ಸಮರ್ಪಿತ ಮಾರ್ಗದರ್ಶಕರು, ಸಲಹೆಗಾರರು ನಿಯೋಜಿಸಿ ವಿದ್ಯಾರ್ಥಿಗಳಿಗೆ ಸ್ಥಿರ, ಗೌಪ್ಯ ಹಾಗೂ ಅನೌಪಚಾರಿಕ ಬೆಂಬಲವನ್ನು ಒದಗಿಸಬೇಕು. ಶೈಕ್ಷಣಿಕ ಕಾರ್ಯಕ್ಷಮತೆ, ಸಾರ್ವಜನಿಕ ಅವಮಾನ, ಅಸಮಾನ ಶೈಕ್ಷಣಿಕ ಗುರಿಗಳ ಆಧಾರದ ಮೇಲೆ ವಿದ್ಯಾರ್ಥಿಗಳನ್ನು ಪ್ರತ್ಯೇಕಗೊಳಿಸುವುದನ್ನು ತಡೆಯಬೇಕು. ಅಲ್ಲದೇ ಪ್ರತಿ ಶಾಲಾ, ಕಾಲೇಜಿನಲ್ಲಿ ಸಲಹಾ ಕೇಂದ್ರಗಳನ್ನು ಸ್ಥಾಪಿಸಲು ಸೂಚಿಸಿದ ಅವರು ಶಿಕ್ಷಕರು ಮಗುವಿನ ಜೊತೆ ಯಾವರೀತಿ ನಡೆದುಕೊಳ್ಳಬೇಕು. ಅವರ ಮಾನಸಿಕವಾಗಿ ಹಿಂಸೆ ಬರದ ರೀತಿಯಲ್ಲಿ ನಡೆದುಕೊಳ್ಳಬೇಕು ಎಂದರು. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಮಾನಸಿಕ ಆರೋಗ್ಯ ವೃತ್ತಿಪರರಿಂದ ಮಾನಸಿಕ ಪ್ರಥಮ ಚಿಕಿತ್ಸೆ ಎಚ್ಚರಿಕೆ ಗುರುತುಗಳ ಗುರುತಿಸುವಿಕೆ, ಸ್ವ–ಯಂ ಹಾನಿ ಪ್ರತಿಕ್ರಿಯೆ ಹಾಗೂ ಸಂಬಂಧಿತ ಕಾರ್ಯವಿಧಾನಗಳ ಕುರಿತು ಕಡ್ಡಾಯವಾಗಿ ತರಬೇತಿ ಕಾರ್ಯಕ್ರಮ ಆಯೋಜಿಸಲು ಶಾಲಾ ಶಿಕ್ಷಣ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸೂಚನೆ ನೀಡಿದರು. ಪಾಲಕರ ಸಭೆಯನ್ನು ಕಡ್ಡಾಯವಾಗಿ ನಡೆಸಿ ಮಕ್ಕಳ ಆತ್ಮಹತ್ಯೆ ನಡೆಯುತ್ತಿರುವ ಬಗ್ಗೆ ಅರಿವು ಮೂಡಿಸುವದರ ಜೊತೆಗೆ ಶಾಲಾ, ತಾಲೂಕಾ ಹಾಗೂ ಜಿಲ್ಲಾ ವ್ಯಾಪ್ತಿಯಲ್ಲಿ ಜಾಗೃತಿ ಜಾಥಾ ಕಾರ್ಯಕ್ರಮ ಆಯೋಜಿಸಲು ತಿಳಿಸಿದರು.

ಸಭೆಯಲ್ಲಿ ತೋವಿವಿಯ ಕುಲಸಚಿವ ಮಹಾದೇವ ಮುರಗಿ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಅಜೀತ್ ಮನ್ನಿಕೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಪುಂಡಲೀಕ ಕಾಂಬಳೆ, ಜಿಲ್ಲಾ ಶಸ್ತ್ರ ಚಿಕಿತ್ಸಕ ಮಹೇಶ ಕೋಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಪ್ರಭಾಕರ ಕೆ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಈರಪ್ಪ ಆಶಾಪೂರ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಶಿವಾನಂದ ಪಟ್ಟಣಶೆಟ್ಟಿ ಸೇರಿದಂತೆ ವಿವಿಧ ಎನ್.ಜಿ.ಓಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಯೂರಿಯಾ ಗೊಬ್ಬರಕ್ಕಾಗಿ ಮುಂದುವರಿದ ರೈತರ ಗೋಳಾಟ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ತಾಲೂಕಿನ ಇಲಕಲ್ಲಗಡ ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದ ಹತ್ತಿರ ರಾತ್ರಿಯಿಂದಲೇ ಮಹಿಳೆಯರು ಪುರುಷರು ಯೂರಿಯಾ ಗೊಬ್ಬರಕ್ಕಾಗಿ ಕೃಷಿ ಪತ್ತಿನ ಸಹಕಾರಿ ಸಂಘದ ಮುಂದೆ ಸರದಿ ಸಾಲಿನಲ್ಲಿ ನಿಂತಿದ್ದು ಕಂಡುಬಂದಿತು ಯೂರಿಯಾ ಗೊಬ್ಬರ ಪಡೆದುಕೊಳ್ಳುವುದಕ್ಕಾಗಿ ಕಾದು ಕಾದು ಸುಸ್ತಾದರು ಆದರೆ ಇವರಿಗೆ ಮಧ್ಯಾಹ್ನದವರಿಗೆ ತಡವಾಯಿತು ಪರಿಸ್ಥಿತಿಯನ್ನು ನಿಭಾಯಿಸಲು ಪೊಲೀಸ್ ಸಿಬ್ಬಂದಿಯವರು ಅರಸಹಸ ಪಟ್ಟರು ಸ್ಥಳೀಯ ರೈತ ಮುಖಂಡರು ಮಾತನಾಡಿ ಪ್ರತಿಸಲ ಗೊಬ್ಬರ ಬರುವುದು 200 ಚೀಲಗಳು ಮಾತ್ರ ಅವಶ್ಯಕತೆ ಇರುವುದು ಸಾವಿರದಿಂದ ಎರಡು ಸಾವಿರ ರೈತರಿಗೆ ಇವರು ಕೊಡುವ ಗೊಬ್ಬರ ಕೇವಲ ನೂರು ರೈತರಿಗೂ ಸಾಲುವುದಿಲ್ಲ ಬಿತ್ತಿದ ಬೆಳೆ ಗೊಬ್ಬರ ಹಾಕಿಲ್ಲವೆಂದರೆ ಕೈಗೆ ಪಸಲು ಇಟ್ಕೋವದಿಲ್ಲ ಎಂದು ತಮ್ಮ ಅಕ್ರೋಶವನ್ನು ವ್ಯಕ್ತಪಡಿಸಿದರು ಸಹಕಾರಿ ಸಂಘದ ಅಧ್ಯಕ್ಷರಾದ ಗಿರೀಶ್ ಪಟ್ಟಣಶೆಟ್ಟಿ ಮಾತನಾಡಿ ಈ ಮೊದಲು ಗೊಬ್ಬರವನ್ನು ವಿತರಿಸಲಾಗಿದೆ ಇಂದು ಶನಿವಾರ 400 ಚೀಲ ಯೂರಿಯ ಗೊಬ್ಬರ ಬಂದಿದೆ ಒಬ್ಬ ರೈತನಿಗೆ ತಲಾ ಎರಡು ಚೀಲ ವಿತರಿಸಲಾಗುವುದು ಇನ್ನು ಉಳಿದ ರೈತರಿಗೆ ಮುಂದಿನ ವಾರದಲ್ಲಿ ಮತ್ತೆ ಯೂರಿಯ ಗೊಬ್ಬರು ಬರಲಿದ್ದು ಎಲ್ಲಾ ರೈತರಿಗೆ ವಿತರಿಸಲಾಗುವುದು ಎಂದು ಹೇಳಿದರು ಸಹಾಯಕ ಕೃಷಿ ಅಧಿಕಾರಿ ಯೋಗೀಶ್ ಮಾತನಾಡಿ ಸಮರ್ಪಕವಾಗಿ ಯುರಿಯ ಗೊಬ್ಬರ ಎಲ್ಲಾ ರೈತನಿಗೆ ಮುಟ್ಟಿಸುವ ವ್ಯವಸ್ಥೆ ಮಾಡಲಾಗುವುದು ಮೇಲಾಧಿಕಾರಿಗಳ ಗಮನಕ್ಕೆ ತಂದು ಇನ್ನೂ ಉಳಿದ ರೈತರಿಗೆ ಮುಂದಿನ ವಾರದಲ್ಲಿ ವಿತರಿಸಲಾಗುವುದು ಎಂದು ಹೇಳಿದರು.

## ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರ ಕೊಪ್ಪಳ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಸಾರಿಗೆ ಮತ್ತು ಮುಜರಾಯಿ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಆಗಸ್ಟ್ 26 ರಂದು ಕೊಪ್ಪಳ ಜಿಲ್ಲಾ ಪ್ರವಾಸ ಕಾರ್ಯವನ್ನು ಹಮ್ಮಿಕೊಂಡಿರುತ್ತಾರೆ.

ಸಚಿವರು ಆ. 26 ರಂದು ಮಧ್ಯಾಹ್ನ 12.30 ಗಂಟೆಗೆ ಬೆಂಗಳೂರಿನಿಂದ ನಿರ್ಗಮಿಸಿ ರಸ್ತೆಯ ಮೂಲಕ ಹೊರಟು ಸಂಜೆ 5.30 ಗಂಟೆಗೆ ಶ್ರೀ ಕ್ಷೇತ್ರ ಹುಲಗಿ ಆಗಮಿಸಿ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಹಮ್ಮಿಕೊಂಡಿರುವ ಶ್ರೀ ಹುಲಿಗೆಮ್ಮ ಕ್ಷೇತ್ರದಲ್ಲಿ ತುಂಗಭದ್ರಾ ಆರತಿ ಮಹೋತ್ಸವ ಮತ್ತು ಭಾಗಿನ ಸಮರ್ಪಣೆ ಕಾರ್ಯಕ್ರಮದಲ್ಲಿ (ತುಂಗಭದ್ರಾ ನದಿತೀರ, ಶ್ರೀ ಕ್ಷೇತ್ರ ಹುಲಗಿ) ಭಾಗವಹಿಸುವರು. ಕಾರ್ಯಕ್ರಮದ ನಂತರ ಸಂಜೆ 7.30 ಗಂಟೆಗೆ ಹುಲಗಿಯಿಂದ ರಸ್ತೆಯ ಮೂಲಕ ಕೇಂದ್ರಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ವಿಶೇಷ ಕರ್ತವ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಶಾಲೆಗಳ ಸರ್ವತೋಮುಖ ಅಭಿವೃದ್ಧಿ ನಮ್ಮ ಧ್ಯೇಯ– ಪಿ.ನಾರಾಯಣ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಬೇವಿನಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮದ ಶಿಕ್ಷಣ, ಉದ್ಯೋಗ ಹಾಗೂ ವೈದ್ಯಕೀಯ ಸೌಲಭ್ಯ ಸೇರಿದಂತೆ ಹಲವು ಸೌಲಭ್ಯಗಳನ್ನು ಈ ಭಾಗದ ಎಲ್ಲ ಗ್ರಾಮಗಳ ಶಾಲಾ ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ನಮ್ಮ ಕಿರ್ಲೋಸ್ಕರ್ ಗ್ರಾಮೀಣ ಅಭಿವೃದ್ಧಿ ಟ್ರಸ್ಟ್ ಸದಾ ಸೇವೆ ನೀಡುತ್ತಾ ಬಂದಿದೆ ಮುಂದೆ ಕೂಡ ನಿಮ್ಮ ಜೊತೆಗೆ ನಮ್ಮ ಕಾರ್ಖಾನೆ ಸದಾ ಇರುತ್ತದೆ ಎಂದು ಕೆಲಸ ಕಿರ್ಲೋಸ್ಕರ ಕಾರ್ಖಾನೆಯ ಮಾನವ ಸಂಪನ್ಮೂಲ ಹಾಗೂ ಸಾರ್ವಜನಿಕ ಆಡಳಿತ ವಿಭಾಗದ ಉಪಾಧ್ಯಕ್ಷರಾದ ಪಿ ನಾರಾಯಣ ಅವರು ಕಂಪನಿ ಸೇವೆಗಳನ್ನು ಹೇಳಿದರು.

ಅವರು ಬೇವಿನಹಳ್ಳಿ ಗ್ರಾಮದಲ್ಲಿ ಜಿಲ್ಲಾ ಪಂಚಾಯತ್ ಕೊಪ್ಪಳ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಕೊಪ್ಪಳ, ಕ್ಷೇತ್ರಶಿಕ್ಷಣಧಿಕಾರಿಗಳು ಹಾಗೂ ಸಮನ್ವಯಾಧಿಕಾರಿ ಕಾರ್ಯಾಲಯ ಕೊಪ್ಪಳ, ಕಿರ್ಲೋಸ್ಕರ ಗ್ರಾಮೀಣ ಅಭಿವೃದ್ಧಿ ಟ್ರಸ್ಟ್ ಬೇವಿನಹಳ್ಳಿ, ಗ್ರಾಮ ಪಂಚಾಯಿತಿ ಕಾರ್ಯಾಲಯ ಬೇವಿನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಬೇವಿನಹಳ್ಳಿ, ಜಂಟಿ ಸಹಯೋಗದಲ್ಲಿ ನಡೆದ ಹಿಟ್ನಾಳ್ ಕ್ಲಸ್ಟರ್ ಮಟ್ಟದ ಕ್ರೀಡಾಕೂಟ ಉದ್ಘಾಟನೆ ಮಾಡಿ ಮಾತನಾಡಿದರು..

ಕಿರ್ಲೋಸ್ಕರ ಕಂಪನಿ ಪ್ರತಿ ವರ್ಷ ಈ ಭಾಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಶಾಲಾ ಬ್ಯಾಗ್, ನೋಟ್ ಪುಸ್ತಕಗಳನ್ನು, ಆರೋಗ್ಯ ಶಿಬಿರಗಳನ್ನು, ಪ್ರವಾಸಕ್ಕೆ ದನ ಸಹಾಯ ಸೇರಿದಂತೆ ಹಲವು ಸೌಲಭ್ಯಗಳನ್ನು ಉಚಿತವಾಗಿ ನೀಡುತತ್ತಿದೆ. ಈ ಮೊದಲು ಪ್ರಾರಂಭದಲ್ಲಿ ಬೇವಿನಹಳ್ಳಿ ಪ್ರಾಥಮಿಕ ಶಾಲೆಗೆ 2 ಎಕರೆ ಭೂಮಿಯನ್ನು ದಾನವಾಗಿ ನೀಡಿದ್ದು ಈ ವರ್ಷ ಇದೆ ಗ್ರಾಮದ ಸರಕಾರಿ ಪ್ರೌಢ ಶಾಲೆಗೆ 1.5 ಎಕರೆಯನ್ನು ಭೂಮಿಯನ್ನು ಶಾಲೆಗೆ ದಾನವಾಗಿ ನೀಡಿದ್ದೇವೆ ಎಂದರು.

ಮುಖ್ಯ ಅತಿಥಿ ಕೆ. ಸೋಮಶೇಖರ್ ಮಾತನಾಡಿ ವಿದ್ಯಾರ್ಥಿಗಳ ಜೀವನ ಬಂಗಾರದಂತ ಜೀವನ ಈ ಹೀಗಾಗಿ ಚನ್ನಾಗಿ ಓದಿ ತಂದೆ ತಾಯಿಗಳಿಗೆ ಗ್ರಾಮಕ್ಕೆ ಕೀರ್ತಿ ತರಬೇಕು ಎಂದು ಮಕ್ಕಳಿಗೆ ಸಲಹೆ ನೀಡಿದರು .

ಸಮೂಹ ಸಂಪನ್ಮೂಲ ವ್ಯಕ್ತಿ ಹಸನ್ ಸಾಬ್ ಪ್ರಾಸ್ತವಿಕ ಮಾತನಾಡಿದರು. ಕಾರ್ಯಕ್ರಮಕ್ಕೂ ಗ್ರಾಮದ ರಾಜ್ಯಮಟ್ಟದ ಮಾಜಿ ಅಥ್ಲೆಟ್ ಗಳಿಂದ ಕ್ರೀಡಾಕೂಟ ಕ್ರೀಡಾ ಜ್ಯೋತಿಯನ್ನು ತರಲಾಯಿತು. ಶಿಕ್ಷಕ ಹನುಮಂತಗೌಡ ಕ್ರೀಡಾ ಪ್ರತಿಜ್ಞಾ ವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಶಿಕ್ಷಣ ಇಲಾಖೆ ಇ ಸಿ ಓ ಮಹಾಂತೇಶ್, ಟಿ ಪಿ ಓ ಉದಯಕುಮಾರ್, ಕಾರ್ಖಾನೆ ಸಿ ಎಸ್ ರ್ ಮತ್ತು ಆಡಳಿತ ವಿಭಾಗದ ವ್ಯವಸ್ಥಾಪಕ ಉದ್ದವ್ ಕುಲಕರ್ಣಿ, ಇನ್ನೊರ್ವ ಅಧಿಕಾರಿ ಮನೋಜ್ ಕುಮಾರ, ತಾ ಪಂ ಮಾಜಿ ಸದಸ್ಯ ಮೂರ್ತಿಪ್ಪ, ಗ್ರಾಮ ಪಂಚಾಯತ್ ಅಧ್ಯಕ್ಷೆ ತಿಪ್ಪವ್ವ ನಾಯಕ, ಉಪಾಧ್ಯಕ್ಷ ನಾಗರಾಜ್ ಬಹದ್ದುರಬಂಡಿ, ಸದಸ್ಯರಾದ ಶಿವಮೂರ್ತಿ ಮೂಲಿಮನಿ, ವೆಂಕನಗೌಡ ಪಾಟೀಲ್, ಮುರುಳಿಧರ್ ಬಸಿರಾಳ, ಶಾಲಾ ಸಮಿತಿ ಅಧ್ಯಕ್ಷ ನಾಗರಾಜ್ ಮಡ್ಡಿ, ಸರಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕ ಹನುಮಂತಪ್ಪ ಕುರಿ, ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕ ರಾಜಮಹಮ್ಮದ್, ಶಾಲಾ ಸಮಿತಿಯ ಶ್ರೀಧರ್ ನದಿಚಾಗಿ, ಮಂಜುನಾಥ್ ಕಚೋಟಿ, ಬಸವರಾಜ್ ಮೂಲಿಮನಿ, ಅಂಜಿನಪ್ಪ ಸಾಹುಕಾರ್, ಮಾರುತಿ ಮಡ್ಡಿ, ಮಲ್ಲಿಕಾರ್ಜುನ ಬೆಳೂರು, ನಿಂಗಪ್ಪ ಹಿಟ್ನಾಳ್, ಮನೋಜ್ ಮಡ್ಡಿ, ಬೆಳ್ಳೆಪ್ಪ ಮಡ್ಡಿ, ಆನಂದ ಗಬ್ಬೂರು, ಸಂತು ಕುರಿ, ಗುನ್ನೆಪ್ಪ ಚೆನ್ನದಾಸರ, ಮಾರುತಿ ನಾಯಕ, ಸೇರಿದಂತೆ ಬೇವಿನಹಳ್ಳಿ, ಶಹಾಪುರ, ಹಿಟ್ನಾಳ್, ಕಂಪಸಾಗರ, ಹುಲಿಗಿ, ಗ್ರಾಮಗಳ ಒಂಬತ್ತು ಶಾಲೆಗಳು ಭಾಗವಹಿಸಿದ್ದವು.

## ಬೆನಕಟ್ಟಿಯಲ್ಲಿ ಶ್ರಾವಣದ ಮುಕ್ತಾಯ

### ಉಡಿ ತುಂಬುವುದು ಸಂಸ್ಕೃತಿಯ ಪ್ರತೀಕ–ನೀಲಗುಂದ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.25–ಮುತ್ತೈದೆಯರಿಗೆ ಉಡಿ ತುಂಬುವುದು ಭಾರತೀಯ ಸಂಸ್ಕೃತಿಯ ಪ್ರತೀಕವಾಗಿದ್ದು, ಮಹಿಳೆಯರಿಗೆ ಮಂಗಳಕರ ವಸ್ತುಗಳನ್ನು ನೀಡಿ ಗೌರವಿಸಿ, ಆಶೀರ್ವದಿಸುವ ಸಾಂಪ್ರದಾಯಿಕ ಆಚರಣೆಯಾಗಿದೆ ಎಂದು ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಮಹಾಯೋಗಿ ವೇಮನ ಅಧ್ಯಯನ ಪೀಠದ ಸಂಯೋಜಕ ಹೇಮರಡ್ಡಿ ನೀಲಗುಂದ ಹೇಳಿದರು.

ತಾಲೂಕಿನ ಬೆನಕಟ್ಟಿ ಗ್ರಾಮದಲ್ಲಿ ಸೋಮವಾರ ಶ್ರಾವಣ ಮಾಸದ ಮುಕ್ತಾಯ ಕಾರ್ಯಕ್ರಮದ ಅಂಗವಾಗಿ ಮುಧೋಳದ ಅಖಿಲ ಕರ್ನಾಟಕ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮ ಹಾಗೂ ಮಹಾಯೋಗಿ ವೇಮನರ ವ್ರತ ಪ್ರಚಾರ ಸಮಿತಿ, ಬೆನಕಟ್ಟಿಯ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ಸಮಿತಿ ಮತ್ತು ಸ್ಥಳೀಯ ಮಹಿಳಾ ಮಂಡಳಗಳ ಸಹಯೋಗದಲ್ಲಿ ಜರುಗಿದ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಕುಟುಂಬ ನಿರ್ವಹಣೆ, ಉತ್ತಮ ಸಮಾಜ ನಿರ್ಮಾಣದಲ್ಲಿ ಮಹಿಳೆಯ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಅವರನ್ನು ಗೌರವಿಸುವುದು ನಮ್ಮ ಸಂಪ್ರದಾಯ. ಈಹಿನ್ನೆಲೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳ ಸಂದರ್ಭಗಳಲ್ಲಿ ಮುತ್ತೈದೆಯರಿಗೆ ಅರಿಶಿನ ಕುಂಕುಮ, ಬಳೆ, ಹೂವು, ಅಕ್ಕಿ ಮುಂತಾದ ಮಂಗಳಕರ ವಸ್ತುಗಳನ್ನು ನೀಡಿ ಗೌರವಿಸಿ, ಆಶೀರ್ವದಿಸಲಾಗುತ್ತದೆ ಎಂದ ನೀಲಗುಂದ, ವ್ರತಾಚರಣೆ ನಿರ್ಧಿಷ್ಟ ಸಮಯದಲ್ಲಿ ಅನುಸಂಧಾನ ಮಾಡುವುದಾಗಿದೆ ಎಂದರು.

ಸಾನಿಧ್ಯ ವಹಿಸಿದ್ದ ಕಲ್ಮಡ–ಲಕ್ಷಾನಟ್ಟಿಯ ಪೂರ್ಣಾನಂದ ಶ್ರೀಗಳು ಮಾತನಾಡಿ, ಮನುಷ್ಯ ಜನ್ಮ ಶ್ರೇಷ್ಠವಾಗಿದ್ದು, ಮಹಿಳೆಯರು ಮಕ್ಕಳಿಗೆ ಸಂಸ್ಕಾರ, ಸಂಸ್ಕೃತಿಯನ್ನು ಕಲಿಸಬೇಕು. ಮಹಿಳೆಯರಿಗೆ ಉಡಿ ತುಂಬುವುದು ನಮ್ಮ ಸಂಸ್ಕೃತಿಯಾಗಿದ್ದು, ಹೇಮರಡ್ಡಿ ಮಲ್ಲಮ್ಮ, ಮಹಾಯೋಗಿ ವೇಮನರ ವ್ರತಾಚರಣೆ ಮಾಡುವುದು ಶ್ರೇಷ್ಠ ಕಾರ್ಯವಾಗಿದೆ. ಶ್ರದ್ಧೆ–ಭಕ್ತಿಯಿಂದ ದೇವರನ್ನು ಪೂಜಿಸಿ, ಮೃತ್ಯುಂಜಯ ಹಾಗೂ ಗಾಯತ್ರಿ ಮಂತ್ರಗಳನ್ನು ಓದಿ ಅರ್ಥೈಸಿಕೊಳ್ಳಬೇಕು ಎಂದು ಹೇಳಿದರು. ಅತಿಥಿ ಗಾಯತ್ರಿ ನೀಲಗುಂದ ಹಾಗೂ ಪ್ರೊ.ಅನಿತಾ ಪಾಟೀಲ ಮಾತನಾಡಿದರು. ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ಸಮಿತಿ ಅಧ್ಯಕ್ಷ ಪಂಡಿತ ಮಾಚಾ ಅಧ್ಯಕ್ಷತೆ ವಹಿಸಿದ್ದರು. ಅಖಿಲ ಕರ್ನಾಟಕ ವ್ರತ ಪ್ರಚಾರ ಸಮಿತಿ ಅಧ್ಯಕ್ಷ ಎಸ್.ಪಿ.ಜೈನಾಪೂರ, ಸಮಿತಿಯ ಕಾರ್ಯದರ್ಶಿ ನಿಂಗನಗೌಡ ಪಾಟೀಲ ಮುಖ್ಯ ಅತಿಥಿಗಳಾಗಿ ವೇದಿಕೆಯಲ್ಲಿದ್ದರು. ಮುತ್ತು ಅರ–ಕೇರಿ ವೇಮನ ವಚನ ಪಠಿಸಿದರು. ಡಿ.ಎಂ.ಬೆಣ್ಣೂರ ಸ್ವಾಗತಿಸಿದರು. ಸಂಶೋಧಕ ಸಂಗಮೇಶ ಕಲ್ಯಾಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಗಂಗಾ ಅಮಾತೆಪ್ಪನವರ ನಿರೂಪಿಸಿದರು. ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ ವಂದಿಸಿದರು.

> ಕಾರ್ಯಕ್ರಮದಲ್ಲಿ ಜಮಖಂಡಿ, ಮುಧೋಳ, ಮಾಚಕನೂರ, ಚಿಕ್ಕೂರ, ಪೆಟ್ಲೂರ, ತೋರಣಗಟ್ಟಿ, ಕಿಲ್ಲಾ ಹೊಸಕೋಟೆ, ಕನಸಗೇರಿ, ಬೂದನೂರ, ಬದ್ನೂರ, ಶಿರೂರ, ಬೇವೂರು, ಬೆನಕಟ್ಟಿ, ಕಗಲಗೊಂಬ, ಬುದ್ನಿ ಪಿಎಂ, ಗುಳೇದಗುಡ್ಡ ಸೇರಿ ವಿವಿಧೆಡೆಗಳಿಂದ ಆಗಮಿಸಿದ್ದ 350 ಕ್ಕೂ ಹೆಚ್ಚು ಮಹಿಳೆಯರಿಗೆ ಉಡಿ ತುಂಬಲಾಯಿತು. ವ್ರತಾಚರಣೆ ಪುಸ್ತಕ ದಾನಿಗಳನ್ನು ಸನ್ಮಾನಿಸಲಾಯಿತು.

## ಧರ್ಮಸ್ಥಳದ ವಿರುದ್ಧ ದೊಡ್ಡ ಷಡ್ಯಂತ್ರ– ಮಹೇಶರಡ್ಡಿ ಮುದ್ನಾಳ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:–ಶ್ರೀ ಕ್ಷೇತ್ರ ಧರ್ಮಸ್ಥಳ ಕುರಿತ ಸಂಪೂರ್ಣ ತನಿಖೆಯನ್ನು ಕೂಡಲೇ ಎಸ್ಐಎಗೆ ಕೊಡಬೇಕಿದೆ. ಇದರ ಮೂಲಕ ಅಗತ್ಯವಾದಲ್ಲಿ ಹಣಕಾಸು ವಿಷಯವಾಗಿ ಇ.ಡಿ. ತನಿಖೆ ನಡೆಸಲು ಅವಕಾಶ ಆಗಲಿದೆ ಎಂದು ಯುವ ಮುಖಂಡ ಮಹೇಶರಡ್ಡಿ ಮುದ್ನಾಳ ಆಗ್ರಹಿಸಿದರು.

ನಗರದ ಸುಭಾಷ್ ವೃತ್ತದಲ್ಲಿ ಬಿಜೆಪಿ ಯಾದಗಿರಿ ಮತಕ್ಷೇತ್ರದಿಂದ ನಡೆದೆ ಬೃಹತ್ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಅವರು ಧರ್ಮಸ್ಥಳದ ವಿರುದ್ಧ ದೊಡ್ಡ ಷಡ್ಯಂತ್ರ ನಡೆ–ಯುತ್ತಿದೆ ಎಂಬ ವಿಚಾರ ಚರ್ಚೆಗೆ ಒಳಪಟ್ಟಿದೆ ಹಾಗೂ ಬುರುಡೆ ವ್ಯಕ್ತಿಯ ಪ್ರಾಥಮಿಕ ತನಿಖೆ ನಡೆಸುತ್ತಿದ್ದರೆ ಇಂಥ ಅಪಪ್ರಚಾರ ನಡೆದು ಕೋಟ್ಯಂತರ ಭಕ್ತರ ಮನಸ್ಸಿಗೆ ಘಾಸಿ ಆಗುತ್ತಿರಲಿಲ್ಲ ಹಾಗೂ ಬುರುಡೆ ವ್ಯಕ್ತಿ ಮತ್ತು ಸುಜಾತ ಭಟ್ ವಿಷಯದಲ್ಲಿ ಮಾಧ್ಯಮಗಳು ಎಲ್ಲ ವಿಚಾರಗಳನ್ನು ಬೆಳಕಿಗೆ ತಂದಿವೆ ಬಿಜೆಪಿ ಸೇರಿ ಎಲ್ಲ ಪಕ್ಷದವರು ಕೇಸರಿ ಧ್ವಜ ಕಟ್ಟಿ ಮಂಜುನಾಥ ಸ್ವಾಮಿ ಜೊತೆ ಇದ್ದೇವೆ ಎಂದು ಯಾರ್ಲಿ ಮಾಡುತ್ತಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡ ರಾಚಣ್ಣಗೌಡ ಮುದ್ನಾಳ ಮಾತನಾಡಿದ ಅವರು ಧರ್ಮಸ್ಥಳದ ಘಟನೆಯಿಂದ ಸರಕಾರಕ್ಕೆ ಕಳಂಕ ಬಂದಿದೆ ಆ ಕಳಂಕದಿಂದ ಹೊರಗೆ ಬರಬೇಕಿದೆ ಈ ದುಷ್ಕೃತ್ಯದ ಹಿಂದೆ ಇರುವ ಸಂಘಟನೆಗಳು, ದುಷ್ಟ ಶಕ್ತಿಗಳ ಬಗ್ಗೆ ಸಮರ್ಪಕ ತನಿಖೆ ಆಗಬೇಕಿದೆ ಅಪಪ್ರಚಾರ ಮಾಡುವ ದುಷ್ಟಶಕ್ತಿಗಳು ಇದೇರೀತಿ ಇನ್ನೊಂದು ಹಿಂದೂ ದೇವಾಲಯದ ವಿರುದ್ಧ ಷಡ್ಯಂತ್ರ ಮಾಡಬಹುದು ಮು ಶ್ರೀ ಕ್ಷೇತ್ರ ಧರ್ಮಸ್ಥಳದ ವಿಷಯದಲ್ಲಿ ಮುಖ್ಯಮಂತ್ರಿಗಳು ಆತುರ ತೋರಿದ್ದೇಕೆ ಎಂಬುದು ಒಗಟಾಗಿಯೇ ಇದೆ ಧರ್ಮಸ್ಥಳ ಪವಿತ್ರ ಶ್ರೀ ಕ್ಷೇತ್ರದ ಕುರಿತು ದಾರಿಯಲ್ಲಿ ಹೋಗುವ ಬುರುಡೆ ಹಿಡಿದ ವ್ಯಕ್ತಿಯೊಬ್ಬ ಬಂದು ಬುರುಡೆ ಹೊಡೆದರೆ ಆ ವ್ಯಕ್ತಿಯ ಹಿನ್ನೆಲೆ ಏನು ಅವನ ಹಿಂದಿರುವ ಶಕ್ತಿಗಳು, ಯಾವ ಸಂಘಟನೆಗಳು ಕೆಲಸ ಮಾಡುತ್ತಿವೆ ಎಂದು ಮಾಹಿತಿ ಸಂಗ್ರಹಿಸಬೇಕಿತ್ತು ಅಥವಾ ಬೇಹುಗಾರಿಕಾ ದಳದಿಂದ ವರದಿ ಪಡೆದು ಮುಖ್ಯಮಂತ್ರಿಗಳು ಸ್ಪಷ್ಟ ನಿರ್ಧಾರ ತೆಗೆದುಕೊಳ್ಳಬೇಕಿತ್ತು ಎಂದು ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪರುಶುರಾಮ ಕುರಕುಂದಿ, ಜಿ.ಪಂ ಮಾಜಿ ಸದಸ್ಯ ಸಿದ್ದಣ್ಣಗೌಡ ಕಾಡಂನೋರ ಮತ್ತು ಉಮರಡ್ಡಿಗೌಡ ನಾಯ್ಕಲ್, ಜಿಲ್ಲಾ ವಕ್ತಾರ ಮತ್ತು ನಗರಸಭೆ ಸದಸ್ಯ ಹಣಮಂತ ಇಟಗಿ, ಯುಡ ಮಾಜಿ ಅಧ್ಯಕ್ಷ ಬಸವರಾಜ ಚಂಡ್ರಕಿ, ಓಬಿಸಿ ರಾಜ್ಯ ಕಾರ್ಯಕಾರಣಿ ಸದಸ್ಯ ಶರಣುಗೌಡ ಐಕೂರ, ಜಿಲ್ಲಾ ಉಪಾಧ್ಯಕ್ಷ ಬಸವರಾಜ ಸೋನ್ನದ, ಜಿಲ್ಲಾ ಕಾರ್ಯದರ್ಶಿ ಪರ್ವತರಡ್ಡಿ ಬೆಂಡಗೊಂಬಳ್ಳಿ, ಮಹಿಳಾ ಮೋರ್ಚಾ ರಾಜ್ಯ ಕಾರ್ಯಕಾರಣಿ ಸದಸ್ಯೆ ವೀಣಾ ಮೋದಿ, ನಗರ ಮಂಡಲ ಅಧ್ಯಕ್ಷ ಲಿಂಗಪ್ಪ ಹತ್ತಿಮನಿ, ಗ್ರಾಮೀಣ ಮಂಡಲ ಅಧ್ಯಕ್ಷ ರಾಜಶೇಖರ್ ಕಾಡಂನೊರ, ನಗರಸಭೆ ಮಾಜಿ ಅಧ್ಯಕ್ಷ ಸುರೇಶ್ ಅಂಬಿಗೇರ, ನಗರಸಭೆ ಮಾಜಿ ಉಪಾಧ್ಯಕ್ಷೆ ಪ್ರಭಾವತಿ ಮಾರುತಿ ಕಲಾಲ್, ನಗರಸಭೆ ಸದಸ್ಯ ಸ್ವಾಮಿದೇವ ದಾಸನಕೆರಿ ಮತ್ತು ವಿಜಯಲಕ್ಷ್ಮಿ ನಾಯಕ, ದೊಡ್ಡಪ್ಪ ದೇಸಾಯಿ, ಎಸ್.ಟಿ ಮೋರ್ಚಾ ಜಿಲ್ಲಾಧ್ಯಕ್ಷ ಚಂದಪ್ಪ ರಾಮಸಮುದ್ರ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಸುನಿತಾ ಚೌವ್ಹಾಣ್, ಸುರೇಶ್ ರಾಠೋಡ, ಶಕುಂತಲಾ ಜಿ, ಸ್ನೇಹ ರಸಳಕರ್, ರಮಾದೇವಿ ಕಾವಲಿ, ಭೀಮಬಾಯಿ ಶೆಂಡಿಗಿ, ಗೋವಿಂದಪ್ಪ ಖಾನಾಪುರ, ಮರಲಿಂಗ ಕೋಂಚಾಟಿ, ನಗರ ಮಂಡಲ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಕಟ್ಟಿಮನಿ, ರಾಮಲಿಂಗಪ್ಪ ಯರಗೋಳ, ರಾಜು ಸ್ವಾಮಿ ಅನಂಪಲ್ಲಿ, ರವಿ ರಾಠೋಡ, ಶಿವಣ್ಣ ಬಡಿಗೇರ, ಸಂಗು ಸಾವು ಅನವಾರ, ಸಾಬು ಚಂಡ್ರಕಿ, ರಾಜಶೇಖರಯ್ಯ ಸ್ವಾಮಿ ಮುಷ್ಠೂರ, ಯಂಕಣ್ಣ ದೋರಿ ವಡಿಗೇರ, ಮಲ್ಲುಸ್ವಾಮಿ ಗುರುಸುಣಗಿ, ಶೇಖಪ್ಪ ದೋರಿ ಹೆಡಗಿಮದ್ರಾ, ತಿಮ್ಮಾರೆಡ್ಡಿ ಟಿ ವಡಿಗೇರಿ, ಶರಣಭೂಪಾಲರಡ್ಡಿ ಗುರಸುಣಗಿ, ಮಲ್ಲುಗೌಡ ಗುರುಸುಣಗಿ, ಅಬ್ಬಣ್ಣ ಉಳ್ಳೆಸೂಗುರ, ಸಂಗರಡ್ಡಿ ಗೋಡೆಹಾಳ, ಮಲ್ಲಣ್ಣಗೌಡ ಗಡ್ಡೆಸೂಗುರ, ಸುಗಣ್ಣಗೌಡ ಬಬಲಾದಿ, ಬಸವರಾಜಪ್ಪಗೌಡ ಬಿರನಾರ, ನಾಗಶೆಟ್ಟಿ ಖಾನಾಪುರ, ಶಂಕರಗೌಡ ಬಸವಂತಪುರ, ಕರೇಮ್ಮ ವರ್ಕನಳ್ಳಿ, ಗ್ರಾಮೀಣ ಮಂಡಲ ಪ್ರಧಾನ ಕಾರ್ಯದರ್ಶಿ ಶಿವುಕೋಂಕಲ, ಶರಣಗೌಡ ಹಾಲಿಗೇರಿ, ಮಾರೆಪ್ಪ ವರ್ಕನಳ್ಳಿ, ಭೀಮರಾಯ ಕೊಂಡಿ, ಹೀರಾಸಿಂಗ ರಾಠೋಡ, ಭೀಮರೆಡ್ಡಿಗೌಡ ಹೋಸಹಳ್ಳಿ, ಜಿಲ್ಲಾ ಕಾರ್ಯಾಲಯ ಕಾರ್ಯದರ್ಶಿ ಚನ್ನವೀರಯ್ಯ ಸ್ವಾಮಿ ಸೇರಿದಂತೆ ನಗರ ಮಂಡಲ ಪದಾಧಿಕಾರಿಗಳು ಗ್ರಾಮೀಣ ಮಂಡಲ ಪದಾಧಿಕಾರಿಗಳು ಅನೇಕರು ಉಪಸ್ಥಿತರಿದ್ದರು....

## ಜೆಸ್ಕಾಂನಿಂದ ಆಗಸ್ಟ್ 28ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್,25– ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಮಟಮಾರಿ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡ ಪ್ರಯುಕ್ತ ಆಗಸ್ಟ್ 28ರ ಬೆಳಗ್ಗೆ 10ಗಂಟೆಯಿಂದ ಸಂಜೆ 05 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಬೇಕು : ಶಾಸಕ ಚನ್ನಾರಡ್ಡಿ ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ಆ:25: ಪಠ್ಯದಷ್ಟೇ ಮಹತ್ವಕ್ರೀಡೆಗೂ ಇದ್ದು,ವಿದ್ಯಾರ್ಥಿಗಳು ತಮಗೆ ಆಸಕ್ತಿ ಇರುವ ಕ್ರೀಡೆಯಲ್ಲಿ ಭಾಗವಹಿಸುವ ಮೂಲಕ ಸಾಧನೆ ಮೆರೆಯಬೇಕೆಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಹೇಳಿದರು.

ಇಲ್ಲಿನ ಜಿಲ್ಲಾ ಕ್ರೀಡಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ಆಟಗಳಲ್ಲಿ ಸೋಲು,ಗೆಲುವು ಮುಖ್ಯವಲ್ಲ, ಸೋಲೇ ಗೆಲುವಿನ ಮೆಟ್ಟಿಲು ಅಂದು ಕೊಂಡು ಸ್ಪರ್ಧಾ ಮನೋಭಾವನೆಯಿಂದ ಆಟಗಳನ್ನು ಆಡಬೇಕೆಂದರು.

ಒಂದು ಕಾಲದಲ್ಲಿ ಕ್ರೀಡೆಗೆ ಅಷ್ಟು ಮಹತ್ವ ಇರಲಿಲ್ಲ, ಈಗ ಸರ್ಕಾರಗಳು ಸಾಕಷ್ಟು ಅನುದಾನ ನೀಡುವ ಮೂಲಕ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದೆ. ಕಾರಣ ವಿದ್ಯಾರ್ಥಿಗಳು ಹೆಚ್ಚು,ಹೆಚ್ಚು ಆಟಗಳಲ್ಲಿ ಭಾಗವಹಿಸಬೇಕೆಂದು ಶಾಸಕರು ಹೇಳಿದರು.

ದೇಶಿ ಆಟಗಳಿಗೂ ಈಗ ಮಹತ್ವ ಬಂದಿದ್ದು, ಇಲ್ಲಿನ ಮಕ್ಕಳು ಸತತ ಪ್ರಯತ್ನ ಮಾಡಿ ರಾಜ್ಯ,ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡುವ ಮೂಲಕ ಗಿರಿಜಿಲ್ಲೆ ಮಕ್ಕಳು ಕೀರ್ತಿ ತರಬೇಕೆಂದರು.

ಯುಡಾ ಅಧ್ಯಕ್ಷ ಬಾಬುರಾವ ಕಾಡ್ಲೂರ್ ಜಿಲ್ಲಾ ಕ್ರೀಡಾಧಿಕಾರಿ ರಾಜು ಬಾವಿಹಳ್ಳಿ ಸೇರಿದಂತೆಯೇ ಇತರರಿದ್ದರು.

ಕಬಡ್ಡಿ,ಯೋಗಾಸನ,ವಾಲಿಬಾಲ್ ,ರನ್ನಿಂಗ್ ಸೇರಿದಂತೆಯೇ ಒಟ್ಟು ಏಳು ಆಟಗಳ ಸ್ಪರ್ಧೆಗಳು ನಡೆದವು.

500 ಕ್ಕೂ ಅಧಿಕ ಮಕ್ಕಳು ಭಾಗವಹಿಸಿದ್ದರು. 32 ದೈಹಿಕ ಶಿಕ್ಷಕರು ಮತ್ತು ಕ್ರೀಡಾ ಇಲಾಖೆ ಸಿಬ್ಬಂದಿ ಇದ್ದರು.

# ಧರ್ಮಸ್ಥಳ ಪ್ರಕರಣ: ಎನ್‌ಐಎ ತನಿಖೆಗೆ ಒತ್ತಾಯಿಸಿ ಬಿಜೆಪಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 25 : ಧರ್ಮಸ್ಥಳ ಕ್ಷೇತ್ರದ ವಿರುದ್ಧ ಷಡ್ಯಂತ್ರ ನಡೆಸಲಾಗುತ್ತಿದೆ ಎಂದು ಆರೋಪಿಸಿ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಸೋಮವಾರ ಪ್ರತಿಭಟನೆ ನಡೆಸಿದರು.

ಬೀದರ್ ವಿಧಾನಸಭಾ ಕ್ಷೇತ್ರದ ಬಿಜೆಪಿ ಘಟಕದ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಪಕ್ಷದ ರಾಜ್ಯ ಕಾರ್ಯದರ್ಶಿಯೂ ಆದ ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ, ಜಿಲ್ಲಾಧ್ಯಕ್ಷ ಅಮರನಾಥ ಪಾಟೀಲ, ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

ನಗರದ ಪ್ರಮುಖ ಮಾರ್ಗಗಳಲ್ಲಿ ಪ್ರತಿಭಟನಾ ರ‍್ಯಾಲಿ ನಡೆಸಿದ ಬಿಜೆಪಿ ಕಾರ್ಯಕರ್ತರು, ತಹಶೀಲ್ದಾರ್ ಕಚೇರಿಗೆ ತೆರಳಿ ರಾಜ್ಯಪಾಲರ ಹೆಸರಿಗೆ ಬರೆದ ಮನವಿ ಪತ್ರವನ್ನು ಸಲ್ಲಿಸಿದರು.

ಧರ್ಮಸ್ಥಳದ ಪಾವಿತ್ರ್ಯಕ್ಕೆ ಕಳಂಕ ಹಚ್ಚಿ, ಹಿಂದೂಗಳ ಭಾವನೆಗಳಿಗೆ ಧಕ್ಕೆ ತರಲು ಷಡ್ಯಂತ್ರ ರೂಪಿಸಲಾಗಿದೆ. ಸಮಾಜ ವಿರೋಧಿ,ದೇಶವಿರೋಧಿಗಳ ಜಾಲ ಪತ್ತೆಗೆ ರಾಷ್ಟ್ರೀಯ ತನಿಖಾ ದಳದಿಂದ ತನಿಖೆ ನಡೆಸಬೇಕೆಂದು ಒತ್ತಾಯಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಹಿಂದೂ ಧಾರ್ಮಿಕ ಕ್ಷೇತ್ರಗಳಿಗೆ ಕಳಂಕ ತರುವ ಕೆಲಸ ನಡೆಯುತ್ತಿದೆ. ಹಿಂದೂಗಳ ಮೇಲೆ ದೌರ್ಜನ್ಯ, ಹತ್ಯೆಗಳು ನಡೆದಿವೆ. ತುಷ್ಟೀಕರಣ ರಾಜಕೀಯದಿಂದ ಸಮಾಜಘಾತುಕ ಶಕ್ತಿಗಳ ಹೆಚ್ಚಾಗಿದೆ. ಸೌಹಾರ್ದ ನಾಡಿಗೆ ಕಪ್ಪು ಚುಕ್ಕೆ ಹಚ್ಚುವ ಕೆಲಸ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ಯಾರೋ ಅನಾಮಿಕ ನೀಡಿದ ದೂರು ಆಧರಿಸಿ, ತನಿಖೆ ಕೈಗೊಂಡು ಧರ್ಮಸ್ಥಳಕ್ಕೆ ಕಳಂಕ ಹಚ್ಚುವ ಕೆಲಸ ಮಾಡಲಾಗಿದೆ. ಈ ತಪ್ಪಿಗೆ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಗೃಹಸಚಿವರು ಧರ್ಮಸ್ಥಳದ ನೆಲದಿಂದಲೇ ರಾಜ್ಯದ ಜನತೆಯ ಕ್ಷಮೆಯಾಚಿಸಬೇಕೆಂದು ಆಗ್ರಹಿಸಿದರು.

ಬೀದರ್ ಗ್ರಾಮೀಣ ಮಂಡಲ ಬಿಜೆಪಿ ಅಧ್ಯಕ್ಷ ದೀಪಕ ಗಾದಗೆ, ಬೀದರ್ ನಗರ ಮಂಡಲ ಅಧ್ಯಕ್ಷ ಶಶಿಧರ ಹೊಸಳ್ಳಿ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಉಲ್ಲಾಸಿನಿ ಮುದಾಳೆ, ಸಂಗಮೇಶ ನಾಸಿಗಾರ, ಬಾಬುರಾವ್ ಬಿರಾದಾರ, ಸುಭಾಷ ಮಡಿವಾಳ, ವೀರೇಶ ಸ್ವಾಮಿ ಮತ್ತಿತರರು ಪಾಲ್ಗೊಂಡಿದ್ದರು.

ಡಾ. ಶೈಲೇಂದ್ರ ಕೆ. ಬೆಲ್ದಾಳೆ, ಶಾಸಕ ಧರ್ಮಸ್ಥಳಕ್ಕೆ ಕಪ್ಪುಮಸಿಯುವ ಬಳಿಯುವ ಹುನ್ನಾರ ವಿಫಲಗೊಂಡಿದೆ. ಷಡ್ಯಂತ್ರ ನಡೆಸಿದವರ ಬಗ್ಗೆ ತನಿಖೆ ನಡೆಸಿ, ಕಾನೂನು ಕ್ರಮ ಜರುಗಿಸಬೇಕು. ಇಲ್ಲವಾದರೆ ಬಿಜೆಪಿ ಹೋರಾಟ ನಡೆಸಲಿದೆ. ಭಗವಂತ ಖೂಬಾ, ಕೇಂದ್ರದ ಮಾಜಿ ಸಚಿವ ಧರ್ಮಸ್ಥಳದ ಘಟನೆಯ ತನಿಖೆಯಿಂದ ಏನೂ ಸಾಬೀತಾಗಿಲ್ಲ. ಇದೊಂದು ಪಿತೂರಿ ಎಂಬುದು ಎಲ್ಲರಿಗೂ ಗೊತ್ತಾಗಿದೆ. ಇದರ ಹಿಂದಿನ ಶಕ್ತಿಗಳು ಯಾರೆಂಬುದು ಪತ್ತೆ ಹಚ್ಚಿ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

# ನೆರೆ ಹಾವಳಿ ಎದುರಿಸಲು ಸನ್ನದ್ಧರಾಗಿ, ವಿಳಂಬ ಮಾಡದೆ ಪರಿಹಾರ ಒದಗಿಸಿ:ಪ್ರಿಯಾಂಕ್ ಖರ್ಗೆ



ಕಲಬುರಗಿ,ಆ.25: ಇತ್ತೀಚೆಗೆ ಜಿಲ್ಲೆಯಾದ್ಯಂತ ಸುರಿದ ಸತತ ಮಳೆ ಮತ್ತು ಮುಂದಿನ ದಿನದಲ್ಲಿ ಸಂಭಾವ್ಯ ನೆರೆಹಾವಳಿ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಅಧಿಕಾರಿಗಳು ಸನ್ನಧರಾಗಬೇಕು ಎಂದು ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅಧಿಕಾರಿಗಳಿಗೆ ಸೂಚಿಸಿದರು.

ಸೋಮವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ಕಲಬುರಗಿ ಜಿಲ್ಲಾಡಳಿತದ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ನೆರೆ ಹಾವಳಿಯಿಂದ ಯಾವುದೇ ರೀತಿಯ ಜನ-ಜಾನುವಾರು ಪ್ರಾಣ ಹಾನಿಯಾಗದಂತೆ ಎಚ್ಚರ ವಹಿಸಬೇಕು. ಮಳೆಯಿಂದ ಮನೆ ಕುಸಿದುಬಿದ್ದಲ್ಲಿ, ಭಾಗಶ:ಹಾನಿಯಾದಲ್ಲಿ ಎನ್.ಡಿ.ಆರ್.ಎಫ್./ಎಸ್.ಡಿ.ಆರ್.ಎಫ್. ನಿಯಮಾವಳಿ ಪ್ರಕಾರ ತಕ್ಷಣವೇ ಪರಿಹಾರ ಒದಗಿಸಬೇಕು. ಯಾವುದೇ ವಿಳಂಬ ಸಲ್ಲದು ಎಂದು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು. ಸಹಾಯಕ ಆಯುಕ್ತರು, ತಹಶೀಲ್ದಾರರು ಹಾಗೂ ಸಂಬಂಧಪಟ್ಟ ನೋಡಲ್ ಅಧಿಕಾರಿಗಳು ನದಿ ದಂಡೆ ಪ್ರದೇಶದಲ್ಲಿ ನೆರೆ ಹಾವಳಿಗೆ ತುತ್ತಾಗುವ ಸಂಭಾವ್ಯ ಗ್ರಾಮಗಳಿಗೆ ಭೇಟಿ ನೀಡಿ ಗ್ರಾಮಸ್ಥರಿಗೆ ಸಂಕಷ್ಟದ ಸಮಯದಲ್ಲಿ ಸರ್ಕಾರ ನಿಮ್ಮೊಂದಿಗೆ ಎಂಬುದನ್ನು ಅವರಿಗೆ ಮನವರಿಕೆ ಮಾಡಿಕೊಡಬೇಕು. ಎಲ್ಲಾ ರೀತಿಯ ಸುರಕ್ಷತೆಯ ನೆರವು ಖಾತ್ರಿಪಡಿಸಬೇಕು. ಪ್ರವಾಹದಿಂದ ಆತಂಕದಲ್ಲಿರುವ ಸ್ಥಳಿಯ ನಿವಾಸಿಗಳಿಗೆ ಧೈರ್ಯ ತುಂಬಿ ಅವರ ಆತ್ಮ ವಿಶ್ವಾಸ ಹೆಚ್ಚಿಸಬೇಕು. ಪ್ರವಾಹ ಬಂದಲ್ಲಿ ಏನೆಲ್ಲ ಸುರಕ್ಷಾ ಕ್ರಮ ತೆಗೆದುಕೊಳ್ಳಬೇಕೆಂದು ಅವರಿಗೆ ಅರಿವು ಮೂಡಿಬೇಕೆಂದರು.

ತಾಲೂಕು ಮತ್ತು ಗ್ರಾಮ ಮಟ್ಟದ ಎಲ್ಲಾ ಹಂತದ ಅಧಿಕಾರಿ-ಸಿಬ್ಬಂದಿಗಳು ಕೇಂದ್ರಸ್ಥಾನದಲ್ಲಿದ್ದ ಪರಿಸ್ಥಿತಿ ಅನುಗುಣವಾಗಿ ಕಾರ್ಯನಿರ್ವಹಿಸಬೇಕು. ಸಾರ್ವಜನಿಕರು ನದಿ, ಜಲಾಶಯ, ಕೆರೆ, ಕಟ್ಟೆಯತ್ತ ಬಟ್ಟೆ ಒಗೆಯಲು, ದನ-ಕರು ಮೇಯಿಸಲು ಹೋಗದಂತೆ ಗ್ರಾಮವಾರು ಡಂಗೂರ ಸಾರಬೇಕು. ವಿಶೇಷವಾಗಿ ಯುವ ಸಮುದಾಯ ಇಂತಹ ಸಂದರ್ಭದಲ್ಲಿ ಸೆಲ್ಫಿ, ನೀರಿನೊಂದಿಗೆ ಈಜುವಂತಹ ದುಸ್ಸಾಹಸಗಳಿಗೆ ಮುಂದಾಗುವದನ್ನು ಪೊಲೀಸ್ ಇಲಾಖೆ ತಡೆಯಬೇಕು ಎಂದರು. ಪ್ರವಾಹ ಸಂದರ್ಭದಲ್ಲಿ ಅಫಜಲಪೂರ ತಾಲೂಕಿನ ಧಾರ್ಮಿಕ ಸ್ಥಾನಗಳಾದ ದೇವಲ ಗಾಣಗಾಪೂರ ಮತ್ತು ಘತ್ತರಗಾಗೆ ಬರುವ ಭಕ್ತಾದಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ವಿಶೇಷ ಗಮನ ಹರಿಸಬೇಕು. ಸತತ ಮಳೆಯಾಗುತ್ತಿರುವುದರಿಂದ ಸಾಂಕ್ರಾಮಿಕ ರೋಗಗಳ ಕಾಟ ಹೆಚ್ಚಲಿದ್ದು, ಆರೋಗ್ಯ ಇಲಾಖೆ ಇದರ ನಿಯಂತ್ರಣಕ್ಕೆ ಮುಂದಾಗಬೇಕು. ಮಳೆಗಾಲ ಇರುವುದರಿಂದ ಕಲುಷಿತ ನೀರು ಸೇವನೆಯಿಂದಲೆ ಬಹಳಷ್ಟು ಸಮಸ್ಯೆ ಕಂಡುಬರುತ್ತವೆ. ಇದರ ನಿಯಂತ್ರಣಕ್ಕೆ ನೀರು ಪೂರೈಕೆ-ಯ ಲ್ಯಾಬ್ ಟೆಸ್ಟ್ ಹೆಚ್ಚಿಸಬೇಕು. ಕಲಬುರಗಿ ಮಹಾನಗರ, ನಗರ-ಪಟ್ಟಣ ಪಂಚಾಯತಿ ಸೇರಿದಂತೆ ಹಳ್ಳಿಯ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆಯಾಗುವಂತೆ ಅಧಿಕಾರಿಗಳು ನೋಡಿಕೊಳ್ಳಬೇಕೆಂದರು. ಬೆಳೆ ಹಾನಿ ಸಮೀಕ್ಷಾ ವರದಿ ನಿಖರವಾಗಿರಲಿ: ಪ್ರವಾಹ ಪೀಡಿತ ಪ್ರದೇಶದಲ್ಲಿ ಬೆಳೆ ಹಾನಿ ಕುರಿತು ಕಂದಾಯ, ಕೃಷಿ, ತೋಟಗಾರಿಕೆ ಅಧಿಕಾರಿಗಳು ಜಂಟಿ ಸಮೀಕ್ಷೆ ಕೈಗೊಂಡು ಸರ್ಕಾರ-ಕ್ಕೆ ವರದಿ ಸಲ್ಲಿಸಬೇಕು. ಸಮೀಕ್ಷೆ ಕೈಗೊಳ್ಳುವ ಮುನ್ನ ಗ್ರಾಮದಲ್ಲಿ ಡಂಗೂರ ಸಾರಬೇಕು. ಹೆಚ್ಚಿನ ಪ್ರಚಾರ ನೀಡಿದಲ್ಲಿ ಮಾತ್ರ ರೈತರು ಪರಿಹಾರ ಪಡೆಯಲು ಸಾಧ್ಯವಾಗಲಿದೆ. ಬೆಳೆ ಹಾನಿ ವರದಿ ಕಾಟಾಚಾರವಾಗಿರದೆ ನಿಖರವಾಗಿರಬೇಕು ಎಂದ ಸಚಿವ ಪ್ರಿಯಾಂಕ್ ಖರ್ಗೆ ಅವರು ತಾಲೂಕಿನ ತಹಶೀಲ್ದಾರರು, ತಾಲೂಕಾ ಪಂಚಾಯತ್ ಇ.ಓ.ಗಳು ಇದರ ಸಂಪೂರ್ಣ ಹೊಣೆಗಾರಿಕೆ ವಹಿಸಬೇಕು ಎಂದು ನಿರ್ದೇಶನ ನೀಡಿದರು. ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಇದೂವರೆಗಿನ ಮಳೆಯಿಂದಾದ ಬೆಳೆ, ರಸ್ತೆ, ಮನೆ ಹಾನಿ ಕುರಿತು ವಿವರಿಸಿ ಮಾತನಾಡಿದ ಅವರು, ಜಿಲ್ಲೆಯಾದ್ಯಂತ ಇರುವ ಜಲಾಶಯಗಳಲ್ಲಿ ಶೇ. 60 ರಿಂದ 85ರಷ್ಟು ಭರ್ತಿಯಾಗಿದ್ದು, ಪ್ರತಿ ದಿನ ಇದರ ಒಳ ಹರಿವು ಮತ್ತು ಹೊರ ಹರಿವಿನ ಮೇಲೆ ನಿಗಾ ಇರಿಸಲಾಗಿದೆ. 67 ಕೆರೆಗಳು ಸಂಪೂರ್ಣ ಭರ್ತಿಯಾಗಿದ್ದು, 51 ಕೆರೆಗಳು ಶೇ.90ರಷ್ಟು ಭರ್ತಿಯಾಗಿವೆ. ಜಿಲ್ಲೆಯಾದ್ಯಂತ ಪ್ರವಾಹಕ್ಕೆ ತುತ್ತಾಗುವ 153 ಗ್ರಾಮಗಳನ್ನು ಸಮಸ್ಯಾತ್ಮಕ ಗ್ರಾಮಗಳೆಂದು ಗುರುತಿಸಿದ್ದು, ಪ್ರವಾಹ ಬಂದಲ್ಲಿ ಸ್ಥಳೀಯರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲು 90 ಕಾಳಜಿ ಕೇಂದ್ರ ಸಹ ಗುರುತಿಸಿದೆ. ಅದೇ ರಿತಿ ಜಾನುವಾರುಗಳಿಗೆ ತಾತ್ಕಲಿಕ 40 ಗೋಶಾಲೆ ತೆರೆಯಲು ಸಹ ಯೋಜನೆ ರೂಪಿಸಲಾಗಿದೆ. ಇನ್ನು ಗ್ರಾಮವಾರು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಯನ್ನಾಗಿಸಿ ನೇಮಿಸಿ ನೆರೆ ಹಾವಳಿ ಕಾರ್ಯಕ್ಕೆ ತಾಲೂಕಾಡಳಿತದೊಂದಿಗೆ ಸಮನ್ವಯ ಸಾಧಿಸಲು ಸೂಚಿಸಲಾಗಿದೆ ಎಂದು ಸಚಿವರಿಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಕಲಬುರಗಿ ನಗರ ಪೊಲೀಸ್ ಆಯುಕ್ತ ಎಸ್.ಡಿ.ಶರಣಪ್ಪ, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್, ಲೋಕೋಪಯೋಗಿ ಇಲಾಖೆಯ ಇ.ಇ. ಸುಭಾಷ ಬಿರಾದಾರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮುನಾವರ ದೌಲಾ, ಸಹಾಯಕ ಆಯುಕ್ತರಾದ ಸಾಹಿತ್ಯ, ಪ್ರಭುರೆಡ್ಡಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ತಾಲೂಕಿನ ತಹಶೀಲ್ದಾರರು, ತಾಲೂಕಾ ಪಂಚಾಯತ್ ಇ.ಓ.ಗಳು ಭಾಗವಹಿಸಿದ್ದರು.

# ಮಕ್ಕಳಿಗೆ ಆಕರ್ಷಿಸುವ ಪಠ್ಯ ಪುಸ್ತಕಗಳು ಸಿದ್ಧಪಡಿಸಬೇಕು:ಪ್ರೊ. ಪುರುಷೋತ್ತಮ ಬಿಳಿಮಲೆ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ 25 : ಶಿಕ್ಷಣವೆಂದರೆ ರಕ್ಷಣೆ, ಭದ್ರತೆ ಪೋಷಣೆ ಆಧಾರ, ಜೀವನ, ಬದುಕು, ಅನ್ನ, ಸುಖ, ಶಾಂತಿ ನೆಮ್ಮದಿ ಇತ್ಯಾದಿ ಅರ್ಥಗಳಿವೆ. ಈ ಅರ್ಥಗಳಿಗೆ ಪೂರಕವಾಗುವಂಥ ಕನ್ನಡ ಪಠ್ಯಪುಸ್ತಕಗಳು ಸಿದ್ಧಪಡಿಸಬೇಕಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರೊ. ಪುರುಷೋತ್ತಮ ಬಿಳಿಮಲೆ ನುಡಿದರು. ಅವರಿಂದು ಕರ್ನಾಟಕ ಸಾಹಿತ್ಯ ಸಂಘ ಆಯೋಜಿಸುವ ಕನ್ನಡ ಶಾಲೆಗಳ ಸ್ಥಿತಿ-ಗತಿ ಪರಿಹಾರೋಪಾಯಗಳು ಸಂವಾದ ಗೋಷ್ಠಿ ಉದ್ಘಾಟನೆ ಮಾಡಿ ಮಾತನಾಡಿದರು. ಕನ್ನಡ ವಿಷಯದಲ್ಲಿ ಅನೇಕ ವಿದ್ಯಾರ್ಥಿಗಲೂ ಅನುತೀರ್ಣರಾಗುತ್ತಿದ್ದಾರೆ. ಇದ-ಕ್ಕೆ ಕಾರಣಗಳು ಹುಡಕಬೇಕಾಗಿದೆ. ಸರ್ಕಾರ ಕನ್ನಡ ಶಾಲೆಗಳಿಗೆ ಶಿಕ್ಷಕರನ್ನು ನೇಮಕ ಮಾಡುವುದರ ಮೂಲಕ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಕೊಡಬೇಕಾಗಿದೆ. ಕನ್ನಡ ಮಾಧ್ಯಮದ ವಿದ್ಯಾರ್ಥಿಗಳಿಗೆ ಎಲ್ಲ ವಲಯಗಳಿಗೆ ಅನುಕೂಲತೆಗಳು ದೊರಕಬೇಕು. ಸರ್ಕಾರದ ನಿಲುವು ಅಚಲವಾಗಿದೆ. ಎಸ್‌ಇಪಿ ಜಾರಿಗೆ ಬರಬೇಕು. ಇದ್ದರಿಂದ ಕನ್ನಡ ಉಳಿಯುತ್ತದೆ ಹಾಗೂ ಬೆಳೆಯುತ್ತದೆ. 55 ಸಾವಿರ ಶಿಕ್ಷಕರ ಹುದ್ದೆಗಳು ಸರ್ಕಾರ ಕೂಡಲೇ ಭರ್ತಿ ಮಾಡಬೇಕು. ಆ ದಿಶೆಯಲ್ಲಿ ಪ್ರಾಧಿಕಾರ ಸರ್ಕಾರದ ಗಮನ ಸೆಳೆದಿದೆ. ಕನ್ನಡ ಕಟ್ಟುವಲ್ಲಿ ಸರ್ಕಾರ, ಶಿಕ್ಷಣ ಸಂಸ್ಥೆಗಳು, ಅಧಿಕಾರಿಗಳು, ಪಾಲಕರು-ಪೋಷಕರ ಸಹಾಯ ಸಹಕಾರ ದೂರದೃಷ್ಟಿ ಅವಶ್ಯಕವಾಗಿದೆ ಎಂದರು. ಅಖಿಲ ಕರ್ನಾಟಕ ಅನುದಾನಿತ ರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘದ ರಾಜ್ಯಾಧ್ಯಕ್ಷರಾದ ರೇವಣಸಿದ್ದಪ್ಪ ಜಲಾದೆ ಅವರು ಮಾತನಾಡಿ, ಕರ್ನಾಟಕದಲ್ಲಿ 9-10 ವರ್ಷಗಳಿಂದ ಖಾಸಗಿ ಕನ್ನಡ ಶಾಲೆಗಳು ಮುಚ್ಚುತ್ತಿದ್ದಾರೆ. ಕಾರಣ ಸರ್ಕಾರದ ವಿಪರಿತ ಕಠಿಣ ನಿಯಮಗಳು ಇವುಗಳಿಂದ ಕನ್ನಡ ಶಾಲೆಗಳು ಸೋತು ಸೊರಗುತ್ತಿವೆ. ಇವತ್ತು ನಮ್ಮ ಮಾತೃಭಾಷೆ ಉಳಿಯಬೇಕು. ಬೆಳೆಯಬೇಕು. ಅನುದಾನಿತ ಕನ್ನಡ ಶಾಲಾ ಕಾಲೇಜುಗಳಲ್ಲಿ ಖಾಲಿ ಹುದ್ದೆಗಳನ್ನು ತಕ್ಷಣವೇ ಭರ್ತಿ ಮಾಡಬೇಕು. ಕನ್ನಡ ಶಾಲೆಗಳನ್ನು ಇಂಗ್ಲೀಷ ಮಾಧ್ಯಮವಾಗಿ ಪರಿವರ್ತನೆ ಮಾಡುತ್ತಿರುವುದನ್ನು ತಕ್ಷಣವೇ ನಿಲ್ಲಿಸಬೇಕೆಂದರು. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಸಂತೋಷ ಹಾನಗಲ್ಲ ಮಾತನಾಡಿ, ಕರ್ನಾಟಕದಲ್ಲಿ ಶತಮಾನ ಕಂಡ ಅನೇಕ ಶಾಲೆಗಳಿವೆ. ಅವುಗಳಿಗೆ ಸರ್ಕಾರ ವಿಶೇಷ ಸೌಲಭ್ಯಗಳು ಕೊಡಬೇಕೆಂಬ ದಿಶೆಯಲ್ಲಿ ಪ್ರಾಧಿಕಾರ ಮಹತ್ವನಿರ್ಧಾರ ತೆಗೆದುಕೊಂಡಿದೆ. ಕಲ್ಯಾಣ ಕರ್ನಾಟಕದಲ್ಲಿ ಹೆಚ್ಚು ಕನ್ನಡ ಶಾಲೆಗಳಿವೆ. ಅವುಗಳಿಗೆ ಶಕ್ತಿ ತುಂಬುವ ಕೆಲಸ ಪ್ರಾಧಿಕಾರ ಮಾಡಲಿದೆ ಎಂದು ತಿಳಿಸಿದರು.

ಸಂಸ್ಕೃತಿ ಚಿಂತಕರಾದ ಡಾ. ಕಾಶಿನಾಥ ಚೆಲ್ವಾ ಮಾತನಾಡಿ, ಕನ್ನಡ ಶಾಲೆಗಳಿಗೆ ವಿಶೇಷ ಪ್ಯಾ-ಕೇಜ ಕೊಡಬೇಕು. ಅಂಗನವಾಡಿ ಶಾಲೆಗಳನ್ನು ಮೇಲ್ದರ್ಜೆಗೆ ಏರಿಸಬೇಕು. ಕನ್ನಡ ಶಾಲೆ ಇದ್ದಲ್ಲಿ ವಸತಿ, ನೀರು, ವಿದ್ಯುತ, ರಸ್ತೆ, ಸಾರಿಗೆ ವ್ಯವಸ್ಥೆ, ಉದ್ಯಾನ ವನ, ಗ್ರಂಥಾಲಯ, ಆಟದ ಮೈದಾನ ಮುಂತಾದ ವ್ಯವಸ್ಥೆಗಳು ಸರ್ಕಾರ ಕಲ್ಪಿಸಿ ಕೊಟ್ಟರೆ ಕನ್ನಡ ಉಳಿಯುತ್ತದೆಂದರು. ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷರಾದ ಪ್ರೊ. ಜಗನ್ನಾಥ ಹೆಬ್ಬಾಳೆ ಮಾತನಾಡಿ, ಕನ್ನಡ ಬಳಕೆ ಮಾಡಿದರೆ ಮಾತ್ರ ಉಳಿಯುತ್ತದೆ. ಇಲ್ಲವಾದಲ್ಲಿ ಅಳಿಯುತ್ತದೆಂದರು. ಶಿಕ್ಷಣ ತಜ್ಞರು ಶಿಕ್ಷಕರು, ವಿದ್ಯಾರ್ಥಿಗಳು, ಸಾಹಿತಿಗಳು ಸಂವಾದ ಗೋಷ್ಠಿಯಲ್ಲಿ ಭಾಗವಹಿಸಿ ತಮ್ಮ ತಮ್ಮ ಅಭಿಪ್ರಾಯ ಮಂಡಿಸಿದರು. ಆರಂಭದಲ್ಲಿ ಎಸ್.ಬಿ. ಕುಚಬಾಳ ನಾಡಗೀತೆ ಹಾಡಿದರು. ಕರ್ನಾಟಕ ಸಾಹಿತ್ಯ ಸಂಘದ ಕಾರ್ಯದರ್ಶಿ ನಿಜಲಿಂಗಪ್ಪ ತಗಾರೆ ಸ್ವಾಗತಿಸಿದರು. ಜಂಟಿ ಕಾರ್ಯದರ್ಶಿ ಡಾ. ರಾಜಕುಮಾರ ಹೆಬ್ಬಾಳೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಅಶೋಕ ಕೋರೆ ಕರ್ಯಕ್ರಮ ನಿರ್ವಹಿಸಿದರು. ಡಾ. ಸುರೇಖಾ ಬಿರಾದಾರ ವಂದಿಸಿದರು.

# ಧರ್ಮಸ್ಥಳ ಪ್ರಕರಣ ಎನ್‌ಐಎಗೆ ವಹಿಸಲು ಆಗ್ರಹ



ಔರಾದ:ಅ.25:ಪುಣ್ಯಭೂಮಿ ಧರ್ಮಸ್ಥಳದ ಪಾವಿತ್ರ್ಯಕ್ಕೆ ಕಳಂಕ ತರಲು ನಡೆಯುತ್ತಿರುವ ಷಡ್ಯಂತ್ರವನ್ನು ವಿರೋಧಿಸಿ ಬಿಜೆಪಿ ಮಂಡಲ ಘಟಕದ ವತಿಯಿಂದ ಔರಾದ(ಬಿ) ಪಟ್ಟಣದಲ್ಲಿ ಆ.25ರಂದು ಬೃಹತ್ ಪ್ರತಿಭಟನೆ ನೆಡೆಸಲಾಯಿತು.

ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಪಟ್ಟಣದ ಎಪಿಎಂಸಿ ವೃತ್ತದ ಬಳಿ ಪ್ರತಿಭಟನೆಗೆ ಚಾಲನೆ ನೀಡಿದರು. ಪ್ರಮುಖ ಮಾರ್ಗಗಳ ಮೂಲಕ ಪ್ರತಿಭಟನಾ ಬಸವೇಶ್ವರ ವೃತ್ತಕ್ಕೆ ಬಂದು ಕೊನೆಗೊಂಡಿತು. ಪಕ್ಷದ ಕಾರ್ಯಕರ್ತರು, ಮುಖಂಡರು, ಸಂಘ ಸಂಸ್ಥೆಗಳ ಪ್ರಮುಖರು ಮಾನವ ಸರಪಳಿಯನ್ನು ನಿರ್ಮಿಸಿ ಆಕ್ರೋಶ ವ್ಯಕ್ತಪಡಿಸಿದರು. ಹಿಂದುಗಳ ಭಾವನೆಗೆ ಧಕ್ಕೆ ತರುವ ಷಡ್ಯಂತ್ರ ರೂಪಿಸಿದ ಸಮಾಜ ವಿರೋಧಿ, ದೇಶ ವಿರೋಧಿಗಳ ಜಾಲದ ಪತ್ತೆಗಾಗಿ ಪ್ರಕರಣದ ತನಿಖೆಯನ್ನು ರಾಷ್ಟ್ರೀಯ ತನಿಖಾ ದಳಕ್ಕೆ ವಹಿಸಬೇಕೆಂದು ತಹಸೀಲ್ದಾರರ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸ'ಲಾಯಿತು. ಪ್ರತಿಭಟನೆಯಲ್ಲಿ 'ಧರ್ಮಕ್ಕೆ ಜಯವಾಗಲಿ, ದುಷ್ಟರ ಸಂಹಾರವಾಗಲಿ,' 'ಧರ್ಮಸ್ಥಳ ಕ್ಷೇತ್ರದ ವಿರುದ್ಧ ಅಪಪ್ರಚಾರ ಮಾಡುವವರ ಬಂಧನ ಯಾವಾಗ ?ಹಿಂದುಗಳ ಕೆಣಕಿದರೆ ಸಮರ ಎಡಪಂಥೀಯರೆ ಎಚ್ಚರ' ಎನ್ನುವ ಫಲಕಗಳನ್ನು ಹಿಡಿದು ಜಯಘೋಷಗಳನ್ನು ಮೊಳಗಿಸಲಾಯಿತು. ಈ ಸಂದರ್ಭದಲ್ಲಿ ಮುಖಂಡರು ಮಾತನಾಡಿ, ಧರ್ಮಸ್ಥಳ ಕ್ಷೇತ್ರವು ಕರ್ನಾಟಕ ಮಾತ್ರವಲ್ಲ, ಇಡೀ ವಿಶ್ವದ ಸಮಸ್ತ ಹಿಂದುಗಳ ಶ್ರದ್ಧೆ, ಭಕ್ತಿ, ನಂಬಿಕೆಯುಳ್ಳ ಪವಿತ್ರ ಧಾರ್ಮಿಕ ಕೇಂದ್ರವಾಗಿದೆ. ಹಿಂದು ಧರ್ಮದ ಪುನರುತ್ಥಾನಕ್ಕಾಗಿ, ಮಾನವ ಉದ್ಧಾರಕ್ಕಾಗಿ ವಿಶಿಷ್ಟ ಸೇವೆ ಸಲ್ಲಿಸುತ್ತಿದೆ. ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗ್ಗಡೆಯವರು ಜನಸೇವೆಯೇ ಜನಾರ್ಧನ ಸೇವೆ ಎಂದು ಜನಪರ, ಜೀವಪರವಾದ ಕೆಲಸಕಾರ್ಯಗಳು ಮಾಡುತ್ತಿದ್ದಾರೆ.

ಸಮಾಜ, ದೇಶ ವಿರೋಧಿಗಳು ಬಹು ದೊಡ್ಡ ಷಡ್ಯಂತ್ರ ಹೆಣೆದು ಧರ್ಮಸ್ಥಳದ ಪಾವಿತ್ರ್ಯಕ್ಕೆ ಧಕ್ಕೆ ತರಲು ಪ್ರಯತ್ನಿಸುತ್ತಿದ್ದಾರೆ. ದೇಶ-ವಿದೇಶದ ಕೆಲ ಕಾಣದ ಕೈಗಳು ಇದರ ಹಿಂದೆ ಕೆಲಸ ಮಾಡುತ್ತಿರುವುದು ಆಘಾತ ಮೂಡಿಸಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಹಿಂದುಗಳ ಭಾವನೆಗೆ ಧಕ್ಕೆ ತರುವ, ಹಿಂದು ಹೋರಾಟ ಹತ್ತಿಕ್ಕುವ ಕಾರ್ಯ ನಿರಂತರ ನಡೆದಿದೆ. ಹಿಂದುಗಳ ಹತ್ಯೆ, ಹಿಂದುಗಳ ಮೇಲೆ ದೌರ್ಜನ್ಯ, ದಬ್ಬಾಳಿಕೆ ಹೆಚ್ಚಾಗಿವೆ. ಸಮಾಜಘಾತುಕ ಶಕ್ತಿಗಳು ಸಕ್ರಿಯವಾಗಿವೆ. ಕಾನೂನು ಮತ್ತು ಸುವ್ಯವಸ್ಥೆ ಸಂಪೂರ್ಣ ಹಾಳಾಗಿದೆ. ಕರುನಾಡು ಕ್ರಿಮಿನಲ್ ನಾಡು ಎಂಬಂತಾಗಿದೆ ಎಂದು ಬೇಸರ ಹೊರಹಾಕಿದರು. ಧರ್ಮಸ್ಥಳದಲ್ಲಿ ನೂರಾರು ಹೆಣಗಳು ಹೂತಿರುವ ಬಗ್ಗೆ ಯಾರೋ ಕೆಲವರು ಎಬ್ಬಿಸಿದ ಗೊಂದಲ, ಅನಾಮಿಕ ನೀಡಿದ ತಲೆಬುಡವಿಲ್ಲದ ದೂರಿನ ಮೇಲೆ ಅಸ್ಥಿಪಂಜರ ಶೋಧ ನೆಪದಲ್ಲಿ ಸರ್ಕಾರ ಯಾವುದೇ ಪೂರ್ವಾಪರ ವಿಚಾರ ಮಾಡದೆ, ಆತುರಾತುರದಲ್ಲಿ ತನಿಖೆಗೆ ಎಸ್‌ಐಟಿ ರಚನೆ ಮಾಡಿದ್ದೇ ಹಾಸ್ಯಾಸ್ಪದ. ತನಿಖೆ ಹೆಸರಿನಲ್ಲಿ ಸರ್ಕಾರ ಅನಗತ್ಯವಾಗಿ ಧರ್ಮಸ್ಥಳಕ್ಕೆ ಸಾರ್ವಜನಿಕವಾಗಿ ಕಳಂಕ ಹಚ್ಚುವ ಕೆಲಸಮಾಡಿದೆ. ರಾಜ್ಯದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಗೃಹ ಸಚಿವರು ಧರ್ಮಸ್ಥಳದ ನೆಲದಿಂದಲೇ ಕರ್ನಾಟಕದ ಜನತೆಗೆ ಬಹಿರಂಗ ಕ್ಷಮೆ ಕೋರಬೇಕೆಂದು ಒತ್ತಾಯಿಸಿದರು. ಅನಾಮಿಕ ಚನ್ನಯ್ಯ, ಸುಜಾತಾ ಭಟ್, ಯೂಟ್ಯೂಬರ್ ಮಹ್ಮದ್ ಸಮೀರ್ ಮುಂತಾದವರು ಇಲ್ಲಿ ಸೂತ್ರಧಾರಿಗಳಾಗಿದ್ದಾರೆ. ಇವರ ಹಿಂದಿರುವ ಪಾತ್ರಧಾರಿಗಳು ಯಾರು? ಇವರ ಬುಡ ಎಲ್ಲಿದೆ? ಇದರ ಹಿಂದೆ ಯಾರು ಯಾರು ಇದ್ದಾರೆ ಎಂಬುದು ಬಯಲಿಗೆ ತರುವ ಅಗತ್ಯವಿದೆ. ದೂರುದಾರ ಅನಾಮಿಕ ಚನ್ನಯ್ಯ ಬುರುಡೆ ಬಿಟ್ಟಿದ್ದು ಬಯಲಾಗಿದೆ. ಎಸ್‌ಐಟಿ ಈತನಿಗೆ ಬಂಧಿಸಿ ವಿಚಾರಣೆ ನಡೆಸುತ್ತಿದೆ. ಆದರೆ ಎಸ್ ಐಟಿಯಿಂದ ಇದರ ಹಿಂದಿನ ಜಾಡು ಪತ್ತೆ ಹಚ್ಚುವುದು ಅನುಮಾನಕ್ಕೆ ಕಾರಣವಾಗಿದೆ. ಏಕೆಂದರೆ ಹಿಂದು ವಿರೋಧಿ ಷಡ್ಯಂತ್ರ ಮಾಡುವವರ ವಿರುದ್ಧ ಕಾಂಗ್ರೆಸ್ ಸರ್ಕಾರ ಕಠಿಣ ಕ್ರಮ ಕೈಗೊಳ್ಳುವ ಭರವಸೆ ಯಾರಿಗೂ ಇಲ್ಲ. ಹೀಗಾಗಿ ಇದರ ಹಿಂದಿನ ಸಮಾಜ ವಿರೋಧಿ, ಧರ್ಮ ವಿರೋಧಿ, ದೇಶ ವಿರೋಧಿಗಳ ಪತ್ತೆಗಾಗಿ ಕೇಂದ್ರದ ತನಿಖಾ ದಳದಿಂದ ತನಿಖೆ ನಡೆಸುವುದು ಅತಿ ಅಗತ್ಯವಿದೆ ಎಂದು ಮನವಿ ಪತ್ರದಲ್ಲಿ ಆಗ್ರಹಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷರಾದ ರಾಮಶೆಟ್ಟಿ ಪನ್ನಾಳೆ, ಮಂಡಲ ಪ್ರಭಾರಿ ಮಹೇಶ್ವರ ಸ್ವಾಮಿ, ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಶಿವರಾಜ ಅಲ್ಮಾಜೆ, ಮುಖಂಡರಾದ ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ, ಮಲ್ಲಪ್ಪ ದಾನಾ, ಅಶೋಕ ಮೇತ್ರೆ, ಬಸವರಾಜ ಹಳ್ಳೆ, ಸಿದ್ರಾಮಪ್ಪ ನಿಡೋದೆ, ದಯಾನಂದ ಘೂಳೆ, ಕೇರಬಾ ಪವಾರ, ಖಂಡೋಬಾ ಕಂಗಟೆ, ಸಂದೀಪ ಪಾಟೀಲ, ನಾಗನಾಥ ಮೋರ್ಗೆ, ಸಂಜು ಮುರ್ಕೆ, ರಾಜಪ್ಪ ಸೋರಳ್ಳಿ, ನಾಗನಾಥ ಬಿರಾದಾರ, ಪ್ರಕಾಶ ಜೀರ್ಗೆ, ಉದಯ ಸೋಲಪೂರೆ, ಗಣೇಶ ಕಾರೆಗಾವೆ, ಮೃತ್ಯುಂಜಯ, ಕಪಿಲ ಪಾಟೀಲ, ಶಿವರಾಜ ಕೋಳಿ, ಸಂಜು ವಡೆಯರ್, ಗುಂಡಪ್ಪ ಮುಧಾಳೆ, ಪ್ರವೀಣ ಕಾರಬಾರಿ, ಪ್ರದೀಪ ಬಾಬಳಿ, ಗೌತಮ ತಾಂದಳೆ, ಸುಜಿತ ರಾಠೋಡ, ಅಶೋಕ ಶಂಬೆಳ್ಳಿ, ಬಾಲಾಜಿ ತಾವರೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರ

**ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ಇಲಾಖೆ**
**ಕಾರ್ಯನಿರ್ವಾಹಕ ಅಭಿಯಂತರವರ ಕಛೇರಿ, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ವಿಭಾಗ, ಬೀದರ.**

ನಂ: ಇಇ/ಎಂಐಡಿ/ಬೀದರ/ತಾ.ಶಾ-1,/ಟೆಂಡರ್/2025-26/1489 ದಿನಾಂಕ: **22.08.2025**

**ಕೆಪಿಪಿ-ಪ್ರೋಕ್ಯೂರಮೆಂಟ್ಸ ಟೆಂಡರ್ ಪ್ರಕಟಣೆ**

1) ಕಾಮಗಾರಿಗಳ ವಿವರ.KPP -Portal ನಲ್ಲಿ ನಮೂದಿಸಿದಂತೆ. 2) ಕಾಮಗಾರಿಗಳ ಅಂದಾಜು ಮೊತ್ತ. KPP -Portal ನಲ್ಲಿ ನಮೂದಿಸಿದಂತೆ. 3) ಗುತ್ತಿಗೆದಾರರ ಅರ್ಹತೆ ವಿವರ. KPP -Portal ನಲ್ಲಿ ನಮೂದಿಸಿದಂತೆ 4) ಕಾಮಗಾರಿಗಳ ಟೆಂಡರ ಮೊತ್ತದ ವಿವರ.KPP -Portal ನಲ್ಲಿ ನಮೂದಿಸಿದಂತೆ, 5) ಟೆಂಡರ್ ಅರ್ಜಿಯ ಬೆಲೆ ಮತ್ತು ಇ.ಎಂ.ಡಿ. ಮೊತ್ತದ ವಿವರ.KPP -Portal ನಲ್ಲಿ ನಮೂದಿಸಿದಂತೆ. 6) ಟೆಂಡರ ಬಗ್ಗೆ ಮಾಹಿತಿ ಹಾಗೂ ಕ್ಲಾರಿಫಿಕೇಶನ್ ಕೊನೆಯ ದಿನಾಂಕ: ಕೆ.ಡಬ್ಲೂ -1 ಮಾತ್ರ **29-08-2025 ರಂದು 17.00 ಗಂಟೆವರೆಗೆ,** 8) ಟೆಂಡರ ಸ್ವೀಕರಿಸುವ ಕೊನೆಯ ದಿನಾಂಕ ಕೆ.ಡಬ್ಲೂ -1 ಮಾತ್ರ : **01-09-2025 ರಂದು 16.00 ಗಂಟೆಗೆ ಸಾದ್ಯವಾದಲ್ಲಿ,** 9) ಟೆಂಡರ ತಾಂತ್ರಿಕ ಬಿಡ್ ತೆರೆಯುವ ದಿನಾಂಕ ಕೆ.ಡಬ್ಲೂ -1 ಮಾತ್ರ :**03-09-2025 ರಂದು 11.00 ಗಂಟೆಗೆ ಸಾದ್ಯವಾದಲ್ಲಿ,** 10) ಟೆಂಡರ ಆರ್ಥಿಕ ಬಿಡ್ ತೆರೆಯುವ ದಿನಾಂಕ. ಕೆ.ಡಬ್ಲೂ -1 ಮಾತ್ರ **05-09-2025 ರಂದು 11.00 ಗಂಟೆಗೆ ಸಾದ್ಯವಾದಲ್ಲಿ,** 11) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ, ಕಛೇರಿ ವಿಳಾಸ, ದೂರವಾಣಿ ಸಂಖ್ಯೆ. ಕಾರ್ಯನಿರ್ವಾಹಕ ಇಂಜಿನೀಯರರು ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ಇಲಾಖೆ.ವಿಭಾಗ, ಬೀದರ. ದೂರವಾಣಿ ಸಂ: 08482 232080, 12) ಅಂತರ್ಜಾಲ ತಾಣದ ವಿಳಾಸ.KPP portal https://kppp.karnataka.gov.in

**ಸಹಿ/- ಕಾರ್ಯ ನಿರ್ವಾಹಕ ಅಭಿಯಂತರರು,**
**ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ವಿಭಾಗ, ಬೀದರ.**

ವಾ.ಸಾ.ಸಂ.ಇ/ಬೀದರ/152/ಕೆ.ಎಸ್.ಎಂ.ಸಿ.&ಎ/2025-26

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.